ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 163 ಸಂಚಿಕೆ- 163 | PAGE-8 ಪುಟ-8 | ಶುಕ್ರವಾರ 08.08.2025 | RS.2/- ಬೆಲೆ 2/-

# ಮತಗಳ್ಳತನ ಆರೋಪ: ಅಫಿಡವಿಟ್ ನೊಂದಿಗೆ ದಾಖಲೆ ಸಲ್ಲಿಸಲು ರಾಹುಲ್ ಗಾಂಧಿಗೆ ಆಯೋಗ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.7: ಕರ್ನಾಟಕದಲ್ಲಿ ಲೋಕಸಭೆ ಚುನಾವಣೆಯಲ್ಲಿ "ಮತಗಳ್ಳತನ" ನಡೆದಿದೆ ಎಂದು ಗಂಭೀರ ಆರೋಪ ಮಾಡಿ, ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು ಬಿಡುಗಡೆ ಮಾಡಿದ ಲೋಕಸಭೆ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ, ಸಹಿ ಮಾಡಿದ ಅಫಿಡವಿಟ್ ನೊಂದಿಗೆ ದಾಖಲೆಗಳನ್ನು ಚುನಾವಣಾ ಆಯೋಗಕ್ಕೆ ಸಲ್ಲಿಸುವಂತೆ ಕರ್ನಾಟಕದ ಮುಖ್ಯ ಚುನಾವಣಾಧಿಕಾರಿ ಗುರುವಾರ ಕಾಂಗ್ರೆಸ್ ನಾಯಕನಿಗೆ ಸೂಚಿಸಿದ್ದಾರೆ.

ಇಂದು ದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮತಗಳ್ಳತನದ ಬಗ್ಗೆ ದಾಖಲೆ ಬಿಡುಗಡೆ ಮಾಡಿದ ನಂತರ ರಾಹುಲ್ ಗಾಂಧಿಯವರಿಗೆ ಪತ್ರ ಬರೆದಿರುವ ರಾಜ್ಯ ಚುನಾವಣಾ ಅಧಿಕಾರಿ, ರಾಷ್ಟ್ರರಾಜಧಾನಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ, "ನೀವು ಅನರ್ಹ ಮತದಾರರ ಸೇರ್ಪಡೆ ಮತ್ತು ಅರ್ಹ ಮತದಾರರನ್ನು ಮತದಾರರ ಪಟ್ಟಿಯಿಂದ ತೆಗೆದು ಹಾಕಿರುವ ಬಗ್ಗೆ ಉಲ್ಲೇಖಿಸಿದ್ದೀರಿ. ಆ ಕುರಿತ ದಾಖಲೆಗಳನ್ನು ಚುನಾವಣಾ ಆಯೋಗದೊಂದಿಗೆ ಹಂಚಿಕೊಳ್ಳಿ" ಎಂದು ಹೇಳಿದ್ದಾರೆ.



"1960 ರ ಮತದಾರರ ನೋಂದಣಿ ನಿಯಮಗಳ ನಿಯಮ 20(3) (ಭ) ಅಡಿಯಲ್ಲಿ ಲಗತ್ತಿಸಲಾದ ಸಾಕ್ಷ್ಯಾಧಾರಿತ ಪ್ರಮಾಣಪತ್ರಕ್ಕೆ ಸಹಿ ಹಾಕಿದ ದಾಖಲೆಗಳನ್ನು ಸಲ್ಲಿಸಿ. ಇದರಿಂದ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬಹುದು" ಎಂದು ಮುಖ್ಯ ಚುನಾವಣಾಧಿಕಾರಿ ಅನ್ಬು ಕುಮಾರ್ ಅವರು ಪತ್ರದಲ್ಲಿ ತಿಳಿಸಿದ್ದಾರೆ. ನೀವು ಸಲ್ಲಿಸುವ ಪ್ರಮಾಣ ಪತ್ರದಲ್ಲಿ ಅಕ್ರಮವಾಗಿ ಸೇರಿಸಲಾಗಿರುವ ಅಥವಾ ಅಳಿಸಲಾಗಿರುವ ಮತದಾರರ ಹೆಸರು, ಚುನಾವಣಾ ಐಡಿ ನಂಬರ್ ಮತ್ತು ಮತದಾರರ ಪಟ್ಟಿಯ ಸೀರಿಯಲ್ ನಂಬರ್‌ನಂತಹ ವಿವರಗಳನ್ನು ಒಳಗೊಂಡಿರಬೇಕು. ಈ ಮಾಹಿತಿಯನ್ನು ಒದಗಿಸಿದರೆ ಮಾತ್ರ ಮುಂದಿನ ಕಾನೂನಾತ್ಮಕ ಕ್ರಮ ಕೈಗೊಳ್ಳಲು ಸಾಧ್ಯವಾಗುತ್ತದೆ ಎಂದು ಅವರು ತಿಳಿಸಿದ್ದಾರೆ. ಇದರ ಜೊತೆಗೆ, ತಪ್ಪು ಅಥವಾ ಆಧಾರರಹಿತ ಮಾಹಿತಿಯನ್ನು ಒದಗಿಸಿದರೆ, ಸೆಕ್ಷನ್ 31 ಆರ್‌ಪಿ ಆಕ್ಟ್ 1950 ಮತ್ತು ಸೆಕ್ಷನ್ 227 ಭಾರತೀಯ ನ್ಯಾಯ ಸಂಹಿತೆ ಅಡಿಯಲ್ಲಿ ಕಠಿಣ ಶಿಕ್ಷೆಗೆ ಗುರಿಯಾಗಬಹುದು ಎಂದು ಎಚ್ಚರಿಕೆ ನೀಡಿದ್ದಾರೆ. ಲೋಕಸಭೆಯ ವಿರೋಧ ಪಕ್ಷದ ನಾಯಕ ಹೇಳುವಂತೆ, ಕರ್ನಾಟಕದ ಒಂದು ಕ್ಷೇತ್ರದಲ್ಲಿ 1,00,250 ಮತಗಳ "ವೋಟ್ ಚೋರಿ" ಆಗಿದೆ, ಒಂದು ವಿಧಾನಸಭಾ ಕ್ಷೇತ್ರದಲ್ಲಿ 11,965 ನಕಲಿ ಮತದಾರರಿದ್ದಾರೆ.

ಮಹದೇವಪುರದಲ್ಲಿ ನಕಲಿ ವಿಳಾಸಗಳನ್ನು ಹೊಂದಿರುವ '40,009' ಮತದಾರರಿದ್ದಾರೆ. 'ಮನೆ ಸಂಖ್ಯೆ 0' ಎಂಬ ಅಡ್ರೆಸ್ ಇರುವ ಹಲವರು ನೋಂದಾಯಿಸಿಕೊಂಡಿದ್ದಾರೆ. ಒಂದು ಪ್ರಕರಣದಲ್ಲಿ, 46 ಮತದಾರರು ಒಂದೇ ರೂಮಿನ ವಿಳಾಸದ ಅಡಿಯಲ್ಲಿ ನೋಂದಾಯಿಸಲ್ಪಟ್ಟಿದ್ದಾರೆ.

# ಬಸ್ ಅಡ್ಡಗಟ್ಟಿ ಚಾಲಕನ ಮೇಲೆ ಹಲ್ಲೆಗೈದ ಪೊಲೀಸರ ಮೇಲೆ ಎಫ್‌ಐಆರ್

ಮಲ್ಲಮ್ಮ ನುಡಿ ವಾರ್ತೆ

ದಾವಣಗೆರೆ:ಅ.7:ಬಸ್ ಅಡ್ಡಗಟ್ಟಿ ಚಾಲಕನ ಮೇಲೆ ಹಲ್ಲೆಗೈದ ಇಬ್ಬರೂ ಪೊಲೀಸರ ಮೇಲೆ ಎಫ್ ಐ ಆರ್ ದಾಖಲಿಸಲಾಗಿದೆ.

ಕೆಎಸ್‌ಆರ್‌ಟಿಸಿ ನಿಗಮ ವ್ಯಾಪ್ತಿಯ ದಾವಣಗೇರೆ ವಿಭಾಗದ ರೂಟ್ ಸಂಖ್ಯೆ 87 ರ ದಾವಣಗೇರೆ–ಬಳ್ಳಾರಿ ಬಸ್ ಕೂಡ್ಲಿಗಿ ಬಳಿಯ ಗಜಾಪೂರದ ಬಳಿ ತೆರಳುವಾಗ ಎದುರುಗಡೆಯಿಂದ ವೇಗವಾಗಿ ಕಾರು ಬರುವುದನ್ನು ಗಮನಿಸಿದ ಬಸ್ ಚಾಲಕ ಎಡಗಡೆಗೆ ವಾಹನ ತಿರುಗಿಸಿದಾಗ ಬೈಕ್‌ಗೆ ಬಸ್




ತಗಲಿತ್ತು. ಇದರಿಂದ ಕೋಪಗೊಂಡ ಬೈಕ್ ಸವಾರರು ಬಸ್ ಅಡ್ಡಗಟ್ಟಿ ಚಾಲಕನ ಮೇಲೆ ಹಲ್ಲೆ ನಡೆಸಿದ್ದರು. ಹಲ್ಲೆಯ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆದ ಪರಿಣಾಮ ಚಾಲಕನ ಮೇಲೆ ಹಲ್ಲೆ ನಡೆಸಿದವರು ಪೊಲೀಸರೆಂದು ತಿಳಿದುಬಂದ ಹಿನ್ನೆಲೆಯಲ್ಲಿ ಸಾರಿಗೆ ಸಚಿವ ರಾಮಲಿಂಗಾರೆಡ್ಡಿಯವರ ಗಮನಕ್ಕೆ ವಿಡಿಯೋ ಬಂದ ನಂತರ ಅವರು ಚಾಲಕನ ಮೇಲೆ ಹಲ್ಲೆ ಮಾಡಿದವರ ವಿರುದ್ಧ ಕ್ರಮಕ್ಕೆ ಸೂಚಿಸಿದ್ದರು. ಸಾರಿಗೆ ಸಚಿವರ ಸೂಚನೆ ಮೇರೆಗೆ ವಿಜಯನಗರ ಪೊಲೀಸವರಿಷ್ಠಾಧಿಕಾರಿಗಳಿಗೆ ಈ ಬಗ್ಗೆ ಮಾತನಾಡಿದ ನಿಗಮದ ವ್ಯವಸ್ಥಾಪಕ ನಿರ್ದೇಶಕರು ಇಬ್ಬರು ಪೊಲೀಸರ ವಿರುದ್ಧ ಎಫ್ ಐಆರ್ ದಾಖಲು ಮಾಡಿಸಿ, ಸಂಸ್ಥೆಯ ಸಿಬ್ಬಂದಿಯ ವಿರುದ್ಧ ಹಲ್ಲೆಯಾದರೆ ತಾವು ಸೂಕ್ತ ಕ್ರಮ ತೆಗೆದುಕೊಳ್ಳುತ್ತೇವೆಂಬ ಸಂದೇಶ ನೀಡಿದ್ದಾರೆ.

# ಕಾಳುಕಡಿ ಸೇರಿ ಮನೆ ವಸ್ತುಗಳು ನೀರಲ್ಲಿ ಬೇವೂರಿನಲ್ಲಿ ಭಾರೀ ಮಳೆ ಮನೆಗಳಿಗೆ ನುಗ್ಗಿದ ನೀರು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.7–ಬುಧವಾರ ರಾತ್ರಿ ಸುರಿದ ಮಳೆಯಿಂದಾಗಿ ತಾಲೂಕಿನ ಬೇವೂರ ಗ್ರಾಮದ ಕೆರೆ ಬಳಿಯ ನೂರಾರು ಮನೆಗಳಿಗೆ ನೀರು ನುಗ್ಗಿ ನಿವಾಸಿಗಳ ಜೀವನ ಅಸ್ತವ್ಯಸ್ತವಾಗಿದೆ.

ಗ್ರಾಮದ ಕೆರೆಯ ಬಳಿ 160 ಕ್ಕೂ ಹೆಚ್ಚು ಮನೆಗಳಿದ್ದು, ಬುಧವಾರ ರಾತ್ರಿ ಸುರಿದ ಭಾರೀ ಪ್ರಮಾಣದ ಮಳೆಯಿಂದಾಗಿ ಅಪಾರ ಪ್ರಮಾಣದ ನೀರು ಹರಿದು ಮನೆಗಳತ್ತ ನುಗ್ಗಿದೆ. ನೀರು ರಭಸದಿಂದ ಹರಿದು ಮನೆಯೊಳಗೆ ಬರುತ್ತಿದ್ದಂತೆ ಜನತೆ ಕಂಗಾಲಾಗಿದ್ದು, ಅಧಿಕ ಪ್ರಮಾಣದಲ್ಲಿ



ನೀರು ಒಳಬಂದಿದ್ದರಿಂದ ಮನೆಗಳಲ್ಲಿನ ಜೋಳ, ಗೋಧಿ, ಬಟ್ಟೆ ಮತ್ತಿತರ ವಸ್ತುಗಳು ನೀರುಪಾಲಾಗಿವೆ.

ಹೊಲಗಳಿಂದ ಹರಿದು ಬಂದ ಅಪಾರ ಪ್ರಮಾಣದ ನೀರು ಕೆ–ರೆಗೆ ಹೋಗಿದ್ದರೂ ನೀರಿನ ಒತ್ತಡ ಹೆಚ್ಚಾಗಿ ಮನೆಗಳತ್ತ ತಿರುಗಿ ಆವಾಂತರ ಸೃಷ್ಠಿಯಾಗಿದೆ. ನೀರು ಹೊಕ್ಕಿದ್ದರಿಂದಾಗಿ ಕುಟುಂಬಗಳು ರಾತ್ರಿಯಿಡಿ ನಿದ್ರೆಯಿಲ್ಲದೇ ನೀರನ್ನು ಹೊರಹಾಕುವುದಕ್ಕೆ ಪರದಾಡಿದರು.

(2ನೇ ಪುಟ ನೋಡಿ)

# ನಾಟಿ ಔಷಧಿ ಸೇವಿಸಿ ನಾಲ್ವರು ಸಾವು: ನಕಲಿ ವೈದ್ಯ ಅರೆಸ್ಟ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.7: ಕುಡಿತದ ಚಟ ಬಿಡಿಸಲು ನಕಲಿ ವೈದ್ಯನಿಂದ ಚಿಕಿತ್ಸೆ ಪಡೆದು ನಾಲ್ವರು ಮೃತಪಟ್ಟಿರುವ ಘಟನೆ ಕಲಬುರಗಿ ಜಿಲ್ಲೆ ಸೇಡಂ ಪಟ್ಟಣದಲ್ಲಿ ನಡೆದಿದೆ. ಲಕ್ಷ್ಮಿ, ಗಣೇಶ್ ರಾಠೋಡ್, ನಾಗೇಶ್ ಹಾಗೂ ಮನೋಹರ್ ಮೃತ ದುರ್ದೈವಿಗಳು. ನಕಲಿ ವೈದ್ಯ ಸಾಯಪ್ಪ ಮುತ್ಯಾ ಅಲಿಯಾಸ್ ಫಕೀರಪ್ಪ ಬಂಧಿತ ಆರೋಪಿ ಎಂದು ಗುರುತಿಸಲಾಗಿದೆ. ಮದ್ಯವ್ಯಸನಿಗಳಾಗಿದ್ದ ಲಕ್ಷ್ಮಿ, ಗಣೇಶ್ ರಾಠೋಡ್, ನಾಗೇಶ್ ಹಾಗೂ ಮನೋಹರ್ ತಮ್ಮ ಕುಟುಂಬಸ್ಥರೊಂದಿಗೆ ಸೇಡಂ ತಾಲೂಕಿನ ಇಮಡಾಪುರ ಗ್ರಾಮಕ್ಕೆ ಬಂದಿದ್ದರು. ಇಮಡಾಪುರ ಗ್ರಾಮದ ಸಾಯಪ್ಪ ಮುತ್ಯಾ ಅಲಿಯಾಸ್ ಫಕೀರಪ್ಪ ಎಂಬ ವ್ಯಕ್ತಿ ಮದ್ಯವ್ಯಸನಿಗಳಿಗೆ ಕುಡಿತದ ಚಟ ಬಿಡಿಸೋಕೆ ನಾಟಿ ಔಷಧಿ ನೀಡುತ್ತಿದ್ದ. ಕಳೆದ ಹಲವು ವರ್ಷಗಳಿಂದ ನಾಟಿ ಔಷಧಿ ನೀಡುತ್ತಾ ಫೇಮಸ್ ಆಗಿದ್ದ. ಹೀಗಾಗಿ, ಆ. 6ರಂದು ಶಹಬಾದ ಪಟ್ಟಣದ

(2ನೇ ಪುಟ ನೋಡಿ)

# ಸಂಪುಟ ಸಭೆ: ದೇವದಾಸಿ ಪದ್ಧತಿ ತಡೆ ಸೇರಿ17 ಬಿಲ್‌ಗೆ ಅನುಮೋದನೆ

ಮಲ್ಲಮ್ಮನುಡಿವಾರ್ತೆ ಬೆಂಗಳೂರು:ಅ.7: ದೇವದಾಸಿ ಮಹಿಳೆಯರನ್ನು ಎಲ್ಲಾ ರೀತಿಯ ಶೋಷಣೆಯಿಂದ ಮತ್ತು ಅವರ ಮಕ್ಕಳನ್ನು ಸಬಲೀಕರಣದ ಮೂಲಕ ಸಾಮಾಜಿಕ ನಿಷೇಧಗಳಿಂದ ಮುಕ್ತಗೊಳಿಸುವ ಉದ್ದೇಶದ ಮಸೂದೆ ಸೇರಿದಂತೆ 17 ಮಸೂದೆಗಳಿಗೆ ರಾಜ್ಯ ಸಚಿವ ಸಂಪುಟ ಗುರುವಾರ ಅನುಮೋದನೆ ನೀಡಿದೆ. ಈ ಎಲ್ಲ ವಿಧೇಯಕಗಳನ್ನು ಆಗಸ್ಟ್ 11ರಿಂದ ನಡೆಯಲಿರುವ ಅಧಿವೇಶನದಲ್ಲಿ ಮಂಡಿಸಿ, ಅಂಗೀಕರಿಸುವ ಸಾಧ್ಯತೆ ಇದೆ."ಕರ್ನಾಟಕ ದೇವದಾಸಿ (ತಡೆ, ನಿಷೇಧ, ಪರಿಹಾರ ಮತ್ತು ಪುನರ್ವಸತಿ) ಮಸೂದೆ– 2025 ಅನ್ನು ಸಂಪುಟ ಅನುಮೋದಿಸಿದೆ ಮತ್ತು ಶೋಷಣೆಗೆ ಒಳಗಾದ ದೇವದಾಸಿ ಮಹಿಳೆಯರನ್ನು ಎಲ್ಲಾ ರೀತಿಯ ಶೋಷಣೆಯಿಂದ ವಿಮೋಚನೆಗೊಳಿಸುವುದು, ಅವರ ಮಕ್ಕಳನ್ನು ಸಬಲೀಕರಣದ ಮೂಲಕ ಸಾಮಾಜಿಕ ನಿಷೇಧಗಳಿಂದ ಮುಕ್ತಗೊಳಿಸುವುದು ಈ ಮಸೂದೆಯ ಪ್ರಮುಖ ಉದ್ದೇಶವಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್. ಕೆ. ಪಾಟೀಲ್ ಸುದ್ದಿಗಾರರಿಗೆ ತಿಳಿಸಿದರು.

ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ದೇವದಾಸಿಯರ ಮಕ್ಕಳಿಗಾಗಿ ಅರ್ಜಿ ನಮೂನೆಗಳು

(2ನೇ ಪುಟ ನೋಡಿ)

# ಅ. 10ಕ್ಕೆ ದಿ. ಬಸವರಾಜ ಪಾಟೀಲರ 9ನೇ ಪುಣ್ಯಸ್ಮರಣೆ

ಮಲ್ಲಮ್ಮನುಡಿವಾರ್ತೆ ಹುಮನಾಬಾದ್: ಅ.7:ಬೀದರ್ ಜಿಲ್ಲೆಯ ಸಮಗ್ರ ಅಭಿವೃದ್ಧಿಯ ಹರಿಕಾರರು, ಮಾಜಿ ಸಚಿವ ಲಿಂಗೈಕ್ಯ ಬಸವರಾಜ ಎಚ್ ಪಾಟೀಲ ಅವರ 9ನೇ ಪುಣ್ಯಸ್ಮರಣೆ ಅಗಸ್ಟ್ 10 ರಂದು ಆಚರಿಸಲಾಗುತ್ತಿದೆ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಫ್ಸರ್‌ಮಿಯ್ಯ, ಗ್ರಾಮೀಣ ಅಧ್ಯಕ್ಷ ಓಂಕಾರ ತುಂಬಾ ಜಂಟಿಯಾಗಿ ತಿಳಿಸಿದ್ದಾರೆ, ಪಟ್ಟಣದಲ್ಲಿರುವ ಮಾಜಿ ಸಚಿವ ರಾಜಶೇಖರ್ ಪಾಟೀಲ ಅವರ ಗೃಹ ಕಚೇರಿಯಲ್ಲಿ ಗುರುವಾರ ಕರೆದ ಪತ್ರಿಕಾ ಗೋಷ್ಠಿಯಲ್ಲಿ ಅವರು ಮಾತನಾಡಿದರು. ಅಂದು ಬೆಳಿಗ್ಗೆ 6 ಗಂಟೆಗೆ ಪಾಟೀಲ ಪರಿವಾರದಿಂದ ದಿ.ಬಸವರಾಜ ಪಾಟೀಲ ಅವರ ಸಮಾಧಿಗೆ ಪೂಜೆ ಸಲ್ಲಿಸುವರು ನಂತರ



ಇಲ್ಲಿನ ದಿ. ಬಸವರಾಜ ಪಾಟೀಲ ಕಲ್ಯಾಣ ಮಂಟಪದಲ್ಲಿ ಬೆಳಿಗ್ಗೆ 10.30 ರಂದು ಪುಣ್ಯಸ್ಮರಣೋತ್ಸವ ಕಾರ್ಯಕ್ರಮ ನಡೆಯಲಿದೆ ಎಂದು ಮಾಹಿತಿ ನೀಡಿದರು. ಪುಣ್ಯ ಸ್ಮರಣೆಯಲ್ಲಿ ಮಾಜಿ ಸಚಿವ ರಾಜಶೇಖರ್ ಪಾಟೀಲ, ವಿಧಾನ ಪರಿಷತ ಸದಸ್ಯರಾದ ಚಂದ್ರಶೇಖರ್ ಪಾಟೀಲ, ಭೀಮರಾವ್ ಪಾಟೀಲ, ಡಿಸಿಸಿ ಬ್ಯಾಂಕ ಉಪಾಧ್ಯಕ್ಷ ಅಭಿಷೇಕ್ ಪಾಟೀಲ ಅವರ ನೇತೃತ್ವದಲ್ಲಿ ಜಿಲ್ಲೆಯ ವಿವಿಧ ಮಠಾಧೀಶರು, ರಾಜಕೀಯ ಗಣ್ಯರು, ಅಭಿಮಾನಿಗಳು ಆಗಮಿಸಲಿದ್ದು, ಕಾರ್ಯಕ್ರಮದ ಯಶಸ್ವಿಗಾಗಿ ಸಹಕರಿಸಬೇಕು, ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಫ್ಸರ್‌ಮಿಯ್ಯ, ಗ್ರಾಮೀಣ ಅಧ್ಯಕ್ಷ ಓಂಕಾರ ತುಂಬಾ, ಪಿಎಲ್‌ಡಿ ಬ್ಯಾಂಕ ಅಧ್ಯಕ್ಷ ಮಲ್ಲಿಕಾರ್ಜುನ ಮಾಶೆಟ್ಟಿ ಅವರು ಜಂಟಿಯಾಗಿ ಮನವಿ ಮಾಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಲಕ್ಷ್ಮಣರಾವ ಬುಳ್ಳಾ, ಕಾಂಗ್ರೆಸ ಯುವ ಅಧ್ಯಕ್ಷ ಉಮೇಶ ಜಂಡಮಗಿ ಇದ್ದರು.

# ಪ್ರದೇಶದ ತಲಾ ಆದಾಯ ವೃದ್ಧಿಗೆ ದೂರದೃಷ್ಟಿ ಯೋಜನೆ ರೂಪಿಸಬೇಕು:ಪ್ರೊ. ಎಂ.ಗೋವಿಂದರಾವ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.7: ಕಲ್ಯಾಣ ಕರ್ನಾಟಕ ಪ್ರದೇಶದ ಕಟ್ಟ ಕಡೆಯ ವ್ಯಕ್ತಿಯ ತಲಾ ಆದಾಯ ಮತ್ತು ಮಾನವ ಅಭಿವೃದ್ಧಿ ಸೂಚ್ಯಂಕ ಹೆಚ್ಚಿಸುವ ಗುರಿಯೊಂದಿಗೆ ಪ್ರದೇಶದ ಸರ್ವಾಂಗೀಣ ಅಭಿವೃದ್ಧಿಗೆ ಮಂಡಳಿಯು ಹತ್ತು ಅಥವಾ ಪಂಚವಾರ್ಷಿಕ ದೂರದೃಷ್ಟಿ ಯೋಜನೆಗಳನ್ನು ಹಾಕಿಕೊಳ್ಳಬೇಕು ಎಂದು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಅಧ್ಯಕ್ಷ ಪ್ರೊ.ಎಂ.ಗೋವಿಂದರಾವ ಹೇಳಿದರು.

ಕಲಬುರಗಿ ನಗರದ ಕೆ.ಕೆ.ಆರ್.ಡಿ.ಬಿ ಸಭಾಂಗಣದಲ್ಲಿ ಜರುಗಿದ ಕೆ.ಕೆ.ಆರ್.ಡಿ.ಬಿ. ಮಂಡಳಿ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಮುಂದಿನ ಹತ್ತು ಅಥವಾ ಐದು ವರ್ಷಗಳಲ್ಲಿ ಆದ್ಯತಾ ಕ್ಷೇತ್ರದಲ್ಲಿ ಸುಧಾರಿಸುತ್ತೇವೆ ಎಂಬ ಗುರಿಯೊಂದಿಗೆ ಮುಂದಡಿ ಇಡಬೇಕು ಎಂದರು.

ಡಾ.ಡಿ.ಎಂ.ನಂಜುಂಡಪ್ಪ ವರದಿಯಂತೆ ಯಾವೆಲ್ಲ ವಲಯದಲ್ಲಿ ಈ ಭಾಗ ಹಿಂದುಳಿದಿದೆಯೋ ಅಲ್ಲಿ ಕೊರತೆಯನ್ನು ನೀಗಿಸುವ ಕೆಲಸ ಮಂಡಳಿಯಿಂದಾಗಬೇಕು. ಈ ನಿಟ್ಟಿನಲ್ಲಿ ಕ್ರಿಯಾ ಯೋಜನೆ ರೂಪಿಸಿ ಸರ್ಕಾರಕ್ಕೆ ಸಲಹೆ ನೀಡಬೇಕು. ಮಂಡಳಿ ಸರ್ಕಾರದಂತೆ ಎಲ್ಲದಕ್ಕೂ ಅನುದಾನ ನೀಡದೆ ಆದ್ಯತಾ ವಲಯದ ಕಡೆ ಹೆಚ್ಚು ಗಮನ ಹರಿಸಬೇಕು ಎಂದರು.

ಪ್ರದೇಶದ ಹಿಂದುಳಿವಿಕೆ ಹೋಗಲಾಡಿಸಲು ಸಂವಿಧಾನಕ್ಕೆ ತಿದ್ದುಪಡಿ ತಂದು 371ಜೆ ಅನ್ವಯ ಕೆ.ಕೆ.ಆರ್.ಡಿ.ಬಿ. ಮಂಡಳಿ ಸ್ಥಾಪಿಸಿದ್ದು, ಮಂಡಳಿಯಿಂದ ನಡೆಯುವ ಮೂಲಸೌಕರ್ಯ ಕಾಮಗಾರಿಗಳ ಪ್ರಗತಿ ಬಗ್ಗೆ ಪ್ರತಿನಿತ್ಯ ಮೇಲುಸ್ತುವಾರಿ ವಹಿಸುವುದು ಅವಶ್ಯಕವಾಗಿದೆ. ಹಣ ಖರ್ಚಾದರೆ ಸಾಲದು, ಜನರಲ್ಲಿ ಅದರಿಂದ ಬದಲಾವಣೆ ಕಾಣಬೇಕು. ಕಣ್ಣಿಗೆ ಕಾಣುವಂತೆ ಅಭಿವೃದ್ಧಿ ಕೆಲಸಗಳಾಗಬೇಕು ಎಂದರು.

ಬೇರೆ ಪ್ರದೇಶಕ್ಕೆ ಹೋಲಿಸಿದಲ್ಲಿ ಇಷ್ಟೊಂದು ಪ್ರಮಾಣದಲ್ಲಿ ಯಾವುದೇ ಮಂಡಳಿಗೆ ಅನುದಾನ ಹರಿದು ಬರುತ್ತಿಲ್ಲ. ವಿಶೇಷ ಮೀಸಲಾತಿ ಸೌಲಭ್ಯದಿಂದ ಕೆ.ಕೆ.ಆರ್.ಡಿ.ಬಿ.ಮಂಡಳಿಗೆ ಸಾವಿರಾರು ಕೋಟಿ ರೂ. ಹಣ ಬಿಡುಗಡೆಯಾಗುತ್ತಿದೆ. ಇದನ್ನು ಸಮರ್ಪಕವಾಗಿ ಬಳಕೆಯಾಗಬೇಕು ಎಂದು ಅವರು ಒತ್ತಿ ಹೇಳಿದರು.

ಕೆ.ಕೆ.ಅರ್.ಡಿ.ಬಿ. ಅಧ್ಯಕ್ಷ ಡಾ.ಅಜಯ್ ಸಿಂಗ್ ಮಾತನಾಡಿ, ಕಳೆದ 2 ವರ್ಷದಿಂದ ಮಂಡಳಿಯು ಆರೋಗ್ಯ, ಶಿಕ್ಷಣ, ಉದ್ಯೋಗ, ಅರಣ್ಯ ಅವಿಷ್ಕಾರದಂತಹ ಪರಿಣಾಮಕಾರಿ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ. ಕಳೆದ ಸೆಪ್ಟೆಂಬರ್‌ನಲ್ಲಿ ಕಲಬುರಗಿಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ 857 ಕೋಟಿ ರೂ.

(2ನೇ ಪುಟ ನೋಡಿ)

# ಯಾವುದೇ ಕಾರಣಕ್ಕೂ ರಾಜಿಯಿಲ್ಲ, ನನಗೆ ರೈತರ ಹಿತವೇ ಮುಖ್ಯ: ಮೋದಿ

ನವದೆಹಲಿ:ಅ.7: ರೈತರು ಮತ್ತು ಮೀನುಗಾರರಿಗೆ ಸಮಸ್ಯೆಯಾಗುವ ಯಾವುದೇ ಹಿತಾಸಕ್ತಿಯ ಜೊತೆ ಭಾರತ ಎಂದಿಗೂ ರಾಜಿ ಮಾಡಿಕೊಳ್ಳುವುದಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಸ್ಪಷ್ಟವಾಗಿ ಹೇಳಿದ್ದಾರೆ.

ಡೊನಾಲ್ಡ್ ಟ್ರಂಪ್ ಭಾರತದ ವಿರುದ್ಧ ಸುಂಕ ಸಮರವನ್ನು ಆರಂಭಿಸಿದ ಮರುದಿನವೇ ನರೇಂದ್ರ ಮೋದಿ ಈ ಹೇಳಿಕೆ ನೀಡುವ ಮೂಲಕ ಅಮೇರಿಕಕ್ಕೆ ಬಲವಾದ ಸಂದೇಶ ಕಳುಹಿಸಿದ್ದಾರೆ. ಸರ್ಕಾರದ ಈ ನಿರ್ಧಾರದಿಂದ ದುಬಾರಿ ಬೆಲೆ ತೆರಬೇಕಾಗುತ್ತದೆ ಎನ್ನುವುದು ತಿಳಿದಿದ್ದರೂ ರೈತರಿಗಾಗಿ ನಾನು ಯಾವುದೇ ಕಾರಣಕ್ಕೂ ರಾಜಿಯಾಗುವುದಿಲ್ಲ ಎಂದು ಹೇಳಿದ್ದಾರೆ. ದೆಹಲಿಯಲ್ಲಿ ನಡೆದ ಎಂ.ಎಸ್. ಸ್ವಾಮಿನಾಥನ್ ಶತಮಾನೋತ್ಸವ ಅಂತರರಾಷ್ಟ್ರೀಯ ಸಮ್ಮೇಳದಲ್ಲಿ ಮಾತನಾಡಿದ ಅವರು, ರೈತರ ಹಿತಾಸಕ್ತಿ ನಮ್ಮ ಪ್ರಮುಖ ಆದ್ಯತೆಯಾಗಿದೆ. ಭಾರತ ತನ್ನ ರೈತರು, ಜಾನುವಾರು ಮಾಲೀಕರು ಮತ್ತು ಮೀನುಗಾರರ ಹಿತಾಸಕ್ತಿಗಳೊಂದಿಗೆ ಎಂದಿಗೂ ರಾಜಿ ಮಾಡಿಕೊಳ್ಳುವುದಿಲ್ಲ. ಸರ್ಕಾರದ ನಿರ್ಧಾರದಿಂದ ಭಾರೀ ಬೆಲೆ



ತೆರಬೇಕಾಗುತ್ತದೆ ಎನ್ನುವುದು ನನಗೆ ತಿಳಿದಿದೆ. ಇದಕ್ಕೆ ನಾನು ಸಿದ್ಧನಿದ್ದೇನೆ. ದೇಶದ ರೈತರು, ಮೀನುಗಾರರು ಮತ್ತು ಜಾನುವಾರು ಮಾಲೀಕರ ಹಿತದೃಷ್ಟಿಯಿಂದ ಭಾರತ ಎಲ್ಲದ್ದಕ್ಕೂ ಸಿದ್ಧವಾಗಿದೆ ಎಂದು ತಿಳಿಸಿದರು.

ಜುಲೈ 20 ರಂದು ಅಮೇರಿಕ ಭಾರತದಿಂದ ಆಮದಾಗುವ ವಸ್ತುಗಳ ಮೇಲೆ 25% ಸುಂಕವನ್ನು ವಿಧಿಸಿತ್ತು. ಈಗ ರಷ್ಯಾದಿಂದ ಕಚ್ಚಾ ತೈಲವನ್ನು ಆಮದು ಮಾಡುತ್ತಿರುವುದಕ್ಕೆ ಭಾರತದಿಂದ ಆಮದಾಗುವ ವಸ್ತುಗಳ ಮೇಲೆ ಮತ್ತೆ 25% ಸುಂಕವನ್ನು ಡೊನಾಲ್ಡ್ ಟ್ರಂಪ್ ಹಾಕಿದ್ದಾರೆ. ಟ್ರಂಪ್ ಸುಂಕ ಸಮರ ಆರಂಭಿಸಿದ ಕೂಡಲೇ ಭಾರತ ಸೇರಿದಂತೆ 100ಕ್ಕೂ ಹೆಚ್ಚು ದೇಶಗಳ ಮೇಲೆ ತೆರಿಗೆ ಸಮರ ಆರಂಭಿಸಿದ್ದರು. ನಂತರ ಉಳಿದ ದೇಶಗಳು ವ್ಯಾಪಾರ ಸಂಬಂಧ ಮಾತುಕತೆ ನಡೆಸಲು ಆಸಕ್ತಿ ತೆ–ೂರಿದ ಬೆನ್ನಲ್ಲೇ ಅಮೇರಿಕ ಸುಂಕ ಸಮರವನ್ನು ತಡೆ ಹಿಡಿದಿತ್ತು. ಈ ಸಂದರ್ಭದಲ್ಲಿ ಭಾರತ ಅಮೇರಿಕದ ಜೊತೆ ವ್ಯಾಪಾರ ಮಾತುಕತೆ ನಡೆಸತೊಡಗಿತು.

ಬಹುತೇಕ ವಿಚಾರಗಳ ಮಧ್ಯೆ ಭಾರತ ಮತ್ತು ಅಮೇರಿಕ ಒಪ್ಪಿಗೆ ನೀಡಿದರೂ ಮಹತ್ವದ ಕೆಲ ವಿಚಾರಗಳ ಭಾರತಕ್ಕೆ ಒಪ್ಪಿಗೆ ನೀಡಿಲ್ಲ. ಮುಖ್ಯವಾಗಿ ಕೃಷಿ, ಹೈನು ಉತ್ಪನ್ನಗಳ ವಲಯ. ಮೀನುಗಾರಿಕೆ ಸಂಬಂಧಿಸಿದಂತೆ ಅಮೇರಿಕದ ಉತ್ಪನ್ನಗಳಿಗೆ ಮುಕ್ತವಾಗಿಸಲು ಕೇಂದ್ರ ಸರ್ಕಾರವು ಒಪ್ಪಿಗೆ ನೀಡಿಲ್ಲ. ಅಮೇರಿಕ ಉಕ್ಕು, ಅಲ್ಯೂಮಿನಿಯಂ ಮತ್ತು ಆಟೊಮೊಬೈಲ್ ಉತ್ಪನ್ನಗಳ ಮೇಲೆ ಹೆಚ್ಚಿನ ಸುಂಕ ವಿಧಿಸಬಾರದು ಎಂದು ಭಾರತ ಇರಿಸಿರುವ ಬೇಡಿಕೆಯನ್ನು ಒಪ್ಪಿಲ್ಲ.

ಅಮೇರಿಕದ ಡೈರಿ ಉತ್ಪನ್ನಗಳಿಗೆ ಭಾರತ ಅನುಮತಿ ನೀಡಿಲ್ಲ ಯಾಕೆ ಎನ್ನುವುದಕ್ಕೆ ಕಾರಣ ಇದೆ. ಭಾರತದಲ್ಲಿ ದನಗಳಿಗೆ ಹುಲ್ಲು, ಒಣಗಿದ ಮೇವು, ಧಾನ್ಯಗಳು, ಮತ್ತು ಪಶು ಆಹಾರವನ್ನು ನೀಡಲಾಗುತ್ತದೆ. ಆದರೆ

(2ನೇ ಪುಟ ನೋಡಿ)

ಒಂದನೇ ಪುಟದಿಂದ

## ಬೇವೂರಿನಲ್ಲಿ ಭಾರೀ ಮಳೆ ಮನೆಗಳಿಗೆ ನುಗ್ಗಿದ ನೀರು

ಗುರುವಾರ ಬೆಳಿಗ್ಗೆ ಗ್ರಾಮ ಪಂಚಾಯತಿ ಅಧ್ಯಕ್ಷರು, ಸದಸ್ಯರು, ಪಿಡಿಓ ಹಾಗೂ ಗ್ರಾಮ ಅಭಿವೃದ್ಧಿ ಅಧಿಕಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮನೆಗಳಿಗೆ ನೀರು ನುಗ್ಗಿ ತಮಗಾಗಿರುವ ತೊಂದರೆ ನಿವಾರಿಸಿ ಪರಿಹಾರ ನೀಡುವಂತೆ ನಿವಾಸಿಗಳು ಒತ್ತಾಯಿಸಿದರು. ಶಾಸಕ ಎಚ್.ವಾಯ್.ಮೇಟಿ ಅವರನ್ನು ಭೇಟಿ ಮಾಡಿ ಪರಿಸ್ಥಿತಿಯನ್ನು ಅವರ ಗಮನಕ್ಕೆ ತರುವುದಾಗಿಯೂ ಅಲ್ಲಿನ ನಿವಾಸಿಗಳು ಹೇಳಿದರು.

ವಿದ್ಯಾರ್ಥಿಗಳ ಬಟ್ಟೆ, ಪುಸ್ತಕ ನೀರಲ್ಲಿ ನೆನೆದು ಹೋಗಿರುವುದರಿಂದ ಮಕ್ಕಳು ಶಾಲೆಗಳಿಗೆ ತೆರಳಲು ತೊಂದ–ರೆಯಾಗಿದೆ. ಹಾಸಿಗೆ ಹೊದಿಕೆಗಳು ಸಹ ನೀರಲ್ಲಿ ನೆನೆದಿವೆ ಎನ್ನುವುದನ್ನು ನಿವಾಸಿಯೊಬ್ಬರು ಹೇಳಿಕೊಂಡರು.

ಸ್ಥಳಕ್ಕೆ ಗ್ರಾಪಂ ಅಧ್ಯಕ್ಷೆ ಫರೀದಾ ಗುರಗುನ್ನಿ, ಸದಸ್ಯ ತುಕಾರಾಮ ಮಾಗಿ, ಪಿಡಿಓ ಬಿ.ಬಿ.ಇಟಗಿ, ಗ್ರಾಮ ಅಭಿವೃದ್ಧಿ ಅಧಿಕಾರಿ ಸಾಬಣ್ಣ ಹಳ್ಳಿ ಮತ್ತಿತರರು ಭೇಟಿ ನೀಡಿದ್ದರು. ನಂತರ ಗ್ರಾಮ ಪಂಚಾಯತಿ ಕಚೇರಿಗೆ ಆಗಮಿಸಿದ ನಿವಾಸಿಗಳು ಅಧ್ಯಕ್ಷರು, ಸದಸ್ಯರು, ಪಿಡಿಓ ಜೊತೆ ಚರ್ಚೆ ನಡೆಸಿದರು.

## ಯೋಜನೆ ರೂಪಿಸಬೇಕು:ಪ್ರೊ. ಎಂ.ಗೋವಿಂದರಾವ

ವೆಚ್ಚದ ಆರೋಗ್ಯ ಇಲಾಖೆಯ ಕಾಮಗಾರಿಗಳಿಗೆ ಅನುಮೋದನೆ ನೀಡಿದ್ದು, ಇದರಲ್ಲಿ 300 ಕೋಟಿ ರೂ.ಕ್ಕಿಂತ ಹೆಚ್ಚಿನ ಹಣ ನೀಡಿ ಪ್ರದೇಶದ ಆರೋಗ್ಯ ಸುಧಾರಣೆಗೆ ಮಂಡಳಿ ಶ್ರಮಿಸುತ್ತಿದೆ. ಇಲ್ಲಿ ಕೈಗಾರಿಕೆ ಸ್ಥಾಪಿಸಿ ಉದ್ಯೋಗ ಸೃಷ್ಠಿ ಮಾಡಲು ಇಂಡಸ್ಟ್ರಿ ಹಬ್ ಸ್ಥಾಪಿಸಲಾಗುತ್ತಿದೆ ಎಂದರು.

ಕೆ.ಕೆ.ಆರ್.ಡಿ.ಬಿ. ಮಂಡಳಿ ಕಾರ್ಯದರ್ಶಿ ನಲಿನ್ ಅತುಲ್ ಅವರು ಪ್ರಾತ್ಯಕ್ಷಿಕೆ ಮೂಲಕ ಮಂಡಳಿಯ ಇದೂವರೆಗಿನ ಪ್ರಗತಿ ಕಾರ್ಯ ವಿವರಿಸುತ್ತಾ, ಪ್ರಸ್ತುತ 2025–26ನೇ ಸಾಲಿಗೆ 5,000 ಕೋಟಿ ರೂ. ಅನುದಾನ ಘೋಷಿಸಿದ್ದು, ಇದರಲ್ಲಿ ಶೇ.60ರಷ್ಟು ಅಂದರೆ 3,000 ಕೋಟಿ ರೂ. ಅನುದಾನ ಮೈಕ್ರೋ ಮತ್ತು ಮ್ಯಾಕ್ರೋ ಯೋಜನೆಗೆ ಮೀಸಲಿರಿಸಿದೆ. ಉಳಿದಂತೆ ಶೇ.31ರಷ್ಟು ಅನುದಾನ ರಾಜ್ಯ ಸರ್ಕಾರ ಆಯವ್ಯಯದಲ್ಲಿ ಘೋಷಿಸುವ ಕಾರ್ಯಕ್ರಮಗಳಿಗೆ ಹಂಚಿಕೆ ಪ್ರಮಾಣದಲ್ಲಿ ಮಂಡಳಿ ಅನುದಾನ ನೀಡಲಿದೆ. ಉಳಿದಂತೆ ಮಂಡಳಿ ಅಧ್ಯಕ್ಷರು, ಯೋಜನಾ ಸಚಿವರು, ಮುಖ್ಯಮಂತ್ರಿಗಳು ತಲಾ ಶೇ.2 ವಿವೇಚನಾ ನಿಧಿ, ಶೇ.2 ಪ್ರಾದೇಶಿಕ ನಿಧಿ, ಶೇ.1ರಷ್ಟು ಹಣ ಆಡಳಿತಾತ್ಮಕ ವೆಚ್ಚವಾಗಿ ಬಳಸಲಾಗುತ್ತಿದೆ ಎಂದರು.

ಸಭೆಯಲ್ಲಿ ಸಮಿತಿ ಸದಸ್ಯೆ ಸಂಗೀತಾ ಕಟ್ಟಿಮನಿ, ಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಮತ್ತು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಸದಸ್ಯ ಕಾರ್ಯದರ್ಶಿ ಆರ್.ವಿಶಾಲ್, ಮಂಡಳಿಯ ಶಿಕ್ಷಣ ತಜ್ಞರ ಸಮಿತಿ ಅಧ್ಯಕ್ಷೆ ಪ್ರೊ.ಛಾಯಾ ದೇವಗಾಂವಕರ್, ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಕಲಬುರಗಿ ಮಹಾನಗರ ಪಾಲಿಕೆ ಅಯುಕ್ತ ಅವಿನಾಶ ಶಿಂಧೆ, ಯೋಜನೆ, ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆಯ ಪ್ರದೇಶಾಭಿವೃದ್ಧಿ ಮಂಡಳಿ ವಿಭಾಗದ ನಿರ್ದೇಶಕ ಡಿ.ಬಿ.ಚಂದ್ರಶೇಖರಯ್ಯ, ಮಂಡಳಿ ಉಪ ಕಾರ್ಯದರ್ಶಿ ಮಂಜುನಾಥ ಪ್ರಸಾದ, ಅಪರ ನಿರ್ದೇಶಕಿ ಪ್ರವೀಣ ಪ್ರಿಯಾ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳಿದ್ದರು.

ಸಂಘ–ಸಂಸ್ಥೆಗಳೊಂದಿಗೆ ಸಭೆ: ಮಂಡಳಿ ಸಭೆಯ ನಂತರ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಅಧ್ಯಕ್ಷ ಪ್ರೋ.ಎಂ.ಗೋವಿಂದರಾವ ಅವರು ಪ್ರದೇಶದ ಅಭಿವೃದ್ಧಿಗೆ ವಿವಿಧ ಸಂಘ–ಸಂಸ್ಥೆಗಳಿಂದ ಅಭಿಪ್ರಾಯ ಪಡೆದರು. ಕೈಗಾರಿಕೆ, ಕೃಷಿ, ನೀರಾವರಿ, ಶಿಕ್ಷಣ, ಆರೋಗ್ಯ, ನಿರುದ್ಯೋಗ ನಿವಾರಣೆ ನಿಟ್ಟಿನಲ್ಲಿ ಅನೇಕರು ಸಲಹೆ ನೀಡಿದರು. ಇದಲ್ಲದೆ ಕಲಬುರಗಿಯಲ್ಲಿ ರೈಲ್ವೆ ವಿಭಾಗ ಕಚೇರಿ, ಪ್ರತಿಷ್ಠಿತ ಏಮ್ಸ್, ಐ.ಐ.ಐ.ಟಿ ಸಂಸ್ಥೆ ಸ್ಥಾಪನೆ, ಕೃಷ್ಣಾ ಮೇಲ್ದಂಡೆ ಯೋಜನೆ ರಾಷ್ಟ್ರೀಯ ಯೋಜನೆಯಾಗಿ ಪರಿಗಣಿಸಬೇಕು. ಕೈಗಾರಿಕೆಗಳ ಸ್ಥಾಪನೆಗೆ ವಿಶೇಷ ಪ್ರೋತ್ಸಾಹ ನೀಡಬೇಕು. ಪ್ರದೇಶಕ್ಕೆ ಕೇಂದ್ರ ಸರ್ಕಾರವು ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಅಧ್ಯಕ್ಷರ ಮುಂದೆ ಇಟ್ಟರು.

## ಸಾವು: ನಕಲಿ ವೈದ್ಯ ಅರೆಸ್ಟ್

ಗಣೇಶ್ ರಾಠೋಡ್, ನಾಗೇಶ್, ಚಿತ್ತಾಪುರ ತಾಲೂಕಿನ ಭೀಮನಹಳ್ಳಿ ತಾಂಡಾ ನಿವಾಸಿ ಮನೋಹರ್ ಮತ್ತು ಸೇಡಂ ತಾಲೂಕಿನ ಬುರಗಪಳ್ಳಿ ಗ್ರಾಮದ ನಿವಾಸಿ ಲಕ್ಷ್ಮೀ, ತನ್ನ ಪುತ್ರ ನಿಂಗಪ್ಪನೊಂದಿಗೆ ಬಂದಿದ್ದರು. ಸಾಯಪ್ಪ ಔಷಧಿಯನ್ನು ಮೂಗಿಗೆ ಹಾಕುತ್ತಿದ್ದಂತೆ ಎಲ್ಲರಿಗೂ ವಾಂತಿ ಶುರುವಾಗಿತ್ತು. ತಕ್ಷಣವೇ ಸಮೀಪದ ಆಸ್ಪತ್ರೆಗೆ ಸೇರಿದ್ದರು. ಆದರೆ ಅಷ್ಟರಲ್ಲಾಗಲೇ ಲಕ್ಷ್ಮೀ ಮತ್ತು ಗಣೇಶ್ ರಾಠೋಡ್, ನಾಗೇಶ್ ಹಾಗೂ ಮನೋಹರ್ ಮೃತಪಟ್ಟಿದ್ದಾರೆ. ವಾಂತಿಯಿಂದ ತೀವ್ರವಾಗಿ ಬಳಲುತ್ತಿದ್ದ ನಿಂಗಪ್ಪನನ್ನ ಕಲಬುರಗಿಯ ಜಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ.

ಈ ಘಟನೆಯ ಬಗ್ಗೆ ಮಾಹಿತಿ ತಿಳಿಯುತ್ತಿದ್ದಂತೆಯೇ ಜಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿದ ಕಲಬುರಗಿ ಎಸ್ಪಿ ಅಡ್ಡೂರು ಶ್ರೀನಿವಾಸಲು ಚಿಕಿತ್ಸೆ ಪಡೆಯುತ್ತಿದ್ದ ನಿಂಗಪ್ಪ ಹಾಗೂ ಕುಟುಂಬಸ್ಥರಿಂದ ಘಟನೆಯ ಬಗ್ಗೆ ಮಾಹಿತಿ ಪಡೆದುಕೊಂಡಿದ್ದರು. ಇನ್ನೂ ಘಟನೆ ಬಳಿಕ ತೆಲಂಗಾಣದ ತಂಗಿಯ ಮನೆಯಲ್ಲಿ ತಲೆಮರೆಸಿಕೊಂಡಿದ್ದ ಸಾಯಪ್ಪನನ್ನು ಸೇಡಂ ಪೊಲೀಸರು ಬಂಧಿಸಿದ್ದಾರೆ. ಈ ಸಂಬಂಧ ಸೇಡಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನನಗೆ ರೈತರ ಹಿತವೇ ಮುಖ್ಯ: ಮೋದಿ

ಅಮೆರಿಕದಲ್ಲಿ ಹಾಗಲ್ಲ. ಅಮೆರಿಕದಲ್ಲಿ ಜಾನುವಾರುಗಳಿಗೆ ಆಹಾರವಾಗಿ ನಾನ್ ವೆಜ್ ಆಹಾರಗಳನ್ನು ನೀಡಲಾಗುತ್ತದೆ. ಮಾಂಸ ಮತ್ತು ಮೂಳೆ ಊಟ, ಒಣಗಿದ ರಕ್ತ ಮತ್ತು ಕೋಳಿ ತ್ಯಾಜ್ಯ ಸೇರಿದಂತೆ ಪ್ರಾಣಿ ಉತ್ಪನ್ನಗಳನ್ನು ಜಾನುವಾರು ಆಹಾರದಲ್ಲಿ ಬಳಸಲು ಅವಕಾಶ ನೀಡುತ್ತವೆ. ತ್ಯಾಜ್ಯವನ್ನು ಕಡಿಮೆ ಮಾಡಲು ಮತ್ತು ಮೇವಿನ ವೆಚ್ಚವನ್ನು ಕಡಿಮೆ ಮಾಡಲು ಅಮೆರಿಕದ ರೈತರು ಈ ಆಹಾರವನ್ನು ನೀಡುತ್ತಾರೆ. ಈ ರೀತಿಯ ಆಹಾರ ನೀಡಲು ಅಮೆರಿಕದ ಕಾನೂನಿನಲ್ಲಿ ಅನುಮತಿ ಇದೆ.

ಭಾರತದಲ್ಲಿ ಹಸುಗಳನ್ನು ಪವಿತ್ರ ಮತ್ತು ಪೂಜ್ಯ ಭಾವದಿಂದ ನೋಡಲಾಗುತ್ತದೆ. ಹಸುಗಳು ತಿಂದ ಪ್ರಾಣಿ ಉತ್ಪನ್ನಗಳಿಂದ ಬರುವ ಹಾಲು ಸೇವಿಸುವುದನ್ನು ಸಾಂಸ್ಕೃತಿಕ ಮತ್ತು ಧಾರ್ಮಿಕ ನಂಬಿಕೆಗಳ ಉಲ್ಲಂಘನೆ ಎಂದು ಪರಿಗಣಿಸಲಾಗುತ್ತದೆ. ಭಾರತದಲ್ಲಿ ಸುಮಾರು 8 ಕೋಟಿಗೂ ಅಧಿಕ ಮಂದಿ ಹೈನುಗಾರಿಕೆ ಉದ್ಯಮದಲ್ಲಿ ತೊಡಗಿದ್ದಾರೆ. ಭಾರತದ ಜಿಡಿಪಿಗೆ ಹೈನುಗಾರಿಕೆ 5% ಕೊಡುಗೆ ನೀಡುತ್ತದೆ.

ವಿಶ್ವದಲ್ಲೇ ಅತಿ ಹೆಚ್ಚು ಜನಸಂಖ್ಯೆ ಇರುವ ಕಾರಣ ಭಾರತದ ಮಾರುಕಟ್ಟೆ ಪ್ರವೇಶಿಲು ಅಮೆರಿಕ ಮೊದಲಿನಿಂದಲೂ ಭಾರೀ ಪ್ರಯತ್ನ ಮಾಡುತ್ತಿದೆ. ಒಂದು ವೇಳೆ ಭಾರತ ಅನುಮತಿ ನೀಡಿದರೆ ರೈತರು ಬೀದಿಗೆ ಇಳಿಯುವ ಎಚ್ಚರಿಕೆ ನೀಡಿದ್ದಾರೆ. ಅಷ್ಟೇ ಅಲ್ಲದೇ ಸರ್ಕಾರವೇ ಪತನ ಹೊಂದುವ ಸಾಧ್ಯತೆಯಿದೆ. ಈ ಕಾರಣಕ್ಕೆ ಇಲ್ಲಿಯವರೆಗೆ ಯಾವುದೇ ಸರ್ಕಾರಗಳು ಭಾರತದ ಮಾರುಕಟ್ಟೆಗೆ ಅಮೆರಿಕದ ಡೈರಿ ಉತ್ಪನ್ನ ಪ್ರವೇಶಕ್ಕೆ ಅನುಮತಿ ನೀಡಿಲ್ಲ.

## ಕಲಬುರಗಿ ಮಹಾನಗರ ಪಾಲಿಕೆ ಮಹಾಪೌರರಾಗಿ ವರ್ಷಾ ಜಾನಿ, ಉಪಮಹಾಪೌರರಾಗಿ ತೃಪ್ತಿ ಶಿವಶರಣಪ್ಪ ಅಲ್ಲದ್



ಕಲಬುರಗಿ: ಆ. 07 : ಕಲಬುರಗಿ ಮಹಾನಗರ ಪಾಲಿಕೆಯ 23ನೇ ಅವಧಿಯ ಚುನಾವಣೆಯಲ್ಲಿ ಮಹಾಪೌರರಾಗಿ ಕಾಂಗ್ರೆಸ್ ಪಕ್ಷದ ಸಾಮಾನ್ಯ ವರ್ಗದ ಅಭ್ಯರ್ಥಿ ಶ್ರೀಮತಿ ವರ್ಷಾ ಜಾನೆ, ಉಪ ಮಹಾಪೌರರಾಗಿ ಹಿಂದುಳಿದ ವರ್ಗದ ಆಭ್ಯರ್ಥಿ ಶ್ರೀಮತಿ ತೃಪ್ತಿ ಶಿವಶರಣಪ್ಪ ಅಲ್ಲದ್ ಲಾಖೆ ಆಯ್ಕೆಯಾಗಿದ್ದಾರೆ.

ಗುರುವಾರದಂದು ಕರ್ನಾಟಕ ಮುನ್ಸಿಪಲ್ ಕಾರ್ಪೋರೇಷನ್ 1976 ಸೆಕ್ಷನ್ 71 (1) ರನ್ವಯ ಮಹಾನಗರ ಪಾಲಿಕೆಯ ಇಂದಿರಾ ಸ್ಮಾರಕ ಭವನ (ಟೌನ್ ಹಾಲ್) ಕಲಬುರಗಿಯುಲ್ಲಿ ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್ ಅವರ ಅಧ್ಯಕ್ಷತೆಯಲ್ಲಿ 23 ನೇ ಅವಧಿಗೆ ಮಹಾಪೌರ ಮತ್ತು ಉಪಮಹಾಪೌರರ ಚುನಾವಣೆ ನಡೆಸಲಾಯಿತು.

ಚುನಾವಣೆಯಲ್ಲಿ ಒಟ್ಟು 66 ಸದಸ್ಯರ ಪೈಕಿ 63 ಸದಸ್ಯರು ಹಾಜರಿದ್ದು. ಅದರಲ್ಲಿ 55 ಜನ ವಾರ್ಡ್ ಕಾರ್ಪೋರೇಟರಗಳು 3 ಜನ ಎಮ್.ಎಲ್.ಎ. ಗಳು 6 ಜನ ಎಮ್.ಎಲ್.ಸಿ.ಗಳು ಮತ್ತು 3 ಸದಸ್ಯರು ಗೈರು ಇದ್ದು, ಚುನಾವಣೆಯಲ್ಲಿ ತಮಗೆ ಬೇಕಾದ ಅಭ್ಯರ್ಥಿಗಳಿಗೆ ಕೈ ಎತ್ತುವ ಮೂಲಕ ಬೆಂಬಲ ನೀಡಿ ಅಭ್ಯರ್ಥಿಗಳ ಆಯ್ಕೆಗೆ ಬೆಂಬಲ ನೀಡಿದರು.

ಮಹಾಪೌರರ ಸ್ಥಾನಕ್ಕೆ ಸ್ಪರ್ಧಿಸಿದ ಕಾಂಗ್ರೆಸ್ ಅಭ್ಯರ್ಥಿ ವರ್ಷಾ ಜಾನೆ ಅವರು 36 ಬಹುಮತ ಪಡೆದು ಮಹಾಪೌರರಾಗಿ ಆಗಿ ಆಯ್ಕೆಯಾದರು. ಪ್ರತಿ ಸ್ಪರ್ಧಿಯಾಗಿ ಸ್ಪರ್ಧಿಸಿದ ಬಿ.ಜೆ.ಪಿ ಅಭ್ಯರ್ಥಿ ಗಂಗಮ್ಮ ಗಂಡ ಬಸವರಾಜ ಮನ್ನೋಳಿ 27 ಮತಗಳನ್ನು ಪಡೆದು–ಕೊಂಡರು.

ತೃಪ್ತಿ ಶಿವಶಣರಪ್ಪ 33 ಮತಗಳನ್ನು ಪಡೆದು ಉಪ ಮಹಾಪೌರರಾಗಿ ಆಯ್ಕೆಯಾದರು.

## ದೇವದಾಸಿ ಪದ್ಧತಿ ತಡೆ ಸೇರಿ17 ಬಿಲ್‌ಗೆ ಅನುಮೋದನೆ

ಮತ್ತು ಅಧಿಕೃತ ದಾಖಲೆಗಳಲ್ಲಿ ತಂದೆಯ ಹೆಸರಿನ ಅಗತ್ಯವನ್ನು ತೆಗೆದುಹಾಕಲು ಇದು ಉದ್ದೇಶಿಸಿದೆ. ದೇವದಾಸಿಗೆ ಮಗನಿದ್ದರೆ, ಆತನ ತಂದೆಯ ಹೆಸರಿನ ಬದಲು ತನ್ನ ಹೆಸರು, ಇಲ್ಲವೇ ತನ್ನ ಉಪನಾಮ ಅಥವಾ ತಾಯಿಯ ಹೆಸರನ್ನು ಬರೆಯಬಹುದು ಎಂದು ಅವರು ಹೇಳಿದರುಗ್ರೇಟರ್ ಬೆಂಗಳೂರು

ಆಡಳಿತ ಮಸೂದೆಗೆ ಒಪ್ಪಿಗೆ: ಜೀವನ ಮತ್ತು ವ್ಯವಹಾರವನ್ನು ಸುಲಭಗೊಳಿಸಲು ಕರ್ನಾಟಕ ಅಪರಾಧ ಮುಕ್ತಗೊಳಿಸುವಿಕೆ (ಉಪಬಂಧಗಳ ತಿದ್ದುಪಡಿ) ವಿಧೇಯಕ, ಕರ್ನಾಟಕ ಬಂದರು (ಲ್ಯಾಂಡಿಂಗ್ ಮತ್ತು ಶಿಪ್ಪಿಂಗ್ ಫೀಸ್) ತಿದ್ದುಪಡಿ ವಿಧೇಯಕ, ಗ್ರೇಟರ್ ಬೆಂಗಳೂರು ಆಡಳಿತ (ತಿದ್ದುಪಡಿ ವಿಧೇಯಕ–2025ಕ್ಕೆ ಅನುಮೋದನೆ ನೀಡಲಾಗಿದೆ. ಕರ್ನಾಟಕ ಭೂ ಸುಧಾರಣೆಗಳು ಮತ್ತು ಇತರೆ ಕಾನೂನು ತಿದ್ದುಪಡಿ ವಿಧೇಯಕ, ಕರ್ನಾಟಕ ನಗರಪಾಲಿಕೆಗಳ (ತಿದ್ದುಪಡಿ ವಿಧೇಯಕ) ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ (ತಿದ್ದುಪಡಿ ವಿಧೇಯಕ) ನೋಂದಣಿ (ಕರ್ನಾಟಕ ತಿದ್ದುಪಡಿ) ವಿಧೇಯಕ, ಕರ್ನಾಟಕ ನಗರಪಾಲಿಕೆಗಳ (ತಿದ್ದುಪಡಿ) ವಿಧೇಯಕ, ಕರ್ನಾಟಕ ಸರ್ಕಾರಿ ವ್ಯಾಜ್ಯನಿರ್ವಹಣೆ (ತಿದ್ದುಪಡಿ) ವಿಧೇಯಕ, ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ ಸೇರಿದಂತೆ 17 ವಿಧೇಯಕಗಳಿಗೆ ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ.ನವಿಲುತೀರ್ಥದಿಂದ ರಾಮದುರ್ಗದ 8 ಕೆರೆ ಭರ್ತಿ: ಬೆಳಗಾವಿ ಜಿಲ್ಲೆಯ ನವಿಲು ತೀರ್ಥ ಅಣೆಕಟ್ಟಿನಿಂದ ಮಲ್ಲಪ್ರಭಾ ನದಿಯ ನೀರು ಎತ್ತುವ ಮೂಲಕ ರಾಮದುರ್ಗ ತಾಲ್ಲೂಕಿನ ಚಂದರಗಿ ಮತ್ತು ಸುತ್ತಮುತ್ತಲಿನ ಗ್ರಾಮಗಳ 8 ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಹಾಗೂ ಮಂಡ್ಯ ಜಿಲ್ಲೆ ಮದ್ದೂರು ತಾಲೂಕಿನ ಚಾಮನಹಳ್ಳಿ ಬೈರಾನ್ ಹಾಗೂ ವೈದ್ಯನಾಥ ಪುರ ಕಾಲುವೆಗಳ ಆಧುನೀಕರಣ ಕಾಮಗಾರಿ ಕೈಗೊಳ್ಳಲು ಸಂಪುಟ ಸಭೆ ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದು ಸಚಿವರು ವಿವರಿಸಿದರು.'ರೋಹಿತ್ ವೇಮುಲಾ ಮಸೂದೆ' ಮುಂದೂಡಿಕೆ: ಆದಾಗ್ಯೂ ಕರ್ನಾಟಕ ರೋಹಿತ್ ವೇಮುಲ (ಹೊರಗಿಡುವಿಕೆ ಅಥವಾ ಅನ್ಯಾಯ ತಡೆಗಟ್ಟುವಿಕೆ) (ಶಿಕ್ಷಣ ಮತ್ತು ಘನತೆಯ ಹಕ್ಕು) ಮಸೂದೆ ನಿರ್ಧಾರವನ್ನು ಮುಂದೂಡಲಾಗಿದೆ. ಈ ವಿಧೇಯಕ ಕುರಿತು ಒಂದು ಬಾರಿಯೂ ಸಮಾಲೋಚನಾ ಸಭೆ ನಡೆಸಿಲ್ಲ. ಇದಕ್ಕಾಗಿ ಅದನ್ನು ಮುಂದಿನ ಸಭೆಗೆ ಮುಂದೂಡಿದ್ದೇವೆ" ಎಂದು ಸಚಿವರು ಹೇಳಿದರು.ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳಲ್ಲಿ ಜಾತಿ ಆಧಾರಿತ ತಾರತಮ್ಯವನ್ನು ತೊಡೆದುಹಾಕುವ ಗುರಿಯನ್ನು ಈ ಕಾಯ್ದೆ ಹೊಂದಿದೆ. ಕರ್ನಾಟಕ ಸರ್ಕಾರ "ರೋಹಿತ್ ವೇಮುಲಾ ಕಾಯ್ದೆ" ಜಾರಿಗೊಳಿಸಬೇಕೆಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಏಪ್ರಿಲ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದರು. 2016 ರಲ್ಲಿ ಹೈದರಾಬಾದ್‌ನಲ್ಲಿ ದಲಿತ ವಿದ್ಯಾರ್ಥಿ ರೋಹಿತ್ ವೇಮುಲಾ ಜಾತಿ ಆಧಾರಿತ ತಾರತಮ್ಯದಿಂದ ಆತ್ಮಹತ್ಯೆ ಮಾಡಿಕೊಂಡಿದ್ದರು.

ಕರ್ನಾಟಕ ಶಿಕ್ಷಣ ಸಂಸ್ಥೆಗಳ (ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಯ ನಿಯಮಗಳು ಮತ್ತು ಷರತ್ತುಗಳ ಮಾನ್ಯತೆ) (ತಾಂತ್ರಿಕ ಶಿಕ್ಷಣ) ನಿಯಮಗಳಿಗೆ ತಿದ್ದುಪಡಿ ಮಾಡುವ ಮೂಲಕ ಮುಸ್ಲಿಮೇತರ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು ಆಯಾ ಅಲ್ಪಸಂಖ್ಯಾತ ವರ್ಗದ ಶೇ. 50 ರಷ್ಟು ವಿದ್ಯಾರ್ಥಿಗಳನ್ನು ಹೊಂದಿರಬೇಕು ಎಂಬ ನಿಯಮವನ್ನು ತೆಗೆದುಹಾಕಲು ಸಂಪುಟ ಒಪ್ಪಿಗೆ ನೀಡಿದೆ ಎಂದು ಪಾಟೀಲ್ ಹೇಳಿದರು.ದೇವರಾಜ ಅರಸು ಅಭಿವೃದ್ಧಿ ನಿಗಮದ ಮೂಲಕ ಅಂದಾಜು 33.09 ಕೋಟಿ ರೂ. ವೆಚ್ಚದಲ್ಲಿ ಒಟ್ಟು 1,103 ಎಲೆಕ್ಟ್ರಿಕ್ ನಾಲ್ಕು ಚಕ್ರದ ವಾಹನಗಳನ್ನು ಖರೀದಿಸಿ, ಅವುಗಳನ್ನು 11 ನಿಗಮಗಳ ಮೂಲಕ ಆಹಾರ ಮಳಿಗೆ ಆರಂಭಿಸುವ ಹಿಂದುಳಿದ ವರ್ಗಗಳಿಗೆ ಸೇರಿದ ನಿರುದ್ಯೋಗಿಗಳಿಗೆ ಒದಗಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ರಾಜ್ಯದ 15 ಜಿಲ್ಲೆಗಳಲ್ಲಿ ಅಲ್ಪಸಂಖ್ಯಾತ ಬಾಲಕಿಯರ ಶಿಕ್ಷಣಕ್ಕಾಗಿ 15 ಮಹಿಳಾ ಕಾಲೇಜು ಕಟ್ಟಡಗಳ ನಿರ್ಮಾಣಕ್ಕೆ 87.60 ಕೋಟಿ ರೂ.ಗಳ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಯಿತು ಎಂದು ಎಚ್. ಕೆ. ಪಾಟೀಲ್ ತಿಳಿಸಿದರು.

## ಗ್ಯಾರಂಟಿಗಳಿಗೆ ಪರಿಶಿಷ್ಟರ ಅನುದಾನ ದುರ್ಬಳಕೆ: ಆ.11ಕ್ಕೆ ಸಮಾಜ ಕಲ್ಯಾಣಾಧಿಕಾರಿಗಳ ಕಚೇರಿಗೆ ಮುತ್ತಿಗೆ




ಕಲಬುರಗಿ:ಆ.7:ಎಸ್‌ಸಿಎಸ್‌ಪಿ, ಟಿಎಸ್‌ಪಿ ಅನುದಾನ ಗ್ಯಾರಂಟಿಗಳಿಗೆ ದುರ್ಬಳಕೆ ಮಾಡಿಕೊಂಡಿದ್ದರಿಂದ ಪರಿಶಿಷ್ಟ ಸಮುದಾಯಗಳ ಶಾಶ್ವತ ಅಭಿವೃದ್ಧಿಗೆ ಹಿನ್ನಡೆಯಾಗಿದ್ದು, ಆ ಹಿನ್ನಲೆಯಲ್ಲಿ ಪರಿಶಿಷ್ಟರು ನಗರದಲ್ಲಿ ಇದೇ ಆಗಸ್ಟ್ 11ರಂದು ಬೃಹತ್ ಪ್ರತಿಭಟನಾ ಮೆರವಣಿಗೆ ಮಾಡಿ ಬೆಳಿಗ್ಗೆ ಹನ್ನೊಂದು ಗಂಟೆಗೆ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಬಿಜೆಪಿ ಎಸ್‌ಸಿ ಮೋರ್ಚಾ ರಾಜ್ಯ ಉಪಾಧ್ಯಕ್ಷ ಡಾ. ಅಂಬಾರಾಯ್ ಅಷ್ಟಗಿ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಜಗತ್ ವೃತ್ತದಿಂದ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳ ಕಚೇರಿಯವರೆಗೆ ಸಾವಿರಾರು ಪರಿಶಿಷ್ಟರು ಬೃಹತ್ ಪ್ರತಿಭಟನೆ ಮೆರವಣಿಗೆಯಲ್ಲಿ ತೆರಳಿ ಮುತ್ತಿಗೆ ಹಾಕಲಾಗುವುದು ಎಂದರು.

ರಾಜ್ಯ ಸರ್ಕಾರವು ಇತ್ತೀಚೆಗೆ ಪರಿಶಿಷ್ಟರಿಗೆ ಮೀಸಲಾದ ಒಟ್ಟು ಹಣದಲ್ಲಿ 39000 ಕೋಟಿ ರೂ.ಗಳಿಗೂ (39000 ಕೋಟಿ ರೂ.ಗಳು) ಹೆಚ್ಚು ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಿದೆ. ಪರಿಣಾಮವಾಗಿ ಪರಿಶಿಷ್ಟರ ಯೋಜನೆಗಳ ಅಡಿಯಲ್ಲಿ ಹಲವು ಅಭಿವೃದ್ಧಿ ಯೋಜನೆಗಳಿಗೆ ಅನುದಾನ ಕಡಿಮೆಯಾಗಿದೆ. ಇದರಿಂದ ಪರಿಶಿಷ್ಟರ ಅಭಿವೃದ್ಧಿ ಕುಂಠಿತವಾಗಲಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಪರಿಶಿಷ್ಟ ಸಮುದಾಯದವರ ಕೈಗಾರಿಕೆ, ಉದ್ಯೋಗ, ತಂತ್ರಜ್ಞಾನ, ಕೃಷಿ ಹಾಗೂ ಇತರೆ ಕ್ಷೇತ್ರಗಳಲ್ಲಿ ಶಕ್ತಿಕರಣ–ಕ್ಕಾಗಿಯೇ ಎಸ್‌ಸಿಎಸ್‌ಪಿ/ ಟಿಎಸ್‌ಪಿ ಯೋಜನೆಗಳು ರೂಪಗೊಂಡಿದ್ದವು. ಅದರ ಅಡಿಯಲ್ಲಿ ಸರ್ಕಾರದಿಂದ ಕೌಶಲ್ಯಾಭಿವೃದ್ಧಿ ತರಬೇತಿ, ಉದ್ಯೋಗವಕಾಶ, ಮಹಿಳಾ ಉದ್ಯಮ ಶ್ರೇಯೋಭಿವೃದ್ಧಿ, ಕೃಷಿಗೆ ತಂತ್ರಜ್ಞಾನದ ಬೆಂಬಲ, ಇತರೆ ಆಧುನಿಕ ಮೂಲ ಸೌಕರ್ಯ ಯೋಜನೆಗಳು ಪ್ರಾರಂಭವಾಗಬೇಕಿತ್ತು. ಆ ಮೀಸಲು ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸುವುದರಿಂದ ಯೋಜನೆಯ ಮೂಲ ಗುರಿಗಳಿಗೆ ಹಿನ್ನಡೆ–ಯಾಗಿದೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಗ್ಯಾರಂಟಿ ಯೋಜನೆಗಳು ತಾತ್ಕಾಲಿಕ ಸಹಾಯ ನೀಡಿದರೂ ಪರಿಶಿಷ್ಟರ ದೀರ್ಘಕಾಲಿಕ ಶಾಶ್ವತ ಉನ್ನತಿಗೆ ತೊಂದರೆ ಉಂಟಾಗಲಿದೆ. ಆ ಹಿನ್ನೆಲೆಯಲ್ಲಿ ಗ್ಯಾರಂಟಿಗಳಿಗೆ ಪರಿಶಿಷ್ಟರ ಅನುದಾನ ವಿನಿಯೋಗದ ಕುರಿತು ಪುನರ್ ಪರಿಶೀಲನೆ ಮಾಡಬೇಕು. ಆರ್ಥಿಕ ಸಹಾಯವಷ್ಟೇ ಅಲ್ಲ, ಸ್ವತಂತ್ರ ಜೀವನ ವಿದ್ಯೆ, ಸ್ವಾವಲಂಬಿ ಸಮಾಜ ನಿರ್ಮಾಣಕ್ಕೆ ಶಾಶ್ವತ ಯೋಜನೆಗಳು ಮತು ಗುರಿಗಳು ರೂಪುಗೊಳ್ಳಬೇಕು ಎಂಬುದು ಮುಖ್ಯವಾಗಿದೆ. ಕೂಡಲೇ ಇಂತಹ ಕೃತ್ಯಗಳನ್ನು ಸರ್ಕಾರ ನಿಲ್ಲಿಸಬೇಕು ಎಂದು ಅವರು ಒತ್ತಾಯಿಸಿದರು.

ಕಳೆದ 2023ರಿಂದ ನಿರಂತರವಾಗಿ ವಿರೋಧಿಸುತ್ತ ಬಂದರೂ ಸಹ ಯಾವುದೇ ಕ್ರಮಗಳನ್ನು ಕೈಗೊಂಡಿಲ್ಲ. ಹಾಗಾಗಿ ಹೋರಾಟ ಮುಂದುವರೆಸುತ್ತೇವೆ ಎಂದು ಹೇಳಿದ ಅವರು, ಪರಿಶಿಷ್ಟರ ಯೋಜನೆಯ 39000 ಕೋಟಿ ರೂ.ಗಳನ್ನು ಗೃಹಲಕ್ಷ್ಮೀ, ಶಕ್ತಿ, ಗೃಹ ಜ್ಯೋತಿ, ವಿದ್ಯಾನಿಧಿ, ಅನ್ನಭಾಗ್ಯ ಮುಂತಾದವುಗಳಿಗೆ ವರ್ಗಾಯಿಸಿದ್ದು ಪರಿಶಿಷ್ಟರ ಶ್ರೇಯೋಭಿವೃದ್ಧಿಯ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಪರಿಶಿಷ್ಟ ವಿದ್ಯಾರ್ಥಿಗಳಿಗೆ ಸಹಾಯ ಮಾಡಿದರೆ ಅದರಿಂದ ದೀರ್ಘಾವಧಿ ಅಭಿವೃದ್ಧಿಗೆ ಪೂರಕವಾಗಲಿದೆ. ಯುವ ನಿಧಿ ಕೇವಲ ವಿದ್ಯಾರ್ಥಿಗಳಿಗೆ ನಿರ್ವಹಣೆಗೆ ಸಾಕಾಗುವ ಮಟ್ಟದಲ್ಲಿದೆ. ಉನ್ನತ ಶಿಕ್ಷಣಕ್ಕೆ ಅನುದಾನವಿಲ್ಲದೇ ಭವಿಷ್ಯದ ಉದ್ಯೋಗದ ಅವಕಾಶಗಳ ಮೇಲೆ ಪರಿಣಾಮ ಬೀರುತ್ತವೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಪರಿಶಿಷ್ಟರ ಸಮುದಾಯದವರ ಆತ್ಮನಿರ್ಭರತೆಗಾಗಿ ಕೈಗಾರಿಕೆ, ಉದ್ಯಮ, ಸಣ್ಣ ವಹಿವಾಟುಗಳಿಗೆ ಅನುಕೂಲವಾಗುವ ತರಬೇತಿ, ಸಾಲ ಯೋಜನೆಗಳು, ಉದ್ಯೋಗ ಸೃಷ್ಟಿ ಕಾರ್ಯಕ್ರಮಗಳಿಗೆ ಅನುದಾನ ಮೀಸಲಾಗಿದ್ದರೆ ಅವರ ಅಭಿವೃದ್ಧಿಯಾಗುತ್ತಿತ್ತು. ಅಂತಹ ಕ್ರಮ ಕೈಗೊಳ್ಳದ ಸಮಾಜ ಕಲ್ಯಾಣ ಸಚಿವರ ಕುರಿತು ನಾವು ಸ್ವಯಂ ಪರಾಮರ್ಶೆ ಮಾಡಿಕೊಳ್ಳಬೇಕಾಗಿದೆ. ಇನ್ನು ಮುಂದೆ ರಾಜ್ಯ ಸರ್ಕಾರದ ಹಣ ದುರ್ಬಳಕೆ ವಿರುದ್ಧ ಪರಿಶಿಷ್ಟರ ಅಭಿವೃದ್ಧಿಗಾಗಿ ಬಿಜೆಪಿ ನಿರಂತರ ಹೋರಾಟ ಮುಂದುವರೆಸಲಿದೆ ಎಂದು ಅವರು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಬಸವರಾಜ್ ಬೆಣ್ಣೂರ್, ಮರೆಪ್ಪ ಬಡಿಗೇರ್, ಗಣೇಶ್ ವಳಕೇರಿ, ಮಲ್ಲಿಕಾರ್ಜುನ್ ಜಿನಕೇರಿ, ವಿಜಯಕುಮಾರ್ ಆಡಕಿ, ಶಿವಾ ಅಷ್ಟಗಿ ಮುಂತಾದವರು ಉಪಸ್ಥಿತರಿದ್ದರು.

## ಹಿಂದುಳಿವಿಕೆ ಪತ್ತೆ ಹಚ್ಚಿ ಅಕ್ಟೋಬರ್ ನಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಕೆ ಪ್ರೊ. ಎಂ.ಗೋವಿಂದರಾವ

ಕಲಬುರಗಿ,ಆ.7ಮೂವತ್ತೈದು ಸೂಚ್ಯಂಕದ ಮೇಲೆ ರೂಪಗೊಂಡ ಡಾ.ಡಿ.ಎಂ.ನಂಜುಂಡಪ್ಪ ವರದಿ ಅಧಾರದದಲ್ಲಿ ಸಿ.ಡಿ.ಐ ಇಂಡೆಕ್ಸ್ ನಂತೆ ಅನುದಾನ ಹಂಚಿಕೆ ಮಾಡಿದರು ನಿರೀಕ್ಷಿತ ಮಟ್ಟದಲ್ಲಿ ಅಭಿವೃದ್ಧಿ ಕಾಣದಿರುವುದಕ್ಕೆ ಕಾರಣಗಳನ್ನು ಪತ್ತೆ ಹಚ್ಚಿ ಇದನ್ನು ಸರಿದೂಗಿಸಿ ಅಸಮಾನತೆ ನಿವಾರಣೆಗೆ ಸಮಗ್ರ ವರದಿ ಬರುವ ಅಕ್ಟೋಬರ್ ನಲ್ಲಿ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಅಧ್ಯಕ್ಷ ಪ್ರೋ. ಎಂ.ಗೋವಿಂದರಾವ ಹೇಳಿದರು.

ಗುರುವಾರ ಕಲಬುರಗಿ ನಗರದ ಕೆ.ಕೆ.ಆರ್.ಡಿ.ಬಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಆರೋಗ್ಯ, ಶಿಕ್ಷಣ, ಕೃಷಿ, ಕೈಗಾರಿಕೆ, ಮೂಲಸೌಕರ್ಯ ಹೀಗೆ 41 ಅಂಶಗಳಲ್ಲಿ ಇದೂವರೆಗಿನ ಫಲಿತಾಂಶದ ಆಧಾರದ ಮೇಲೆ ವರದಿ ನೀಡಲಾಗುತ್ತದೆ ಎಂದರು. ಅಂದಿನ 175 ತಾಲೂಕಿನಲ್ಲಿ 39 ಅತ್ಯಂತ ಹಿಂದುಳಿದ ತಾಲೂಕುಗಳಿದ್ದು, ಹಿಂದುಳಿವಿಕೆ ತಾಲೂಕು ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸೀಮಿತವಲ್ಲ, ಎಲ್ಲಾ ಪ್ರದೇಶಕ್ಕೂ ಅನ್ವಯಿಸುತ್ತದೆ. ಉಳಿದ ಪ್ರದೇಶಕ್ಕೆ ಹೋಲಿಸಿದಲ್ಲಿ ಕಲ್ಯಾಣ ಕರ್ನಾಟಕ ಹಿಂದುಳಿದಿರುವುದು ತಮ್ಮ ಗಮನಕ್ಕಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಕೆ.ಕೆ.ಆರ್.ಡಿ.ಬಿ. ಅಧ್ಯಕ್ಷ ಡಾ.ಅಜಯ್ ಸಿಂಗ್, ಸಮಿತಿ ಸದಸ್ಯೆ ಸಂಗೀತಾ ಕಟ್ಟಿಮನಿ, ಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಮತ್ತು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಸದಸ್ಯ ಕಾರ್ಯದರ್ಶಿ ಆರ್.ವಿಶಾಲ್, ಕೆ.ಕೆ.ಆರ್.ಡಿ.ಬಿ. ಮಂಡಳಿ ಕಾರ್ಯದರ್ಶಿ ನಲಿನ್ ಅತುಲ್ ಇದ್ದರು.

## ಎಸ್‌ಸಿ ಒಳ ಮೀಸಲಾತಿ: ಸಚಿವ ಸಂಪುಟದ ಮುಂದೆ ವರದಿ, ಆ. 16 ರಂದು ವಿಶೇಷ ಸಭೆ

ಬೆಂಗಳೂರು:ಅ.7: ಪರಿಶಿಷ್ಟ ಸಮುದಾಯದಲ್ಲಿ ಒಳ ಮೀಸಲಾತಿ ಕಲ್ಪಿಸುವ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್ ವರದಿಯನ್ನು ಇಂದು ಸಚಿವ ಸಂಪುಟ ಸಭೆಯಲ್ಲಿ ಮಂಡಿಸಲಾಗಿದೆ. ಆಗಸ್ಟ್ 16 ರಂದು ನಡೆಯಲಿರುವ ವಿಶೇಷ ಸಭೆಯಲ್ಲಿ ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ.

ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ನೇತೃತ್ವದ ಆಯೋಗ ಆಗಸ್ಟ್ 4ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ 1,766 ಪುಟಗಳ ವರದಿ ಸಲ್ಲಿಸಿತ್ತು.

ಆಯೋಗ ಮೂರು ತಿಂಗಳ ಅವಧಿಯಲ್ಲಿ ವೈಜ್ಞಾನಿಕವಾಗಿ ಶೇ. 92 ರಷ್ಟು ಸಮುದಾಯದ ಜನರನ್ನು ಸಮೀಕ್ಷೆಗೆ ಒಳಪಡಿಸಿ ವರದಿ ತಯಾರಿಸಿದೆ. ಈ ವರದಿ ಸಂಪುಟದ ಮುಂದೆ ಮಂಡಿಸಲಾಗಿದ್ದು, ಎಲ್ಲಾ ಸಚಿವರಿಗೂ ಅದರ ಪ್ರತಿಗಳನ್ನು ನೀಡಲಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್. ಕೆ. ಪಾಟೀಲ್ ಹೇಳಿದ್ದಾರೆ.

ಸಚಿವ ಸಂಪುಟ ಆಯೋಗದ ವರದಿಯನ್ನು ಸ್ವೀಕರಿಸಿದ್ದು, ಅದನ್ನು ಅಧ್ಯಯನ ಮಾಡಿದ ನಂತರ ಆಗಸ್ಟ್ 16 (ಶನಿವಾರದಂದು) ನಡೆಯಲಿರುವ ವಿಶೇಷ ಸಭೆಯಲ್ಲಿ ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಸಚಿವರು ಸುದ್ದಿಗಾರರಿಗೆ ತಿಳಿಸಿದರು.

ಸಮೀಕ್ಷೆಯಲ್ಲಿ ಪರಿಶಿಷ್ಟ ಸಮುದಾಯಗಳಿಗೆ ಮೀಸಲಾತಿ ಹಾಗೂ ವರ್ಗೀಕರಣ ಕುರಿತ ಪ್ರಶ್ನೆಗೆ ಉತ್ತರಿಸಿದ

ಸಚಿವರು, ವರದಿಯನ್ನು ನಾನು ಕೂಡಾ ಇನ್ನೂ ಪಡೆದಿರಲಿಲ್ಲ. ಮಾಧ್ಯಮಗಳ

ಮೂಲಕ ವರದಿ ಬಗ್ಗೆ ತಿಳಿದಿದ್ದೇನೆ. ಸರ್ವೇ ವರದಿಯೊಂದಿಗೆ ಅದನ್ನು ಹೋಲಿಕೆ ಮಾಡಲು ಹೋಗುವುದಿಲ್ಲ ಎಂದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.

## ತಾಯಿ ಮತ್ತು ಮಗುವಿನ ಬಾಂಧವ್ಯ ಬೆಳೆಯುವುದರ ಜೊತೆಗೆ ಪ್ರೀತಿ, ವಾತ್ಸಲ್ಯ ಹೆಚ್ಚಾಗುತ್ತದೆ:ಡಾ.ಅನುರಾಧಾ



ಹುಮನಾಬಾದ:ತಾಯಿ ಹಾಲು ಮಾತ್ರ ಮಗುವಿನ ಸಂಪೂರ್ಣ ಬೆಳವಣಿಗೆಗೆ ಪೂರಕವಾಗಿ ಕಾರ್ಯನಿರ್ವಹಿಸುತ್ತದೆ.ಈನಿಟ್ಟಿನಲ್ಲಿ ಗ್ರಾಮೀಣ ಭಾಗಕ್ಕಿಂತಲೂ ನಗರ ಪ್ರದೇಶದ ತಾಯಂದಿರಲ್ಲಿ ಜಾಗೃತಿ ಮೂಡಿಸಬೇಕಾದ ಅಗತ್ಯವಿದೆ ಎಂದು ಶ್ರೀ ವೀರಭದ್ರೇಶ್ವರ ಹೋಮಿಯೋಪಥಿಕ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ರೋಗಶಾಸ್ತ್ರ ವಿಭಾಗ ಮತ್ತು ಪ್ರಸೂತಿ ಮತ್ತು ಸ್ತ್ರೀರೋಗ ವಿಭಾಗದ ಮಾರ್ಗದರ್ಶನದಲ್ಲಿ ಈ ಕಾರ್ಯಕ್ರಮದ ಆಯೋಜನೆಯ ಕಾರ್ಯಕ್ರಮದಲ್ಲಿ ರೋಗ ಶಾಸ್ತ್ರದ ಸಹಾಯಕ ಪ್ರಾಧ್ಯಾಪಕರಾದ ಡಾ. ಅನುರಾಧಾ ಮಾತನಾಡುತ್ತಾ ನುಡಿದರು. ಹೆರಿಗೆ ಆದ ಅರ್ಧ ಗಂಟೆಯೊಳಗೆ ತಾಯಿ ತನ್ನ ಮಗುವಿಗೆ ಎದೆ ಹಾಲನ್ನು ಕುಡಿಸಲು ಪ್ರಾರಂಭಿಸುವುದು ಅತಿ ಮುಖ್ಯವಾಗಿದೆ. ಇದ-ರಿಂದ ತಾಯಿ ಮತ್ತು ಮಗುವಿನ ಬಾಂಧವ್ಯ ಬೆಳೆಯುವುದರ ಜೊತೆಗೆ ಪ್ರೀತಿ, ವಾತ್ಸಲ್ಯ ಹೆಚ್ಚಾಗುತ್ತದೆ. ಮಗುವಿನ ಹೆರಿಗೆ ನಂತರ ತಾಯಿಯಲ್ಲಿ ಕಾಣಬರುವ ಗರ್ಭಕೋಶದ ರಕ್ತಸ್ರಾವ ಕಡಿಮೆ ಮಾಡುತ್ತದೆ. ಅಲ್ಲದೆ ರಕ್ತ ಹೀನತೆ ಸಹ ಕಡಿಮೆಯಾಗಿ, ಒಂದು ಮಗುವಿನ ನಂತರ ಇನ್ನೊಂದು ಮಗುವಿಗೆ ಅಂತರವನ್ನಿಡಲು ತಾಯಿಗೆ ಸಹಾಯ ಮಾಡುತ್ತದೆ. ಸ್ತ್ರೀಯರಲ್ಲಿ ಕಾಣಬರುವ ಸ್ತನ ಹಾಗೂ ಗರ್ಭಕೋಶದ ಕ್ಯಾನ್ಸರ್ ಕಾಯಿಲೆ ಬರದಂತೆ ತಡೆಯುತ್ತದೆ ಎಂದು ತಿಳಿಸಿದರು. ತಾಯಂದಿರು ಸಾಧ್ಯವಾದರೆ ಎರಡು ವರ್ಷದವರೆಗೆ ಮಗುವಿಗೆ ಹಾಲುಣಿಸುವುದು ಒಳ್ಳೆಯದು ಎಂದರು. ಸಹಾಯಕ ಪ್ರಾಧ್ಯಾಪಕರಾದ ಡಾ. ದೀಪ್ತಿಯಾನಂದ್ ಮಾತನಾಡಿ, ತಾಯಿಯ ಹಾಲಿನಲ್ಲಿ ಸಮತೋಲನ ಆಹಾರ, ಪೌಷ್ಟಿಕಾಂಶಗಳು, ಜೀವಸತ್ವಗಳು ಮತ್ತು ನೀರಿನ ಪ್ರಮಾಣ ಸಮತೋಲನವಾಗಿರುತ್ತದೆ ಹಾಗೂ ಮಗುವಿನ ಬುದ್ಧಿ ಬೆಳವಣಿಗೆಗೆ ಸಹಾಯ ಮಾಡುತ್ತದೆ ಎಂದರು.

ನಿಜ ಜೀವನದ ಆಸ್ಪತ್ರೆಯ ಅನುಭವಗಳನ್ನು ಹಂಚಿಕೊಂಡರು. ಮತ್ತು ಅಂತಹ ಜಾಗೃತಿ ಕಾರ್ಯಕ್ರಮಗಳು ಹಾಲುಣಿಸುವ ಸಮಸ್ಯೆಗಳ ಆರಂಭಿಕ ನಿರ್ವಹಣೆಯಲ್ಲಿ ಹೇಗೆ ಸಹಾಯ ಮಾಡುತ್ತವೆ ಎಂಬುದನ್ನು ವಿವರಿಸಿದರು.

ಅವರು ಹಾಜರಿದ್ದವರೊಂದಿಗೆ ಸಂವಹನ ನಡೆಸಿದರು ಮತ್ತು ಅವರ ಪ್ರಶ್ನೆಗಳನ್ನು ಪರಿಹರಿಸಿದರು.

ಈ ಸಂದರ್ಭದಲ್ಲಿ ಹುಮನಾಬಾದ ಶ್ರೀ ವೀರಭದ್ರೇಶ್ವರ ಹೊಮಿಯೋಪಥಿಕ್ ಆಸ್ಪತ್ರೆಯ ಪ್ರಿನ್ಸಿಪಾಲ್‌ರಾದ ಡಾ. ಇಂದ್ರಜೀತ್‌ಶಾಹ, ಸಂಜಯ್ ಗುತ್ತೇದಾರ, ಗರ್ಭಿಣಿಯರು, ಹಾಲುಣಿಸುವ ತಾಯಂದಿರು, ಅಂಗನವಾಡಿ ಕಾರ್ಯಕರ್ತರು ಮತ್ತು ಅಯ್ಯಾಸ್ ಸೇರಿದಂತೆ 20 ಜನರು ಉಪಸ್ಥಿತರಿದ್ದರು. ಈ ಕಾರ್ಯಕ್ರಮವನ್ನು ಆಯೋಜಿಸುವಲ್ಲಿ ನಿರಂತರ ಬೆಂಬಲ ನೀಡಿದ್ದಕ್ಕಾಗಿ ಆಡಳಿತ ಮಂಡಳಿ ಮತ್ತು ಹುಮನಾಬಾದ್‌ನ ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಬಿ. ಪಾಟೀಲ್ ಅವರಿಗೆ ವಿಶೇಷ ಧನ್ಯವಾದಗಳನ್ನು ಅರ್ಪಿಸಲಾಯಿತು.

## ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ಮಾಜಿ ಶಾಸಕ ಖೇಣಿ ಭೇಟಿ



> ಆಸ್ಪತ್ರೆಗೆ ಬರುವ ರೋಗಿಗಳಿಗೆ ಕುಡಿಯುವ ನೀರಿನ ಸೌಲಭ್ಯಕ್ಕಾಗಿ ನನ್ನ ವೈಯಕ್ತಿಕ ದುಡ್ಡಿನಲ್ಲಿ ಬಿಸಿ ನೀರು ಮತ್ತು ತಪಾಗಿರುವ ನೀರಿನ ಫಿಲ್ಟರ್ ಅಳವಡಿಕೆ ಮಾಡುತ್ತೇನೆ.

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಮನ್ನಾಏಖ್ಖೇಳ್ಳಿ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ಮಾಜಿ ಶಾಸಕ ಅಶೋಕ ಖೇಣಿ ಧೀಡಿರನೇ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಬುಧವಾರ ಮನ್ನಾಏಖ್ಖೇಳ್ಳಿ ಗ್ರಾಮದಲ್ಲಿ 9ಜನರಿಗೆ ಹುಚ್ಚು ನಾಯಿ ಕಡಿತಕ್ಕೆ ಒಳಗಾಗಿದ್ದರು. ಅವರೆಲ್ಲ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ಬಂದಾಗ ರೇಬೀಸ್ ಇಂಜೆಕ್ಷನ್ ಸಿಗದ ಹಿನ್ನಲೆ ಬೀದರ್ ಜಿಲ್ಲಾ ಆಸ್ಪತ್ರೆಗೆ ರವಾನೆ ಮಾಡಲಾಗಿತ್ತು. ಇದರ ಬಗ್ಗೆ ಮಾಹಿತಿ ಪಡೆದ ಮಾಜಿ ಶಾಸಕ ಅಶೋಕ ಖೇಣಿ ಜಿಲ್ಲಾಡಳಿತಕ್ಕೆ ಮಾಹಿತಿ ನೀಡಿ ಅವರಿಗೆ ಬ್ರಿಮ್ಸ್ ನಲ್ಲಿ ರೇಬೀಸ್ ಇಂಜೆಕ್ಷನ್ ವ್ಯವಸ್ಥೆ ಮಾಡುವಂತೆ ಸೂಚಿಸಿದ್ದರು. ಗುರುವಾರ ಮನ್ನಾಏಖ್ಖೇಳ್ಳಿ ಗ್ರಾಮದ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಆಸ್ಪತ್ರೆಯ ವೈದ್ಯಾಧಿಕಾರಿಗಳನ್ನ ತರಾಟೆಗೆ ತೆಗೆದುಕೊಂಡರು. ಮನ್ನಾಏಖ್ಖೇಳ್ಳಿ ಸುತ್ತಮುತ್ತಲಿನ ಗ್ರಾಮಗಳಿಗೆ ಮನ್ನಾಏಖ್ಖೇಳ್ಳಿ ಸಮುದಾಯ ಆರೋಗ್ಯ ಕೇಂದ್ರ ದೊಡ್ಡ ಆಸ್ಪತ್ರೆಯಾಗಿದೆ. ಮನ್ನಾಏಖ್ಖೇಳ್ಳಿ ಸೇರಿದಂತೆ ಸುತ್ತಲಿನ ಜನರು ಹುಚ್ಚು ನಾಯಿ ಕಡಿತಕ್ಕೆ ಒಳಗಾಗಿ ಬಂದವರಿಗೆ ರೇಬೀಸ್ ಇಂಜೆಕ್ಷನ್ ಕೊಡಬೇಕಲ್ಲ, ಆಸ್ಪತ್ರೆಯಲ್ಲಿ ರೇಬೀಸ್ ಇಂಜೆಕ್ಷನ್ ಸ್ಟಾಕ್ ಇಲ್ಲಾ ಅಂದ್ರೆ ಇಲ್ಲಿನ ವೈದ್ಯರು ಏನು ಮಾಡತ್ತಾ ಇದ್ದಿರಿ. ಸ್ಟಾಕ್ ಇಲ್ಲಾ ಅಂದ್ರೆ ತುರ್ತು ಸಂಧರ್ಭದಲ್ಲಿ ಇಂಜೆಕ್ಷನ್ ಖರೀದಿಸಬೇಕಲ್ಲ ಅಂತಾ ಆಸ್ಪತ್ರೆ ವೈದ್ಯರಿಗೆ ತರಾಟೆಗೆ ತೆಗೆದುಕೊಂಡರು. ಮನ್ನಾಏಖ್ಖೇಳ್ಳಿ ಸೇರಿದಂತೆ ಸುತ್ತಲಿನ ಜನರು ಚಿಕಿತ್ಸೆಗಾಗಿ ಆಸ್ಪತ್ರೆಗೆ ಬಂದಾಗ ಸ್ಪಂದಿಸುವ ಕಾರ್ಯ ಮಾಡುವಂತೆ ವೈದ್ಯರಿಗೆ ಸೂಚಿಸಿದ್ದರು. ಈ ಸಂದರ್ಭದಲ್ಲಿ ಡಾ. ರಾಜಶೇಖರ್ ಪಾಟೀಲ್, ಡಾ. ಶಿವಶಂಕರ್ ಬೊಮ್ಮ, ಜಿಲ್ಲಾ ಸರ್ವಕ್ಷಣ ಅಧಿಕಾರಿಗಳು, ಗ್ರಾಮ ಪಂಚಾಯತ್ ಅಧ್ಯಕ್ಷ ರಾಜಕುಮಾರ ಅಗಸಿ, ಅಭಿವೃದ್ಧಿ ಅಧಿಕಾರಿ ಭಾಗ್ಯಜ್ಯೋತಿ, ಬ್ಲಾಕ್ ಕಾಂಗ್ರೆಸ್ ಕಮಿಟಿ ಅಧ್ಯಕ್ಷ ಚಂದ್ರಶೇಖರ ಚನ್ನಶೆಟ್ಟಿ,ಕರಿಮಸಾಬ್ ಕಮಠಾಣಾ, ಮಸ್ತಾನೂರ್ ದಿನ್, ಸಲಾಮ್ ಪಾಶ,ಶಿವಪುತ್ರ ಸಾದಾ ಸಂತೋಷ್ ಕಮಲಪೂರ್, ಗಂಗಾ ಬಾಬು, ಶಿವಪುತ್ರ ಸಾದಾ, ಶಿರೋಮಣಿ, ರಾಜಕುಮಾರ್ ತರಿ, ಶಮಿ ಖುದುಸ್ ಆಸ್ಕರ್, ಆಶೀಫ್, ಕೈಲಾಸ,ಗೌತಮ್ ಬಗದಲಕರ್, ಉದಯ ಚಟನಳ್ಳಿ, ಮೋಹಿನ ಪಠಾಣ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಆಗಸ್ಟ್ 13ರಂದು ಮಂಗಲಗಿ ಗ್ರಾಮ ಪಂಚಾಯಿತಿಯಲ್ಲಿ ಗ್ರಾಮ ಸಭೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಮಂಗಲಗಿ ಗ್ರಾಮ ಪಂಚಾಯಿತಿಯಲ್ಲಿ ಜರುಗುವ ಸಾಮಾಜಿಕ ಲೆಕ್ಕ ಪರಿಶೋಧನೆಯಲ್ಲಿ ಗ್ರಾಮ ಪಂಚಾಯತ ಸಿಬ್ಬಂದ್ದಿಗಳು ಸಹಕರಿಸಬೇಕೆಂದು ಸಾಮಾಜಿಕ ಲೆಕ್ಕ ಪರಿಶೋಧನೆ ಕಾರ್ಯಕ್ರಮ ವ್ಯವಸ್ಥಾಪಕ ರಾಹುಲ್ ಕೈವಾರೆ ಹೇಳಿದರು. ತಾಲೂಕಿನ ಮಂಗಲಗಿ ಗ್ರಾಮ ಪಂಚಾಯತನಲ್ಲಿ ಹಮ್ಮಿಕೊಂಡ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಮತ್ತು 15ನೇ ಹಣಕಾಸು ಆಯೋಗದ ಹಾಗೂ ರಾಜ್ಯ ಹಣಕಾಸು ಆಯೋಗದ ಅನುದಾನದ ಸಾಮಾಜಿಕ ಲೆಕ್ಕ ಪರಿಶೋಧನೆಯ ಪೂರ್ವಭಾವಿ ಸಭೆಯಲ್ಲಿ ತಿಳಿಸಿದರು. ಆಗಸ್ಟ್ 6 ರಿಂದ 13ರ ವರೆಗೆ ಸಾಮಾಜಿಕ ಲೆಕ್ಕ ಪರಿಶೋಧನೆ ಜರುಗುತ್ತದೆ. ಆದ್ದರಿಂದ ಎಲ್ಲ ಕಡತಗಳು ನೀಡಬೇಕು ಎಂದರು. ಆಗಸ್ಟ್ 13ರಂದು ಬೆಳಗ್ಗೆ 10 ಗಂ-ಟೆಗೆ ಗ್ರಾಮ ಪಂಚಾಯತ ಆವಣದಲ್ಲಿ ಗ್ರಾಮ ಸಭೆ ಜರುಗಲಿದ್ದು, ಗ್ರಾಮಸ್ಥರನ್ನು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಒಂದು ದಿನ ಮುಂಚಿತವಾಗಿ ಡಂಗೂರ ಸಾರಿ ಗ್ರಾಮ ಸಭೆ ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷ ಪುಂಡಲಿಕ್ ಅರ್ಕಿ, ಅಭಿವೃದ್ಧಿ ಅಧಿಕಾರಿ ಬಸಪ್ಪ ಮುರಾಳೆ, ಐಇಸಿ ಸಂಯೋಜಕ ವಿಶ್ವನಾಥ ಗಡ್ಡಿಮನಿ, ತಾಂತ್ರಿಕ ಸಹಾಯಕ ಜೈಸಿಂಗ್ ರಾಠೋಡ್ ಗ್ರಾಮ ಸಂಪನ್ಮೂಲ ವ್ಯಕ್ತಿಗಳು, ಗ್ರಾಮ ಪಂಚಾಯತ ಸದಸ್ಯರು, ಸಿಬ್ಬಂದ್ದಿಗಳು, ಅಂಗನವಾಡಿ ಕಾರ್ಯಕರ್ತೆಯರು ಸೇರಿದಂತೆ ಇತರರು ಉಪಸ್ಥಿತರಿದ್ದರು.



ಬಸವಕಲ್ಯಾಣ :- ಕಾಳಗಿ ಪಟ್ಟಣದ ಸಾವಿರಾರು ಭಕ್ತರು ಶ್ರಾವಣ ಮಾಸದ ನಿಮಿತ್ಯ ಗುರುವಾರ ಹಾರಕೂಡ ಶ್ರೀಮಠಕ್ಕೆ ಬಂದು ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ದರ್ಶನ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಶ್ರೀ ರಾಜೇಶ ಜಗದೇವಯ್ಯ ಗುತ್ತೇದಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಸಮಾಜದಲ್ಲಿ ಅಂಕ ಡೊಂಕು ತಿದ್ದುವ ಕೆಲಸ ಪತ್ರಿಕಾ ರಂಗದಾಗಿದೆ ಮಾನಪ್ಪ ಶಿರವಾಳ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರದ ಕನ್ನಡ ಸಾಹಿತ್ಯ ಪರಿಷತ್ತಿನ ಕನ್ನಡ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಶಹಾಪುರ ತಾಲೂಕ ಘಟಕದಿಂದ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ತುಂಬಾ ಅಚ್ಚುಕಟ್ಟಾಗಿ ಜರುಗಿತು. ಇಡೀ ಕಾರ್ಯಕ್ರಮ ಸಮಾಜದ ಹಲವು ಸ್ಥಿತ್ಯಂತರಗಳಿಗೆ, ಪರಿವರ್ತನೆಗಳಿಗೆ ಪತ್ರಿಕೆಗಳು ಹೇಗೆ ಕಾರ್ಯನಿರ್ವಹಿಸುತ್ತಿವೆ ಮತ್ತು ಪ್ರಸ್ತುತ ಸ್ಥಿತಿಗತಿಗಳನ್ನು ಕುರಿತು ಚರ್ಚಿಸಿರುವುದು ತುಂಬಾ ಆರೋಗ್ಯಕರ ಬೆಳವಣಿಗೆ. ಪತ್ರಿಕೆ ಎನ್ನುವುದು ಸೃಜನಶೀಲ ಕಲೆ, ಪತ್ರಿಕೆಗಳನ್ನು ಭವಿಷ್ಯದ ಕನ್ನಡಿ ಮತ್ತು ಸಮಾಜದ ಕನ್ನಡಿ ಎಂದು ಕರೆಯುತ್ತಾರೆ. ಇಂತಹ ಪತ್ರಿಕೆಗಳಲ್ಲಿ ಕೌಶಲ್ಯ, ಸೃಜನಶೀಲತೆಯ ಬೆಳವಣಿಗೆಯಾಗಬೇಕು.

ಹೊಸ ಆಲೋಚನೆ ಹಾಗೂ ಹೊಸ ದೃಷ್ಟಿಕೋನವನ್ನು ಪತ್ರಿಕಾ ರಂಗದಲ್ಲಿ ಬೆಳೆಸಿಕೊಳ್ಳುವುದು ತುಂಬಾ ಅಗತ್ಯವಾಗಿದೆ. ಇವತ್ತಿನ ದಿನ ಪತ್ರಿಕೆ ವಿಶಿಷ್ಟವಾದ ಸುದ್ದಿಯನ್ನು ಓದುಗರಿಗೆ ನೀಡಬೇಕಾಗಿದೆ. ಆದರೆ ಇತ್ತೀಚಿನ ದಿನ ಪತ್ರಿಕೆಗಳಲ್ಲಿ ಕೇವಲ ರಾಜಕೀಯ ಕೇಂದ್ರಿತ ಸುದ್ದಿಗಳಿಗೆ ಹೆಚ್ಚಾಗಿ ಒತ್ತು ನೀಡುತ್ತಿದ್ದು, ಮೊದಲಿನಂತೆ ಪತ್ರಿಕೆಗಳಲ್ಲಿ ಸಾಹಿತ್ಯ ಹಾಗೂ ಸಾಂಸ್ಕೃತಿಕ ಮತ್ತು ಸಮಾಜದ ವಿವಿಧ ಕ್ಷೇತ್ರಗಳಿಗೆ ನೀಡುವ ಒತ್ತು ಇಂದು ಬಹಳಷ್ಟು ಕಾಣದೆ ಇರುವದು ವಿಷಾದನೀಯ. ಪತ್ರಿಕೆ ಒಳ್ಳೆಯ ಗುಣಮಟ್ಟದ ವಿಷಯಗಳಿಂದ ಓದುಗರನ್ನು ಸೆಳೆಯಬೇಕು. ಓದುಗರ ಮನಸ್ಸುಗಳೊಂದಿಗೆ ಪತ್ರಿಕೆ ಸಂವಹನ ಮಾಡಬೇಕು. ಓದುಗರಿಗೆ ಬೇಕಾಗುವ ವಿಶೇಷ ಮತ್ತು ವಿಶಿಷ್ಟ ಮಾಹಿತಿ, ಹೊಸ ಹುಡುಕಾಟ ಪತ್ರಿಕೆಯ ವಿಶೇಷತೆ ಆಗಿರುತ್ತದೆ. ನಾಲ್ಕನೇ ಅಂಗವಾಗಿರುವ ಪತ್ರಿಕೋದ್ಯಮವು ಸರ್ಕಾರ ಮತ್ತು ಜನರ ನಡುವಿನ ಸಂಪರ್ಕ ಸೇತುವೆಯಾಗಿ ಕಾರ್ಯನಿರ್ವಹಿಸುತ್ತದೆ ಎಂಬುದು ಮರೆಯುವಂತಿಲ್ಲ. ನಾಡು, ನುಡಿ, ಸಂಸ್ಕೃತಿ, ಕೃಷಿ, ನೀರಾವರಿ ಮುಂತಾದ ಕ್ಷೇತ್ರಗಳನ್ನು ಅಭಿವೃದ್ಧಿಪಡಿಸುವಲ್ಲಿ ಪತ್ರಿಕೆಗಳು ಹೆಚ್ಚಿನ ಜವಾಬ್ದಾರಿಯನ್ನು ಹೊಂದಿವೆ. ಜ್ಞಾನ ಪ್ರಸಾರದ ಕಾರ್ಯದಲ್ಲಿ ಜವಾಬ್ದಾರಿಯುತ ಸಮಾಜಕ್ಕೆ ಹಾಗೂ ಸಾಮಾಜಿಕ ಹೊಣೆಗಾರಿಕೆ ರೂಪಿಸುವಲ್ಲಿ ವಿವಿಧ ಬಗೆಯ ಪತ್ರಿಕೆಗಳು ತಮ್ಮ ಮಹತ್ತರ ಕಾರ್ಯವನ್ನು ನಿರ್ವಹಿಸುತ್ತಿವೆ. ಪತ್ರಿಕೆ ಮತ್ತು ಪತ್ರಕರ್ತರ ತಲ್ಲಣಗಳು, ಪ್ರಸ್ತುತ ಎದುರಿಸುತ್ತಿರುವ ಸಮಸ್ಯೆಗಳು, ಪತ್ರಿಕೆಗಳ ಮಹತ್ವ ಮುಂತಾದ ವಿಷಯಗಳು ಇವತ್ತಿನ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಸಂಶೋಧಕ ಡಾ. ಮೋನಪ್ಪ ಶಿರವಾಳ ಹಿರಿಯರು ಪೂಜ್ಯರಾದ ಡಾ. ಶರಣು ಗದ್ದುಗೆ ಸರ್, ಸಂಘದ ರಾಜ್ಯ ಸದಸ್ಯರು ಹಾಗೂ ಹಿರಿಯರಾದ ರಾಘವೇಂದ್ರ ಕಾಮನಟಗಿ ಸರ್, ಕ.ಸಾ.ಪ. ತಾಲೂಕ ಅಧ್ಯಕ್ಷರಾದ ಡಾ. ರವೀಂದ್ರನಾಥ ಹೊಸ್ಮನಿ ಹಿರಿಯ ಸಾಹಿತಿ ಡಾ. ಸಿದ್ದರಾಮ ಹೊನ್ಕಲ್ಲ ಸರ್, ಸಹೋದರ ವಿಶಾಲ ಶಿಂಧೆ ಅವರು ತಮ್ಮ ವಿಚಾರಗಳ ಮೂಲಕ ಬೆಳಕು ಚೆಲ್ಲಿದರು. ಒಟ್ಟಿನಲ್ಲಿ ಕಾರ್ಯಕ್ರಮ ಅರ್ಥಪೂರ್ಣವಾಗಿ ಜರುಗಿತು. ಹೊಸ ಚಿಂತನೆಗಳಿಗೆ, ಆಲೋಚನೆಗಳಿಗೆ ನಾಂದಿಯಾಡಿತು. ಇಂತಹ ಚಿಂತನಾಶೀಲ ಕಾರ್ಯಕ್ರಮದಲ್ಲಿ ಪತ್ರಕರ್ತರು, ವಿವಿಧ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಿರಿಯರು, ಸಾಂಸ್ಕೃತಿಕ ಮನಸ್ಸುಗಳು ಪಾಲ್ಗೊಂಡಿರುವುದು ತುಂಬಾ ವಿಶೇಷವಾಗಿತ್ತು. ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಪ್ರಶಸ್ತಿ ಪುರಸ್ಕೃತರಾದ ಶ್ರೀ ಬಸವರಾಜ ಕರೇಗಾರ ಹಾಗೂ ಮಂಜುನಾಥ ಸಗರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ನಮ್ಮ ತಾಲ್ಲೂಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಮುದ್ನೂರ ಅವರ ನೇತೃತ್ವದಲ್ಲಿ ಹಿರಿಯರ ಮಾರ್ಗದರ್ಶನ, ಸಹಾಯ, ಸಹಕಾರದಲ್ಲಿ ನಡೆದ ಪತ್ರಿಕಾ ದಿನಾಚರಣೆ ಹಲವು ಹೊಸ ಸಾಧ್ಯತೆಗಳಿಗೆ ನಾಂದಿಯಾಡಿದೆ ಎಂದು ಹೇಳಲು ತುಂಬಾ ಹೆಮ್ಮೆ ಎನಿಸುತ್ತದೆ. ಯುವ ಪತ್ರಕರ್ತ ಮಹೇಶ ಪತ್ತಾರ ಕಾರ್ಯಕ್ರಮ ನಿರೂಪಿಸಿದರು.

## ಕಾಡು ಬೆಳೆಸಿ ನಾಡು ಉಳಿಸಿ:ನ್ಯಾಯಧೀಶ ಪ್ರಶಾಂತ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಜಾಗತಿಕ ತಾಪಮಾನ ಹೆಚ್ಚಾಗುತ್ತಿರುವ ಇಂದಿನ ಜಗತ್ತು ಅಪಾಯದೆಡೆಗೆ ಸಾಗುತ್ತಿದೆ. ಅದಕ್ಕೆ ಪರಿಹಾರವೆಂದರೆ ಪರಿಸರ ರಕ್ಷಣೆ ಹಾಗೂ ಪರಿಸರ ಬೆಳೆಸುವುದಾಗಿದೆ ಎಂದು ಹುಮನಾಬಾದ ಸಿವಿಲ್ ಜೆಎಂಎಫ್ ಸಿ ನ್ಯಾಯಾಧೀಶರಾದ ಪ್ರಶಾತ ಬಾದವಾಡಿಗಿ ತಾಲ್ಲೂಕಿನ ಕನಕಟ್ಟಾ ಗ್ರಾಮದಲ್ಲಿ ಹುಮನಾಬಾದ, ವಕೀಲರ ಸಂಘ ಹುಮನಾಬಾದ, ಶಿಕ್ಷಣ ಇಲಾಖೆ ಹುಮನಾಬಾದ ಮತ್ತು ಅರಣ್ಯ ಇಲಾಖೆ ಹುಮನಾಬಾದ ಇವರ ಸಂಯುಕ್ತ ಆಶ್ರಯದಲ್ಲಿ ಸಸಿ ನೆಡುವ ಅಭಿಯಾನ ಮತ್ತು ಖಾಯಂ ಜನತಾ ನ್ಯಾಯಾಲಯದ ಧ್ಯೇಯೋದ್ದೇಶ ಕುರಿತು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಾ ನುಡಿದರು. ಅರಣ್ಯವು ನಮ್ಮ ಎಲ್ಲಾ ಬೇಡಿಕೆಗಳನ್ನು ಪೂರೈಸುತ್ತದೆ ಆದರೆ ದುರಾಸೆಯನ್ನಲ್ಲ; ನಾವು ಪರಿಸರವನ್ನು ಮಿತವಾಗಿ ಬಳಸಿ ಮುಂದಿನ ಪೀಳಿಗೆಗಳಿಗೆ ಉಳಿಸಬೇಕಾಗಿದ್ದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದರು.

ಪರಿಸರ ವಾಹಿನಿ ಅಧ್ಯಕ್ಷ ಶೈಲೇಂದ್ರ ಕಾವಡಿ ಮಾತನಾಡಿ, ಪ್ರಾಣಿ ಮತ್ತು ಪಕ್ಷಿ ಸಂಕುಲದ ಬಗ್ಗೆ ಎಲ್ಲರೂ ಅಭಿರುಚಿ ಮತ್ತು ಪ್ರೀತಿಯನ್ನು ಬೆಳೆಸಿಕೊಳ್ಳಬೇಕು. ಪರಿಸರದ ರಕ್ಷಣೆಯಾದಲ್ಲಿ ಮಾತ್ರ ಪ್ರಕೃತಿ ಸಮತೋಲನ ಸಾಧ್ಯ ಎಂದರು. ಕಾಡುಗಳು ನಾಶವಾಗುತ್ತಿದ್ದು ಭೂಮಿಯ ಮೇಲಿನ ಉಷ್ಣಾಂಶ ದಿನೇ ದಿನೇ ಏರುತ್ತಿದೆ. ಇದಕ್ಕೆ ಪರಿಸರ ನಾಶವೇ ಪ್ರಮುಖ ಕಾರಣವಾಗಿದೆ. ಪರಿಸರದ ಬಗ್ಗೆ ಅರಿವು ಮೂಡಿಸಲು ಶಾಲಾ ಕಾಲೇಜುಗಳಲ್ಲಿ ಪರಿಸರದ ಬಗ್ಗೆ ಮಾಹಿತಿ ನೀಡಬೇಕಿದೆ ಎಂದರು. ಇನ್ನೋರ್ವ ಸಂಪನ್ಮೂಲ ವ್ಯಕ್ತಿ ಡಿ. ಮಹಾದೇವಪ್ಪಾ ಹಿರಿಯ ನ್ಯಾಯವಾದಿಗಳು ಹುಮನಾಬಾದ ರವರು ಖಾಯಂ ಜನತಾ ನ್ಯಾಯಾಲಯದ ಕುರಿತು ತಿಳಿಸಿದರು. ಕಾರ್ಯಕ್ರಮದಲ್ಲಿ ಸಸಿ ನೀಡುವ ಅಭಿಯಾನವನ್ನು ನೆರವೇರಿಸಲಾಯಿತು ಈ ಕಾರ್ಯಕ್ರಮದಲ್ಲಿ ಶಿಕ್ಷಣ ಇಲಾಖೆಯ ಶ್ರೀ ಪ್ರೀತಮ್ ಸಿಂಗ್ ಜಾದವ್ ಕ್ಷೇತ್ರ ಸಮನ್ವಯ ಅಧಿಕಾರಿಗಳು, ಹುಮನಾಬಾದ, ಸಣ್ಣಹನುಮಗೌಡ ಗೌರವಾನ್ವಿತ ಪ್ರಧಾನ ನ್ಯಾಯಾಧೀಶರು ಹುಮನಾಬಾದ ಪ್ರಶಾಂತ ಹಿರೇಮಠ ಸರ್ಕಾರಿ ಅಭಿಯೋಜಕರು ಹುಮ್ನಾಬಾದ, ಶ್ರೀ ವಿಜಯಕುಮಾರ ಜೋತಗೊಂಡ ಉಪಾಧ್ಯಕ್ಷರು ತಾಲೂಕು ವಕೀಲರ ಸಂಘ ಹುಮ್ನಾಬಾದ, ಕುಮಾರಿ ಐಶ್ವರ್ಯ ಗೊಬ್ಬುರ ವಲಯ ಅಧಿಕಾರಿಗಳು ಪ್ರಾದೇಶಿಕ ವಲಯ ಹುಮ್ನಾಬಾದ, ಶ್ರೀಮತಿ ಉಮಾ ಎಂ ವಲಯ ಅಧಿಕಾರಿಗಳು ಸಾಮಾಜಿಕ ವಲಯ ಅಧಿಕಾರಿಗಳು ಹುಮನಾಬಾದ ವಿಜಯಕುಮಾರ ನಾತೆ ಪ್ರಧಾನ ಕಾರ್ಯದರ್ಶಿಗಳು ತಾಲೂಕು ವಕೀಲರ ಸಂಘ ಹುಮನಾಬಾದ ರವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಶಾಲೆಯ ಮುಖ್ಯ ಗುರುಗಳಾದ ಶ್ರೀ ಮಹಾವೀರ ಜಮಖಂಡಿ ಅಧ್ಯಕ್ಷೀಯ ಭಾಷಣ ಮಾಡಿದರು. ಶಾಲೆಯ ಸಿಬ್ಬಂದಿಗಳಾದ ಶ್ರೀ ನಂದಕುಮಾರ ಜಗದೀಶ ಸೋಮನಾಥ ಸಂಧ್ಯಾ ವಿಮಲಾ ಸಮೀರಾ ಕರುಣಾ ಪದ್ಮಾವತಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು. ಶ್ರೀಮತಿ ಜಯಶ್ರೀ ಕಾರ್ಯಕ್ರಮದ ನಿರೂಪಣೆ ಮಾಡಿದರು, ಸಂಧ್ಯಾ ವಂದಿಸಿದರು.

## ಕಾಡವಾದ: ಶಾಶ್ವತ ಲೋಕ ಅದಾಲತನ ಮಹತ್ವ ಕುರಿತು ಕಾನೂನು ಅರಿವು ನೆರವು

ಬೀದರ. ಆಗಸ್ಟ್.07- ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಬೀದರ ಮತ್ತು ಬೀದರ ತಾಲೂಕ ಪಂಚಾಯತ, ಕಾಡವಾದ ಗ್ರಾಮ ಪಂಚಾಯತ ಅವರುಗಳ ಸಂಯುಕ್ತಾಶ್ರಯದಲ್ಲಿಂದು ಕಾಡವಾದ ಗ್ರಾಮ ಪಂಚಾಯತದಲ್ಲಿ ಹಮ್ಮಿಕೊಂಡಿದ್ದ ಶಾಶ್ವತ ಲೋಕ ಅದಾಲತನ ಮಹತ್ವ ಮತ್ತು ಅದರ ಕಾರ್ಯವೈಖರಿ ಅಂಗವಾಗಿ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮಕ್ಕೆ ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಬೀದರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಕಾಶ ಅರ್ಜುನ ಬನಸೋಡೆ ಅವರು ಉದ್ಘಾಟಿಸಿ ಶಾಶ್ವತ ಲೋಕ ಅದಾಲತ್ನ ಮಹತ್ವ ಮತ್ತು ಅದರ ಕಾರ್ಯವೈಖರಿ ಬಗ್ಗೆ ಮಾತನಾಡಿದರು.

ನಂತರ ಅಲ್ಲಿನ ಕಾಡವಾದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಶಾಲೆಯನ್ನು ವಿಕ್ಷಣೆ ಮಾಡಿದ್ದರು.

ಈ ಸಂದರ್ಭದಲ್ಲಿ ಬೀದರ ಜಿಲ್ಲಾ ವಕೀಲರ ಸಂಘದ ಜಂಟಿ ಕಾರ್ಯದರ್ಶಿ ಬಜರಂಗ ಪಿ.ಖಾಶೆಂಪೂರ ವಕೀಲ ಅಬ್ದುಲ್ ಹಫೀಜ್, ಕಾಡವಾದ ಗ್ರಾಮ ಪಂಚಾಯತ ಪಿಡಿಓ ಶಿವಕುಮಾರ ಪಾಟೀಲ, ವಕೀಲ ಮನಮಥ ಸೇರಿದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕಾಡವಾದ ಗ್ರಾಮ ಪಂಚಾಯತ ಸಿಬ್ಬಂದಿ ವರ್ಗದವರು, ಗ್ರಾಮಸ್ಥರು ಉಪಸ್ಥಿತರಿದ್ದರು.

## ಆದರ್ಶ ಗ್ರಾಮದಲ್ಲಿ ಯಾವುದೇ ಅಭಿವೃದ್ಧಿ ಕಾಮಗಾರಿಗಳು ಆಗಿಲ್ಲ:- ಗ್ರಾಮಸ್ಥರ ಆರೋಪ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ತಾಲೂಕಿನ ಮಾಡಗೂಳ ಗ್ರಾಮಕ್ಕೆ 2022-23ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಆದರ್ಶ ಗ್ರಾಮ ಅಂತ ಆಯ್ಕೆ ಮಾಡಲಾಗಿತ್ತು. ಈ ಗ್ರಾಮಕ್ಕೆ 5 ವರ್ಷದಲ್ಲಿ ಗ್ರಾಮದ ಸಮಗ್ರ ಅಭಿವೃದ್ಧಿಗೆ ಈ ಯೋಜನೆ ರೂಪಿಸಲಾಯಿತ್ತು. ಈ ಗ್ರಾಮದ ಅಭಿವೃದ್ಧಿಗೆ 20.ಲಕ್ಷ ರೂಪಾಯಿ ಅನುದಾನ ಬಿಡುಗಡೆ ಆಗಿತ್ತು ಎಂದು ಗ್ರಾಮಸ್ಥರು ತಿಳಿಸಿದ್ದಾರೆ. ಆದರೆ ಗ್ರಾಮದಲ್ಲಿ ಯಾವುದೇ ಅಭಿವೃದ್ಧಿ ಬದಲಾವಣೆ ಕಂಡು ಬರುತ್ತಿಲ್ಲ ಎಂದು ಗ್ರಾಮಸ್ಥರು ಆಪಾದನೆ ಮಾಡಿದ್ದಾರೆ. ಗ್ರಾಮದ ಬಸವೇಶ್ವರ ದೇವಸ್ಥಾನಕ್ಕೆ ಹೋಗುವ ದಾರಿ ಹದಗೆಟ್ಟು ರಸ್ತೆ ಮೇಲೆ ನೀರು ನಿಂತಿವೆ. ಅಲ್ಲಿಯೇ ಅಂಗನವಾಡಿ ಕೇಂದ್ರ ಇದೆ. ಸಣ್ಣ ಮಕ್ಕಳಿಗೆ ಓಡಾಡಲು ತೀವ್ರ ತೊಂದರೆ ಆಗುತ್ತಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ. ಈ ಕೂಡಲೇ ಸಂಬಂಧ ಪಟ್ಟ ಅಧಿಕಾರಿಗಳು ಗಮನ ಹರಿಸಿ ಗ್ರಾಮದಲ್ಲಿ ಅಭಿವೃದ್ಧಿ ಕೆಲಸಗಳು ಮಾಡಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

## ಪರಿಶಿಷ್ಟರ ಹಣ ಗ್ಯಾರೆಂಟಿಗೆ ಬಳಸಕೂಡದು ಸರ್ಕಾರಕ್ಕೆ ಮೌನೇಶ್ ಕನ್ನಕ್ಕೊಳ್ಳೂರು ಆಗ್ರಹ



ಯಾದಗಿರಿ:"ಪರಿಶಿಷ್ಟರ ಹಣ ಪರಿಶಿಷ್ಟರಿಗೆ ಮಾತ್ರ" ಎಸ್.ಸಿ.ಎಸ್.ಪಿ-ಟಿ.ಎಸ್.ಪಿ-2013 ರ ಕಾಯ್ದೆಯ ಸಮರ್ಪಕ ಜಾರಿಗೆ ಒತ್ತಾಯಿಸಿ ಗುರುವಾರ ಇಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರತಿಭಟನೆ ನಡೆಸಿ ಮುಖ್ಯಮಂತ್ರಿಗಳಿಗೆ ಬರೆದ ಮನವಿ ಸಲ್ಲಿಸಿತು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಎದುರಿಗೆ ಪ್ರದರ್ಶನ ನಡೆಸಿದ ದಸಂಸ ಕಾರ್ಯಕರ್ತರು, ಎಸ್.ಸಿ.ಎಸ್.ಪಿ.-ಟಿ.ಎಸ್.ಪಿ ಕಾಯ್ದೆ 2013 ನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರು ಆರ್ಥಿಕವಾಗಿ ಹಾಗೂ ಶೈಕ್ಷಣಿಕವಾಗಿ ಅಭಿವೃದ್ಧಿ ಅವಕಾಶಗಳನ್ನು ಶಾಸನಬದ್ಧವಾಗಿ ಹೊಂದಲು ರಾಜ್ಯ ಸರ್ಕಾರಗಳು ಕಾಯ್ದೆ ರೂಪಿಸಿದೆ.

ಈ ಕಾಯ್ದೆಯ ಕಲಂ 7ಡಿ ಮತ್ತು 7ಸಿ ರಲ್ಲಿ ಕಾಯ್ದೆಯಡಿ ನಿಗಧಿಪಡಿಸಿದ ಅನುದಾನವನ್ನು ಅನ್ಯ ಉದ್ದೇಶಗಳಿಗೆ ಬಳಸಿಕೊಂಡು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳನ್ನು ಸರ್ಕಾರಗಳು ವಂಚಿಸುತ್ತಿವೆ. ಆದ್ದರಿಂದ 7ಡಿ ಮತ್ತು 7ಸಿ ಕಲಂಗಳನ್ನು ರದ್ದುಪಡಿಸುವಂತೆ ಹಲವಾರು ದಲಿತರ ಹೋರಾಟಗಳ ಫಲದಿಂದ 7ಡಿ ರದ್ದು ಮಾಡಿ 7ಸಿ ಯನ್ನು ಯಥಾಪ್ರಕಾರ ಉಳಿಸಿಕೊಂಡು ಅನ್ಯ ಕಾರ್ಯಗಳಿಗೆ ಬಳಸುತ್ತಿದೆ.

ಆದರೆ ಪ್ರಸ್ತುತ ಸರ್ಕಾರ ಘೋಷಿಸಿರುವ ಗ್ಯಾರಂಟಿ ಯೋಜನೆಗಳಿಗೆ ಎಸ್ಸಿಪಿ ಟಿಎಸ್‌ಪಿ ಹಣ ರಾಜಾರೋಷವಾಗಿ ಬಳಕೆಮಾಡಿಕೊಳ್ಳುತ್ತಿರುವುದೇ ಇದಕ್ಕೆ ಸಾಕ್ಷಿ ಮೌನೇಶ ಕನ್ಯಕೊಲ್ಲೂರು, ಹೇಳಿದರು

ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಕಟ್ಟಿಮನಿ, ಅಶೋಕ ಗುರುಮಠಕಲ್, ಹಣುಮಂತ ಗೊಬ್ಬೂರ ಶಹಾಪೂರ, ಶಿವಶರಣಪ್ಪ ಸಾವೂರ, ಭೀಮರಾಯ ಕರಣಿಗಿ, ಆಂಜಿನೇಯ ಟೊಣ್ಣೂರು, ಶರಣಪ್ಪ ಉಕ್ಕನಾಳ, ಆಕಾಶ ದೊಡ್ಡಮನಿ, ಸೂರ್ಯಕಾಂತ ಗುತ್ತಿಪೇಟೆ, ಭೀಮಾಶಂಕರ ಮಲ್ಹಾರ, ಹೊನ್ನಪ್ಪ, ನಾಟೇಕರ್, ಸುಂದರ ರಸ್ತಾಪೂರ, ಹಣಮಂತ ಹುಲಕಲ್, ಶಂಕರು ಮದ್ದರಕಿ, ಶರಣಪ್ಪ ಮದ್ದರಕಿ, ಬಸವರಾಜ ಜಗಲಿ, ಮಲ್ಲಿಕಾರ್ಜುನ ಸಿಂಗರಿ, ಯಲ್ಲಪ್ಪ ಮಲದಕಲ್, ರಿಯಾಜ್ ಗುರುಮಠಕಲ್, ಸುರೇಶ, ಕೃಷ್ಣ ಸೇರಿದಂತೆ ಅನೇಕರು ಇದ್ದರು.

# ಪ್ರತಿಷ್ಠಿತ "ಬಸವ ಪುರಸ್ಕಾರ" ಪ್ರಶಸ್ತಿಗೆ ಆಯ್ಕೆಯಾದ ಬಸವರಾಜ ದೇಶಮುಖ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ;ಅ.7: ಖ್ಯಾತ ಶಿಕ್ಷಣ ತಜ್ಞ ಮತ್ತು ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ ಅವರನ್ನು ಬೆಂಗಳೂರು ಮೂಲದ ಬಸವ ಪರಿಷತ್ತು ಸ್ಥಾಪಿಸಿದ ಪ್ರತಿಷ್ಠಿತ "ಬಸವ ಪುರಸ್ಕಾರ" ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.ಬಸವಪರಿಷತ್ತಿನಿಂದ ಬಂದ ಪತ್ರದ ಪ್ರಕಾರ, ಶಿಕ್ಷಣ ಮತ್ತು ಸಾಮಾಜಿಕ ಸೇವೆ ಕ್ಷೇತ್ರದಲ್ಲಿ ಶ್ರೀ ಬಸವರಾಜ ಎಸ್ ದೇಶಮುಖ ಅವರ ಅಪಾರ ಕೊಡುಗೆಯನ್ನು ಗುರುತಿಸಿ ಪ್ರಶಸ್ತಿಯನ್ನು ಕೊಡಮಾಡಲು ಆಯ್ಕೆ ಮಾಡಲಾಗಿದೆ. ಆಗಸ್ಟ್ 09 ರಂದು ಬೆಂಗಳೂರಿನ ಅರಮನೆ ರಸ್ತೆಯ ಕೊಂಡಜ್ಜಿ ಬಸಪ್ಪ ಸಭಾಂಗಣದಲ್ಲಿ ಶ್ರೀ ದೇಶಮುಖ ಅವರಿಗೆ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು ಎಂದು ಸ್ವೀಕರಿಸಿದ ಪತ್ರದಲ್ಲಿ ತಿಳಿಸಲಾಗಿದೆ.ಮೈಸೂರು ಜಿಲ್ಲೆಯ ಸುತ್ತೂರಿನ ಪರಮ ಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯಸಾನಿಧ್ಯದಲ್ಲಿ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು. ಸುಪ್ರೀಂ ಕೋರ್ಟ್‌ನ ಮಾಜಿ ನ್ಯಾಯಾಧೀಶ ಶ್ರೀ ನ್ಯಾಯಮೂರ್ತಿ ಎನ್ ಸಂತೋಷ್ ಹೆಗ್ಡೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಮಿಕ ಸಚಿವ ಶ್ರೀ ಸಂತೋಷ್ ಲಾಡ್, ಶಿವಮೊಗ್ಗ ಸಂಸದ



ಬಿ ವೈ ರಾಘವೇಂದ್ರ, ಹರಪನಹಳ್ಳಿ ಶಾಸಕಿ ಎಂ ಪಿ ಲತಾ ಮಲ್ಲಿಕಾರ್ಜುನ ಮತ್ತು ಇತರರು ಸಮಾರಂಭದಲ್ಲಿ ಉಪಸ್ಥಿತರಿರುವರು.

ಬಸವ ಪುರಸ್ಕಾರ ಪ್ರಶಸ್ತಿಯನ್ನು ಸ್ವೀಕರಿಸಲಿರುವ ಪ್ರಮುಖರಲ್ಲಿ ಬಾಹ್ಯಾಕಾಶ ವಿಜ್ಞಾನ ಕ್ಷೇತ್ರದಲ್ಲಿ ನೀಡಿದ ಕೊಡುಗೆಗಾಗಿ ಇಸ್ರೋ ಮಾಜಿ ಅಧ್ಯಕ್ಷ ಡಾ. ಎ ಎಸ್ ಕಿರಣ್‌ಕುಮಾರ್, ಪರಿಸರ ಕ್ಷೇತ್ರದಲ್ಲಿ ನೀಡಿದ ಕೊಡುಗೆಗಾಗಿ ಶ್ರೀಮತಿ ಅಲ್ಮಿತ್ರಾ ಪಟೇಲ್, ಕಾನೂನು ಕ್ಷೇತ್ರದಲ್ಲಿ ನೀಡಿದ ಕೊಡುಗೆಗಾಗಿ ಕಾನೂನು ತಜ್ಞ ಪ್ರೊ. ರವಿವರ್ಮ ಕುಮಾರ್, ಮಾಜಿ ಸಚಿವ ಎಸ್ ಆರ್ ಪಾಟೀಲ್ (ಶಿಕ್ಷಣ ಮತ್ತು ಸಹಕಾರ),ಶ್ರೀಮತಿ ಉಮಾಶ್ರೀ (ರಂಗಭೂಮಿ ಮತ್ತು ಸಿನಿಮಾ) ಹಾಗೂ ಇನ್ನಿತರರು ಸೇರಿದ್ದಾರೆ. ಬಸವ ಪುರಸ್ಕಾರ ಪ್ರಶಸ್ತಿಯನ್ನು ಸ್ವೀಕರಿಸಲು ವಿವಿಧ ಕ್ಷೇತ್ರಗಳ ಒಟ್ಟು 15 ವ್ಯಕ್ತಿಗಳನ್ನು ಆಯ್ಕೆ ಮಾಡಲಾಗಿದೆ.ಸಮಾಜದಲ್ಲಿ ಅಣ್ಣಾ ಅವರು ಎಂದೇ ಚಿರಪರಿಚಿತರಾದ ಶ್ರೀ ಬಸವರಾಜ ದೇಶಮುಖ ಅವರಿಗೆ 2025ರ ಈ ಪ್ರತಿಷ್ಠಿತ "ಬಸವಪುರಸ್ಕಾರ" ಲಭಿಸಿದ್ದಕ್ಕಾಗಿ ಮಹಾದಾಸೋಹಿ ಶ್ರೀ ಶರಣಬಸವೇಶ್ವರ ಸಂಸ್ಥಾನದ 8ನೇ ಪೀಠಾಧಿಪತಿಗಳು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ, ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಚೇರಪರ್ಸನ್ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ,ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಅನಿಲಕುಮಾರ ಬಿಡವೆ, ಕುಲಸಚಿವ ಡಾ. ಎಸ್ ಜಿ ಡೊಳ್ಳೆಗೌಡರ್ ಹಾಗೂ ಡೀನ್ ಡಾ. ಲಕ್ಷ್ಮೀ ಪಾಟೀಲ ಮಾಕಾ ಹರ್ಷ ವ್ಯಕ್ತಪಡಿಸಿದ್ದಾರೆ.

# ಕಮಲನಗರ ತಾ.ಪಂ. ನಿಂದ ಪ್ರಗತಿ ಪರಿಶೀಲನೆ ಸಭೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.7:ತಾಲೂಕು ಪಂಚಾಯತ ಸಭಾಂಗಣದಲ್ಲಿ ಎಲ್ಲಾ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ,ಡಿಇಓ ಹಾಗೂ ನರೇಗಾ ಸಿಬ್ಬಂದಿಗಳಿಗೆ ಓಒಖ ತಂತ್ರಾಂಶ ಬಳಕೆ ತರಬೇತಿ ಮತ್ತು ವಿವಿಧ ಯೋಜನೆಗಳ ಕುರಿತು ಮಾನ್ಯ ಕಾರ್ಯನಿರ್ವಾಹಕಅಧಿಕಾರಗಳಾದ ಹಣಮಂತರಾಯ ಕೌಟಗೆ ಸರ್ ರವರ ಅಧ್ಯಕ್ಷತೆಯಲ್ಲಿ ಪ್ರಗತಿ ಪರಿಶೀಲನೆ ಸಭೆ ನಡೆಸಲಾಯಿತು.

ಕರ ವಸೂಲಾತಿ ಕಡಿಮೆ ಇರುವ ಗ್ರಾಮ ಪಂಚಾಯತಗಳು ಹೆಚ್ಚಿನ ಪ್ರಗತಿ ಸಾಧಿಸಬೇಕೆಂದು ಕಾರ್ಯನಿರ್ವಾಹಕಅಧಿಕಾರಿಗಳಾದ ಹಣಮಂತರಾಯ ಕೌಟಗೆ ತಿಳಿಸಿದರು. ಹೌಸಿಂಗ್ ಜಿಪಿಎಸ್ ಮಾಡುವಾಗ ಫಲಾನುಭವಿ ಮತ್ತು ಗ್ರಾ.ಪಂ.ನ ಯಾರಾದರೂ ಒಬ್ಬರು ಸಿಬ್ಬಂದಿಗಳು ಇರಲೇಬೇಕು. ಹಾಗೂ ಮನೆ ಮತ್ತು ಫಲಾನುಭವಿಯ ಪೂರ್ಣ ಛಾಯಾಚಿತ್ರವನ್ನು ತೆಗೆಯಲು ತಿಳಿಸಿದರು. ವಸತಿ ಯೋಜನೆಗೆ ಸಂಬಂಧಿಸಿದಂತೆ ಇರುವ ಸಮಸ್ಯೆಗಳ ಬಗ್ಗೆ ಚರ್ಚಿಸಿ, ಪರಿಹಾರ ತಿಳಿಸಿದರು. ಹಾಗೂ ಎಸ್.ಬಿ.ಎಂ ಗುರಿಗಳಲ್ಲಿನ ವ್ಯತ್ಯಾಸದ ಸಮೀಕ್ಷೆಯ ಬಗ್ಗೆ ಕುರಿತು ಚರ್ಚಿಸಿದರು.ಅರ್ಹ ಫಲಾನುಭವಿಗೆ ಯೋಜನೆಗಳ ಉಪಯೋಗವಾಗುವಂತೆ ಎಲ್ಲ ಅಧಿಕಾರಿಗಳು ಜನಸ್ನೇಹಿಯಾಗಿ ಕೆಲಸ ನಿರ್ವಹಿಸಿ ಎಂದರು. ಜೊತೆಗೆ ಉದ್ಯೋಗ ಖಾತ್ರಿ ಯೋಜನೆ, ಸ್ವಚ್ಛ ಭಾರತ ಮಿಷನ್, ಕುಡಿಯುವ ನೀರು ಮತ್ತು ನೈರ್ಮಲ್ಯ ಸೇರಿದಂತೆ ಇತರೆ ವಿಷಯಗಳ, ಬೂದು ನೀರು ನಿರ್ವಹಣೆ, ವಿಮೆ ನೋಂದಣಿ ಅಭಿಯಾನ ಸೇರಿದಂತೆ ಸಭೆಯಲ್ಲಿ ಚರ್ಚಿಸಿದರು.ಎನ್.ಎಂ.ಎಂ.ಎಸ್ ತಂತ್ರಾಂಶವನ್ನು ಯಾವ ರೀತಿ ಬಳಕೆ ಮಾಡಬೇಕೆಂದು ಸವಿವರವಾಗಿ ಎಂಐಎಸ್ ಸಂಯೋಜಕರಾದ ಶಾಜೀಬ್ ತಲಹಾ ವಿವರಿಸಿದರು.ಈ ಸಂದರ್ಭದಲ್ಲಿ ತಾಲೂಕಾ ನೋಡಲ್ ಆಫೀಸರ್ ಶ್ರೀನಿವಾಸ,ಎಲ್ಲಾ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಾದ ದತ್ತಾತ್ರಿ, ಪ್ರಶಾಂತ, ಮಲ್ಲೇಶ, ಮನೋಹರ, ವೆಂಕಟೇಶ, ಪ್ರಭುದಾಸ, ರಾಮದಾಸ, ನಿರ್ಮಲಾ, ಶೇಷಪ್ಪ, ಬಾಷಾ, ಡಿಇಓ ಮಹೇಶ, ವಿಠಲ, ಸದಾಶಿವ, ಬಸವರಾಜ, ಸಂಜು, ಅನಿಲ, ತಾ.ಪಂ. ಸಿಬ್ಬಂದಿಗಳಾದ ಗ್ರೇಡ್– 2 ಕಾರ್ಯದರ್ಶಿ ನೈಯೀಮ್, ಪ್ರಥಮ ದರ್ಜೆ ಸಹಾಯಕ ವಿದ್ಯಾಸಾಗರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರಾದ ಪೀಟರ, ಆದಿತ್ಯ, ಟಿಸಿ ಅಮರ, ಐಇಸಿ ಸಂಯೋಜಕರಾದ ಸವಿತಾ ನಾಗೇಶ, ಆಡಳಿತ ಸಹಾಯಕರಾದ ಸಪ್ನಾ, ಟಿಎ ವಿನೋದ, ಶೇಖರ, ರಾಘವೇಂದ್ರ, ಅರ್ಜುನ, ಹಾಜರಿದ್ದರು.

# ಸ್ವಾತಂತ್ರ್ಯೋತ್ಸವ ದಿನಾಚರಣೆ ಅದ್ದೂರಿಯಾಗಿ ಆಚರಿಸೋಣ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಬೀದರ. ಆ.07 : ಪ್ರತಿ ವರ್ಷದಂತೆ ಈ ವರ್ಷವು ಆಗಸ್ಟ್.15ರಂದು ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ಎಲ್ಲರೂ ಸೇರಿ ಅದ್ದೂರಿಯಾಗಿ ಆಚರಿಸೋಣ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹೇಳಿದರು.ಅವರು ಗುರುವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕರೆದ ಸ್ವಾತಂತ್ರ್ಯೋತ್ಸವ ದಿನಾಚರಣೆ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಹಿಸಿದ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಮತ್ತು ತಾವು ತೈಯಾರಿ ಮಾಡಿಕೊಂಡ ಮಾಹಿತಿಯನ್ನು ನೀಡಬೇಕು ಹಾಗೂ ಧ್ವಜಾರೋಹಣ ಸಂದರ್ಭದಲ್ಲಿ ಎಲ್ಲೂ ಧ್ವಜ ತಲೆ ಕೆಳಗಾಗದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.ಆಗಸ್ಟ್.15 ರಂದು



ಬೆಳಿಗ್ಗೆ 8 ಗಂಟೆಗೆ ಎಲ್ಲಾ ಸರಕಾರಿ ಹಾಗೂ ಅರೆ ಸರಕಾರಿ ಕಛೇರಿ ಮತ್ತು ಶಾಲಾ–ಕಾಲೇಜುಗಳಲ್ಲಿ ಧ್ವಜಾರೋಹಣ ನೆರವೇರಿಸಿ ಎಲ್ಲರೂ ಬೀದರ ಜಿಲ್ಲಾ ನೆಹರು ಕ್ರೀಡಾಂಗಣದಲ್ಲಿ 8:45 ಕ್ಕೆ ಬಂದು ಸೇರಬೇಕು 9 ಗಂಟೆಗೆ ಕ್ರೀಡಾಂಗಣದಲ್ಲಿ ಧ್ವಜಾರೋಹಣ ಇರುತ್ತದೆ. ಆಗಸ್ಟ್ 14 ಮತ್ತು 15 ರಂದು ಎರಡು ದಿನ ಎಲ್ಲಾ ಸರಕಾರಿ ಕಛೇರಿಗಳ ಮೇಲೆ ದೀಪಾಲಂಕಾರ ಮಾಡಬೇಕೆಂದು ಹೇಳಿದರು.

ಕಾರ್ಯಕ್ರಮ ಅಚ್ಚುಕಟ್ಟಾಗಿ ನಡೆಸಲು ಅದಕ್ಕಾಗಿ ಒಂದು ಸಮಿತಿಯನ್ನು ರಚಿಸಲಾಗಿದೆ.ಲೋಕೋಪಯೋಗಿ ಇಲಾಖೆಯವರು ಜಿಲ್ಲಾ ನೆಹರು ಕ್ರೀಡಾಂಗಣದಲ್ಲಿ ಮಳೆ ನೀರು ನಿಲ್ಲದಂತೆ ಮತ್ತು ವೇದಿಕೆಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕೆಂದರು.ನಗರಸಭೆ ವತಿಯಿಂದ ಕ್ರೀಡಾಂಗಣದ ಸ್ವಚ್ಚತೆ ಮತ್ತು ಮೂಲಭೂತ ಸೌಕರ್ಯಗಳು ಇರುವಂತೆ ನೋಡಿಕೊಳ್ಳಬೇಕು. ಶಿಕ್ಷಣ ಇಲಾಖೆ ವತಿಯಿಂದ ಪ್ರಬಂಧ ಹಾಗೂ ಭಾಷಣ ಸ್ಪರ್ದೆಗಳನ್ನು ಶಾಲಾ–ಕಾಲೇಜುಗಳಲ್ಲಿ ಏರ್ಪಡಿಸುವುದರ ಜೊತೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡಬೇಕೆಂದು ಹೇಳಿದರು.ಇದೇ ಸಂದರ್ಭದಲ್ಲಿ ಸರಕಾರಿ ಕಾರ್ಯಕ್ರಮಗಳಲ್ಲಿ ಅನುಸರಿಸಬೇಕಾದ ಶಿಷ್ಠಾಚಾರ ಪಾಲನೆ ಕುರಿತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತ್ರೈಮಾಸಿಕ ಸಭೆ ನಡೆಯಿತು. ಈ ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ.ಕರಾಳೆ, ಬೀದರ ಸಹಾಯಕ ಆಯುಕ್ತ ಎಂ.ಡಿ.ಶಕೀಲ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಚಂದ್ರಕಾಂತ ಶಾಬಾದಕರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಸಿಂಧೆ, ಕರ್ನಾಟಕ ನಾಟಕ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಸುರೇಶ್ ಚನ್ನಶೆಟ್ಟಿ, ಸೇರಿದಂತೆ ಇತರೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# 'ದಸರಾ ದರ್ಬಾರ್' ವಿರುದ್ಧ ಪ್ರತಿಭಟನೆಗೆ ಸ್ವಾಮೀಜಿ ಕರೆ

ಬೀದರ. ಅ. 07 : 'ಬಸವಕಲ್ಯಾಣದಲ್ಲಿ ದಸರಾ ದರ್ಬಾರ್ ಹೆಸರಿನಲ್ಲಿ ಬಸವಣ್ಣನವರಿಗೆ ಅವಮಾನಿಸುವ ಹಾಗೂ ಲಿಂಗಾಯತ ಧರ್ಮದ ವಿರುದ್ಧ ಕುತಂತ್ರ ಹೆಣೆಯುತ್ತಿರುವ ಬಸವ ದ್ರೋಹಿಗಳ ವಿರುದ್ಧ ನಾಡಿನ ಬಸವಪರ, ಹಿಂದುಳಿದ ಮಠಗಳ ಸ್ವಾಮೀಜಿ, ಸಂಘಟಕರು, ಭಕ್ತರು ಒಗ್ಗಟ್ಟಿನಿಂದ ಸಿಡಿದೇಳಬೇಕು' ಎಂದು ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು ಹೇಳಿದ್ದಾರೆ.



'ಜಗತ್ತು ಬಸವಣ್ಣನವರನ್ನು ಜಗದ್ಗುರು, ಜಗಜ್ಯೋತಿ ಎಂದು ವಂದಿಸುತ್ತಿದೆ. ಆದರೆ, ಬಸವತತ್ವವನ್ನು ಒಪ್ಪಿಕೊಳ್ಳದ ಕೆಲವರು ಬಸವಕಲ್ಯಾಣದ ಭೂಮಿಯಲ್ಲಿ ತಮ್ಮ ವ್ಯಕ್ತಿ ಪ್ರತಿಷ್ಠೆಯ ವೈಭವ ಮೆರೆಯಲು ಮುಂದಾಗಿದ್ದಾರೆ' ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

'ಬಸವಣ್ಣನವರು ವೀರಶೈವ ಧರ್ಮ ಸ್ವೀಕರಿಸಿದರು ಎಂಬ ಹಸಿ ಸುಳ್ಳನ್ನು ಹಬ್ಬಿಸುವ ಆಚಾರ್ಯರು, ಬಸವಕಲ್ಯಾಣದ ಭೂಮಿಯಲ್ಲಿ ಬಂದು ಬಸವತತ್ವಕ್ಕೆ ದ್ರೋಹ ಬಗೆಯುವ ಎಲ್ಲಾ ಸಿದ್ಧತೆ ನಡೆಸುತ್ತಿದ್ದಾರೆ' ಎಂದು ಆರೋಪಿಸಿದರು.

'ಬಸವಕಲ್ಯಾಣದಲ್ಲಿ ಆಗಸ್ಟ್ 17ರ ಬೆಳಿಗ್ಗೆ ಬಸವಭಕ್ತರ ಸಭೆ ಕರೆಯಲಾಗಿದೆ. ಹಿರಿಯ ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ಚರ್ಚಿಸಿ, ಮುಂದಿನ ನಡೆ ನಿರ್ಧರಿಸಲಾಗುವುದು.ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು' ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಕ್ಷಕರು ರಾಷ್ಟ್ರ ನಿರ್ಮಾಪಕರು:ಬಿಇಒ ಸಿ.ಜಿ.ಹಳ್ಳದ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.7: ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾಗಿದೆ.ಹಾಗಾಗಿ ಶಿಕ್ಷಕರು ಭವ್ಯ ಭಾರತದ ರಾಷ್ಟ್ರ ನಿರ್ಮಾಪಕರು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ ಅಭಿಪ್ರಾಯಪಟ್ಟರು.

ತಾಲೂಕಿನ ಮಾಣಿಕೇಶ್ವರಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡ ವಯೋನಿವೃತ್ತ ವಿಮಲಾ ರಾಜೇಶ್ವರೆ ಬೀಳ್ಕೊಡುಗೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳ ಜೀವನದಲ್ಲಿ ಬೆಳಕು ಚೆಲ್ಲಲು ಗುರುವಿನ ಮಾರ್ಗದರ್ಶನ ಅಗತ್ಯ.ಶಿಕ್ಷಕಿ ವಿಮಲಾ ಅವರು ಅತ್ಯಂತ ಸಂಯಮದಿಂದ ಕರ್ತವ್ಯ ನಿರ್ವಹಿಸಿ ,ತಾನು ದುಡಿದ



ಶಾಲೆಯ ಸವಿನೆನಪಿಗಾಗಿ ಸ್ಮಾರ್ಟ್ ಟಿ ವಿ ದೇಣಿಗೆ ನೀಡಿದ್ದು ಅವರ ಉದಾರತೆ ತೋರುತ್ತದೆ.ವಿಮಲಾ ಶಿಕ್ಷಕಿಯರ ನಿವೃತ್ತಿ ಜೀವನದಲ್ಲಿ ಭಗವಂತ ಸಕಲ ಆಯೂರಾರೋಗ್ಯ,ಐಶ್ವರ್ಯ ನೀಡಿ ಕರುಣಿಸಲಿ ಎಂದು ಶುಭ ಹಾರೈಸಿದರು.

ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ದತ್ತಾತ್ರಿ ಕಾಟಕರ್ ಮಾತನಾಡಿ,ವಿಮಲಾ ಶಿಕ್ಷಕಿಯರು ಬಿಲ್ ಮತ್ತು ಬೆಲ್‌ಗೆ ಕಾಯದೆ ಅತ್ಯಂತ ನಿಷ್ಠೆಯಿಂದ ತಮ್ಮ ಶಿಕ್ಷಕಿ ವೃತ್ತಿ ನಿರ್ವಹಿಸಿದ್ದಾರೆ. ಅವರ ಕಾಯಕ ನಿಷ್ಠೆ ಇತರರಿಗೆ ಮಾದರಿಯಾಗಿದೆಎಂದರು.ನಿವೃತ್ತ ಶಿಕ್ಷಕಿ ವಿಮಲಾ ಮಾತನಾಡಿ,ನನ್ನ ವೃತ್ತಿ ಜೀವನದಲ್ಲಿ ಮೇಲಾಧಿಕಾರಿಗಳು,ಸಹದ್ಯೋಗಿಗಳು,ಪಾಲಕರು ನೀಡಿದ ಸಹಕಾರ ಮರೆಯಲಿಕ್ಕಾಗಲ್ಲ ಎಂದು ಆನಂದದ ಭಾಷ್ಪದಲ್ಲಿ ಹೇಳಿದರು.

ಈ ಸಂದರ್ಭದಲ್ಲಿ ತಾಪಂ ಮಾಜಿ ಉಪಾಧ್ಯಕ್ಷ ಮಾರುತಿರಾವ ಸಗರ ,ಇಸಿಒ ಸಹದೇವ ಗೌಡಗಾವೆ, ಪ್ರಮುಖರಾದ ನೀರಂಜಪ್ಪ ಪಾತ್ರೆ,ಮಹೇಂದ್ರ ಮಾನಕರ,ಸಂತೋಷ ಮುದಾಳೆ,ಚನ್ನಪ್ಪ ತಳವಾಡೆ,ಸಮೀರ,ರಾಮರಾವ ಬಾಣಾ,ರಾಜಕುಮಾರ,ಉತ್ತಮ ಶಿಂದೆ,ಭೀಮಣ್ಣ ಕೊಂಕಣಿ,ಬಾಲಾಜಿ ಕಾಂಬಳೆ,ಜಾಲಿಂದರ ಜೇದೆ,ಕಲ್ಯಾಣರಾವ ಕುಂಬಾರಗೆರೆ,ಅಶೋಕ ಬಿರಾದಾರ, ಸವಿತಾ ಗಬಾಳೆ,ಸಂತೋಷಕುಮಾರಿ,ಶಾಂತಾ ವೋರೆ,ಪೂರ್ಣಿಮಾ ಪಾಟೀಲ್,ನಾಗನಾಥ ಭೋಸ್ಲೆ,ವೈಜಿನಾಥ ಮಲ್ಲಿಗೆ ಸೇರಿದಂತೆ ಮಕ್ಕಳು ಉಪಸ್ಥಿತರಿದ್ದರು.

ಸುಧಾಕರ ಗಾಯಕವಾಡ ಪ್ರಾಸ್ತಾವಿಕ ಮಾತನಾಡಿದರು.ಸತ್ಯವಾನ ಕಾಂಬಳೆ ನಿರೂಪಿಸಿದರು. ಮುಖ್ಯಗುರು ಬೀರದೇವ ಭಂಡಾರೆ ವಂದಿಸಿದರು.

# ಶಿಶು ಮರಣ ತಗ್ಗಿಸಲು ಎದೆ ಹಾಲು ಪೂರಕ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.7: ನವಜಾತ ಶಿಶು ಮತ್ತು ಚಿಕ್ಕವಯಸ್ಸಿನ ಮಕ್ಕಳ ಮರಣ ಪ್ರಮಾಣ ತಗ್ಗಿಸುವುದರ ಅಪೌಷ್ಟಿಕತೆ ತಡೆಗಟ್ಟಲು ತಾಯಿಯ ಎದೆ ಹಾಲು ಪೂರಕ ಎಂದು ಸ್ತ್ರೀ–ರೋಗ ತಜ್ಞೆ ಡಾ.ಶೈಲಜಾ ತಳವಾಡೆ ಹೇಳಿದರು.ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ತಾಲೂಕು ಆರೋಗ್ಯ ಅಧಿಕಾರಿಗಳ ಕಚೇರಿ ಮತ್ತು ಭಾರತೀಯ ಕುಟುಂಬ ಕಲ್ಯಾಣ ಯೋಜನೆ ಸಂಘ ಬೀದರ್ ಸಹಯೋಗದಲ್ಲಿ ಗುರುವಾರ ಆಯೋಜಿಸಿದ್ದ ವಿಶ್ವ ಸ್ತನ್ಯಪಾನ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.ಶಿಶು ಜನಿಸಿದ ಗಂಟೆಯೊಳಗೆ ತಾಯಿ ಎದೆಹಾಲು ಉಣಿಸಬೇಕು. ಎದೆ ಹಾಲಿನಲ್ಲಿ ರೋಗ ನಿರೋಧಕ ಶಕ್ತಿ ಇರುವುದರಿಂದ ಮಕ್ಕಳು ದೈಹಿಕ ಮತ್ತು ಮಾನಸಿಕವಾಗಿ ಬೆಳವಣಿಗೆ ಹೊಂದಲು ಸಾಧ್ಯವಾಗುತ್ತದೆ ಎಂದರು. ಮಗು ಹುಟ್ಟಿದ ಆರು ತಿಂಗಳ ವರೆಗೆ ಕಡ್ಡಾಯವಾಗಿ ತಾಯಿ ಎದೆ ಹಾಲು ಉಣಿಸಬೇಕು ಎಂದು ಸಲಹೆ ನೀಡಿದರು.

ತಾಲೂಕು ಆರೋಗ್ಯ ಅಧಿಕಾರಿ ಡಾ. ರವಿ ಕಲಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು.ಶ್ರೀನಿವಾಸ ಬಿರಾದಾರ್, ಸಾರ್ವಜನಿಕ ಆಸ್ಪತ್ರೆಯ ಮುಖ್ಯ ಆಡಳಿತಾಧಿಕಾರಿ ಡಾ.ಅಬ್ದುಲ್ ಖಾದರ್ ಮಾತನಾಡಿದರು. ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣ ಆರೋಗ್ಯ ಶಿಕ್ಷಣಾಧಿಕಾರಿ ಚಂದ್ರಶೇಖರ ಇಜಾರೆ, ರವಿ, ರಾಜು,ಆರೋಗ್ಯ ನಿರೀಕ್ಷಣಾಧಿಕಾರಿ ವಿಜಯಲಕ್ಷ್ಮಿ ?? ಹುಡಗೆ, ಜಿಲ್ಲಾ ಮಟ್ಟದ ಕಾರ್ಯಕ್ರಮಾಧಿಕಾರಿ ವಿಶಾಲ ಸೇರಿದಂತೆ ಹಲವರು ಇದ್ದರು.

# ಸೆ.7 ರಂದು ಬೀದರಿನಲ್ಲಿ ದ್ವಿತೀಯ ಅಖಿಲ ಕರ್ನಾಟಕ ಗಜಲ್ ಸಮ್ಮೇಳನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.7–ಅಖಿಲ ಕರ್ನಾಟಕ ದ್ವಿತೀಯ ಗಜಲ್ ಸಾಹಿತ್ಯ ಸಮ್ಮೇಳನವನ್ನು ಸೆಪ್ಟೆಂಬರ್ 7ರಂದು ಭಾನುವಾರ ಬೀದರ ನಗರದಲ್ಲಿ ಆಯೋಜಿಸಲು ತೀರ್ಮಾನಿಸಲಾಗಿದೆ ಎಂದು ಗಜಲ್ ಸಮ್ಮೇಳನದ ರೂವಾರಿ ಆಗಿರುವ ಕರ್ನಾಟಕ ಗಜಲ್ ಅಕಾಡೆಮಿ ಕಾರ್ಯದರ್ಶಿ ಮಹಿಪಾಲರೆಡ್ಡಿ ಸೇಡಂ ತಿಳಿಸಿದ್ದಾರೆ.ಕಳೆದ ವರ್ಷ ಕಲಬುರಗಿಯ ವಿಶ್ವವಿದ್ಯಾಲಯದಲ್ಲಿ ಪ್ರಥಮ ಗಜಲ್ ಸಾಹಿತ್ಯ ಸಮ್ಮೇಳನ ನಡೆಸಲಾಗಿತ್ತು, ಈ ಬಾರಿ ಕರ್ನಾಟಕದ ಮುಕುಟಪ್ರಾಯ ಎನಿಸಿರುವ ಧರಿನಾಡಿನಲ್ಲಿ ದ್ವಿತೀಯ ಗಜಲ್ ಸಾಹಿತ್ಯ ಸಮ್ಮೇಳನ ನಡೆಸಲಾಗುತ್ತಿದ್ದು, ಸಮ್ಮೇಳನಾಧ್ಯಕ್ಷರಾಗಿ ಕನ್ನಡದ ಹಿರಿಯ ಕವಿ, ಬಹುಭಾಷಾ ವಿದ್ವಾಂಸರು ಹಾಗೂ ಗಜಲ್ ಸಾಹಿತ್ಯದಲ್ಲಿ ಹೆಚ್ಚು ಕೊಡುಗೆ ನೀಡಿದ ಡಾ.ಕಾಶಿನಾಥ ಅಂಬಲಗೆ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.ಒಂದು ದಿನದ ಈ ಸಮ್ಮೇಳನದಲ್ಲಿ ಉದ್ಘಾಟನೆ, ಉಪನ್ಯಾಸ ಗೋಷ್ಠಿ, ಗಜಲ್ ವಾಚನ ಗೋಷ್ಠಿ ಮತ್ತು ಗಾಯನ ಜೊತೆಗೆ ಸಮಾರೋಪ ಸಮಾರಂಭ ನಡೆಯಲಿದೆ. ನಾಡಿನ ಅನೇಕ ಹಿರಿಯ, ಯುವ ಗಜಲ್ ಬರಹಗಾರರು ಸಮ್ಮೇಳನದಲ್ಲಿ ಭಾಗವಹಿಸುವರು. ಕನ್ನಡದಲ್ಲಿ ಗಜಲ್ ಬೆಳೆದು ಬಂದ ರೀತಿ ಹಾಗೂ ಉರ್ದು ಮತ್ತು ಕನ್ನಡದ



ಗಜಲ್‌ನಲ್ಲಿ ಸಾಮಯಿಕ ಕುರಿತು ತಳಸ್ಪರ್ಶಿಯಾದ ಉಪನ್ಯಾಸ ಆಯೋಜಿಸಲಾಗಿದೆ. ಸುಮಾರು 50 ಕ್ಕೂ ಹೆಚ್ಚು ಗಜಲಕಾರರು ವಾಚನ ಮಾಡಲಿದ್ದಾರೆ. ಬೀದರಿನಲ್ಲಿ ಸಮ್ಮೇಳನವನ್ನು ಲೇಖಕರಾದ ಡಾ.ಸಂಜೀವಕುಮಾರ ಅತಿವಾಳೆಯವರ ಮುನ್ನಡೆಸಲಿದ್ದಾರೆ ಎಂದು ಮಹಿಪಾಲರೆಡ್ಡಿ ತಿಳಿಸಿದ್ದಾರೆ.ಸಮ್ಮೇಳನಾಧ್ಯಕ್ಷರ ಆಯ್ಕೆ ಸಮಿತಿ: ಕಳೆದ ಬಾರಿ ಸಮ್ಮೇಳನಾಧ್ಯಕ್ಷರಾಗಿದ್ದ ಹಿರಿಯ ಗಜಲಕಾರ್ತಿ ಪ್ರಭಾವತಿ ದೇಸಾಯಿ ವಿಜಯಪುರ, ಕರ್ನಾಟಕ ಗಜಲ್ ಅಕಾಡೆಮಿ ಅಧ್ಯಕ್ಷ ರಂಗಸ್ವಾಮಿ ಸಿದ್ದಯ್ಯ, ಬೆಳಗಾವಿಯ ಪ್ರೊ.ಶಮಾ ಜಮಾದಾರ ಯರಗಟ್ಟಿ, ಬಳ್ಳಾರಿಯ ಅಬ್ದುಲ್ ಹೈ ತೋರಣಗಲ್ಲು, ಸಿಕಂದರ್ ಅಲಿ, ವಿಜಯಪುರದ ಹೇಮಲತಾ ವಸ್ತ್ರದ, ಹುಬ್ಬಳ್ಳಿಯ ನಿರ್ಮಲಾ ಶೆಟ್ಟರ್, ಕೋಲಾರದ ಅಶೋಕಬಾಬು ಟೇಕಲ್, ಬೀದರಿನ ಡಾ.ಸಂಜೀವಕುಮಾರ ಅತಿವಾಳೆ, ವಿಜಯಕುಮಾರ ಗೌರೆ, ಕಲಬುರಗಿಯ ಸಿದ್ದರಾಮ ಸರಸಂಬಿ, ಶಹಾಪುರದ ಜ್ಯೋತಿ ದೇವಣಗಾಂವ ಅವರನ್ನೊಳಗೊಂಡ ಆಯ್ಕೆ ಸಮಿತಿಯು ಡಾ.ಕಾಶಿನಾಥ ಅಂಬಲಗೆ ಅವರನ್ನು ಸರ್ವಾನುಮತದಿಂದ ಸಮ್ಮೇಳನಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು ಎಂದು ಅವರು ತಿಳಿಸಿದ್ದಾರೆ.'ಗಜಲ್ ಶರಣಾರ್ಥಿಯ ಕವಿ'ಗೆ ಸಮ್ಮೇಳನಾಧ್ಯಕ್ಷತೆಯ ಗೌರವ:ಕಾಶೀನಾಥ ಅಂಬಲಗೆ ಅವರು ಹುಟ್ಟಿದ್ದು 10–07–1947 ರಲ್ಲಿ. ಬೀದರ ಜಿಲ್ಲೆಯ, ಬಸವಕಲ್ಯಾಣ ತಾಲೂಕಿನ ಮುಚಳಂಬಿ ಗ್ರಾಮದಲ್ಲಿ. ತಂದೆ ರಾಚಪ್ಪ ಅಂಬಲಗೆ, ತಾಯಿ ಗುರಮ್ಮ ಅಂಬಲಗೆ. ಕನ್ನಡದಲ್ಲಿ ಎಂ.ಎ ಪದವಿ ಪಡೆದ ಅಂಬಲಗೆ ಹಿಂದಿ ಭಾಷೆಯಲ್ಲೂ ಎಂ.ಎ ಪದವಿ ಗಳಿಸಿದ್ದಾರೆ.

# ಯಾದಗಿರಿ : ಹಗಲು ಜನರ ಬಸ್ ನಿಲ್ದಾಣ, ರಾತ್ರಿ ದನಗಳ ನಿಲ್ದಾಣ!




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ನಗರದ ಪ್ರಮುಖ ಕೇಂದ್ರ ಬಸ್ ನಿಲ್ದಾಣದ ಸ್ಥಿತಿ ಇದೀಗ ಸಾರ್ವಜನಿಕರಿಂದ ಕೇವಲ ದಿನದೊಳಗಿನ ಪ್ರಯಾಣಕ್ಕೆ ಮಾತ್ರ ಸೀಮಿತವಾಗಿಲ್ಲ. ಹಗಲು ವೇಳೆಯಲ್ಲಿ ಜನರು ಪ್ರಯಾಣ ಮಾಡುವ ಈ ನಿಲ್ದಾಣ, ರಾತ್ರಿ ವೇಳೆ ದನಗಳು ವಿಶ್ರಾಂತಿ ಪಡೆಯುವ ಸ್ಥಳವನ್ನಾಗಿ ಪರಿವರ್ತನೆಗೊಳ್ಳುತ್ತಿದೆ. ಪ್ರತಿದಿನ ರಾತ್ರಿ ಈ ಬಸ್ ನಿಲ್ದಾಣದ ಆವರಣದಲ್ಲಿ ಹತ್ತಾರು ದನಗಳು ನಿಶ್ಚಿಂತವಾಗಿ ಬಡಿದಡು ತ್ತಾ, ಮಲಗುತ್ತಾ ಗೋಚರಿಸುತ್ತವೆ. ಇದರ ಪರಿಣಾಮವಾಗಿ ನಿಲ್ದಾಣದ ಸ್ವಚ್ಛತೆ ಹದಗೆಟ್ಟಿದ್ದು, ಮುಂಜಾನೆ ಪ್ರಯಾಣಿಕರಿಗೆ ಅಪರಿಷ್ಕೃತ ಪರಿಸರ ಎದುರಾಗುತ್ತಿದೆ. ಸಂಸ್ಥೆಗಳ ನಿರ್ಲಕ್ಷ್ಯ, ಸರಿಯಾದ ದನಗಾರಿಕೆ ನಿಯಂತ್ರಣ ಇಲ್ಲದಿರುವುದು ಹಾಗೂ ಸೂಕ್ತವೇನಾದರೂ ತಡೆ ಕ್ರಮ ಕೈಗೊಳ್ಳದಿರುವುದೇ ಈ ಸಮಸ್ಯೆಗೆ ಕಾರಣ ಎನ್ನಲಾಗಿದೆ.

ನಗರದ ಜನತೆ ಈ ಬಗ್ಗೆ ಬಸ್ ನಿಲ್ದಾಣ ಮತ್ತು ಪುರಸಭೆಯ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು, ಬಸ್ ನಿಲ್ದಾಣವನ್ನು ಸ್ವಚ್ಛ ಹಾಗೂ ಪ್ರಯಾಣಿಕರಿಗೆ ಸುಲಭವಾಗುವಂತೆ ಮಾಡಬೇಕೆಂದು ಆಗ್ರಹಿಸುತ್ತಿದ್ದಾರೆ.

# ಡಿವೈಡರ್ ಅಳವಡಿಕೆಯಿಂದ ಅಪಘಾತಗಳ ಕಡಿತ–ಸಾರ್ವಜನಿಕರಿಂದ ಮೆಚ್ಚುಗೆ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ, ಆಗಸ್ಟ್ 7: ನಗರದ ಯಾದಗಿರಿ–ಕಲಬುರ್ಗಿ ಮುಖ್ಯ ರಸ್ತೆಯಲ್ಲಿ ರಸ್ತೆ ಮಧ್ಯದಲ್ಲಿ ಡಿವೈಡರ್‌ಗಳನ್ನು ಅಳವಡಿಸುವ ಮೂಲಕ ರಸ್ತೆ ಅಪಘಾತಗಳ ಸಂಖ್ಯೆಯಲ್ಲಿ ಗಣನೀಯ ಇಳಿಕೆಯಾಗಿದ್ದು, ಅನೇಕ ಜೀವಗಳನ್ನು ರಕ್ಷಿಸಲು ಇದು ಸಹಕಾರಿಯಾಗಿದೆ. ಇತ್ತೀಚೆಗೆ ನಿರ್ವಹಿಸಲಾದ ಈ ರಸ್ತಾ ಸುಧಾರಣಾ ಕಾಮಗಾರಿ ಸಾರ್ವಜನಿಕರಿಂದ ಮೆಚ್ಚುಗೆಗೆ ಪಾತ್ರವಾಗಿದೆ.

ಮುಂಬರುವ ವಾಹನಗಳ ನಿಯಂತ್ರಣ ಮತ್ತು ಸಂಚಾರದ ನಿಧನಗತಿಗೆ ಕಾರಣವಾದ ಈ ಬದಲಾವಣೆದಿಂದಾಗಿ ಚಾಲಕರಿಗೆ ಸುಲಭವಾಗಿ ದಿಕ್ಕು ಪ್ರತ್ಯಕ್ಷವಾಗುತ್ತಿದೆ. ಪರಿಣಾಮವಾಗಿ, ಹಳೆಯದಂತೆ ತಲೆಕೆಡಿಸುವ ರೀತಿಯ ಅಪಘಾತಗಳು ಇತ್ತೀಚೆಗೆ ವರದಿಯಾಗಿಲ್ಲ.

"ಹೆಚ್ಚು ಸುರಕ್ಷಿತವಾಗಿದೆ ಈಗ ರಸ್ತೆ. ಮಕ್ಕಳನ್ನು ಶಾಲೆಗೆ ಕಳಿಸುವಾಗಲೂ ಆತಂಕ ಕಡಿಮೆಯಾಗಿದೆ," ಎಂದು ವಾಹನ ಸವಾರರು ಸಂತಸ ಹಂಚಿಕೊಂಡರು.

ರಸ್ತೆ ಸುರಕ್ಷತೆಯ ಮಹತ್ವವನ್ನು ಮನಗಂಡು ಈ ಕ್ರಮ ಕೈಗೊಂಡ ಯಾದಗಿರಿ ಪಟ್ಟಣ ಪಂಚಾಯತ್ ಹಾಗೂ ರಸ್ತೆ ಅಭಿವೃದ್ಧಿ ಇಲಾಖೆಗೆ ಸಾರ್ವಜನಿಕರು ಧನ್ಯವಾದಗಳನ್ನು ತಿಳಿಸಿದ್ದಾರೆ.

### ಸಾಂಪ್ರದಾಯಿಕ ಕುರಿಗಾಹಿಗಳ ಸಂರಕ್ಷಣಾ ಕಾಯ್ದೆ ಜಾರಿಗೊಳಿಸಲು ಆಗ್ರಹಿಸಿ ಪ್ರತಿಭಟನೆ

# ಆಗಸ್ಟ್ 19 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಕುರಿಗಾರರ ನಡೆ ವಿಧಾನಸೌಧ ಕಡೆಗೆ ಘೋಷ ವಾಕ್ಯದೊಂದಿಗೆ ಪ್ರತಿಭಟನೆ: ರಾಜು ಮೌರ್ಯ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಆಗಸ್ಟ್, 07–ಕುರಿಗಾಹಿಗಳ ಸಂರಕ್ಷಣಾ ಕಾಯ್ದೆ ಜಾರಿಗೊಳಿಸಲು ಸರ್ಕಾರದ ಮೀನಾಮೇಷ ಖಂಡಿಸಿ ಆಗಸ್ಟ್ 19 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಕಾಯ್ದೆ ಹೋರಾಟ ಸಮಿತಿ ವತಿಯಿಂದ ಕುರಿಗಾರರ ನಡೆ ವಿಧಾನಸೌಧದ ಕಡೆ ಎಂಬ ಘೋಷವಾಕ್ಯದೊಂದಿಗೆ ಬೃಹತ್ ಪ್ರತಿಭಟನಾ ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ಹಾಲುಮತ ಮಹಾಸಭಾದ ರಾಜ್ಯ ಸಂಚಾಲಕ ರಾಜು ಮೌರ್ಯ ದಾವಣಗೆರೆ ಅವರು ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ಕುರಿಗಾಹಿಗಳ ಬಗ್ಗೆ ನಿರ್ಲಕ್ಷ್ಯ ತೋರುತ್ತಿರುವ ಅಧಿಕಾರಿಗಳ ಮೇಲೆ ಕ್ರಮ ಜರುಗಿಸಬೇಕು. ಕುರಿ ಮೇಯಿಸಿ ಅರಣ್ಯ ಸಂಪತ್ತು ರಕ್ಷಣೆ ಮಾಡುವ ಕುರಿಗಾಹಿಗಳಿಗಾಗಿ ಮುಂಬರುವ ಅಧಿವೇಶನದಲ್ಲಿ ಕುರಿಗಾಹಿಗಳ ಹಿತರಕ್ಷಣಾ ಕಾಯ್ದೆ ಜಾರಿಗೆ ತರಬೇಕು ಎಂದು ಕುರಿಗಾಹಿಗಳ ಹಿತರಕ್ಷಣಾ ಕಾಯ್ದೆ ಹೋರಾಟ ಸಮಿತಿಯ ವತಿಯಿಂದ ಅವರು ಆಗ್ರಹಿಸಿದರು.

ಕುರಿಗಾಹಿಗಳು ಈ ದೇಶದ ಸಂಸ್ಕೃತಿಯನ್ನು ಉಳಿಸುತ್ತಿರುವವರು, ಮಳೆ, ಗಾಳಿ, ಬಿಸಿಲೆನ್ನದೇ ಕುರಿ ಹಿಂಡುಗಳೊಂದಿಗೆ ಊರೂರು ಅಲೆದಾಡುತ್ತಾ, ಕುರಿಗಳ ಆಹಾರಕ್ಕಾಗಿ ತಮ್ಮ ಕುಟುಂಬಗಳ ಜೀವಗಳನ್ನು ಲೆಕ್ಕಿಸದೇ ಅಲೆಮಾರಿಗಳಾಗಿ ಜೀವಿಸುತ್ತಿದ್ದಾರೆ. ಇಂತಹ ಕುರಿಗಾಹಿಯ ಮೇಲೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪ್ರತಿನಿಧಿಸಿದ್ದ, ಬಾಗಲಕೋಟೆ ಜಿಲ್ಲೆ, ಬಾದಾಮಿ ತಾಲ್ಲೂಕಿನ ಕೆರೂರು ಗ್ರಾಮದಲ್ಲಿ ಕುರಿಗಾಹಿಯ ಕತ್ತನ್ನು ಸೀಳಿ ಕೊಂದು ಹಾಕಿದ್ದರು.

ಬೆಳಗಾವಿ ಜಿಲ್ಲೆ, ಆರಂಭಾವಿಯಲ್ಲಿ ಕುರಿಗಾಹಿಯ ಕಾಲನ್ನು ಕತ್ತರಿಸಿ ಹಾಕಿದ್ದರು. ಧಾರವಾಡ ಜಿಲ್ಲೆ, ಕುಂದಗೋಳದಲ್ಲಿ ಕುರಿಗಾಹಿ ಮಹಿಳೆಯ ಮೇಲೆ ಅತ್ಯಾಚಾರ ಮಾಡಿ ಕೊಂದು ಹಾಕಿದ್ದರು. ಇವೆಲ್ಲವೂ ಬೆಳಕಿಗೆ ಬಂದಿರುವ ಕೆಲವೇ ಕೆಲವು ಘಟನೆಗಳು.

ಕಳೆದ ವಾರ ಕೊಪ್ಪಳ ತಾಲ್ಲೂಕಿನ ಬೊಲ್ಡೋಟಾ ಕಂಪನಿಯ ನೌಕರರು ಕುರಿಗಾರರಿಗೆ ರಕ್ತ ಬರುವ ಹಾಗೆ ಹೊಡೆದು ಓಡಿಸುತ್ತಿದ್ದ ಅಮಾನವೀಯ ಘಟನೆಗಳು ನಡೆಯುತ್ತಿವೆ. ಅರಣ್ಯ ಇಲಾಖೆಯ ದೌರ್ಜನ್ಯಗಳು, ಕುರಿಗಳ ಕಳ್ಳತನಗಳು ನಿರಂತರವಾಗಿ ನಡೆಯುತ್ತಿವೆ.

ಸ್ವತಃ ಕುರಿಗಾರರಾಗಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಕುರಿಗಾರರ ಸಂಕಷ್ಟಗಳ ಬಗ್ಗೆ ಗೊತ್ತಿದೆ. ಸಿದ್ದರಾಮಯ್ಯನವರು ಮುಖ್ಯಮಂತ್ರಿ ಯಾಗಬೇಕೆಂದು ಹರಕೆ ಹೊತ್ತವರು, ಕುರಿಗಳನ್ನು ಮಾರಿ ಚುನಾವಣಾ ವೆಚ್ಚಗಳಿಗೆ ಹಣವನ್ನು ನೀಡಿದ್ದು ಸಹ ಯಾರೂ ಮರೆಯುವ ಹಾಗಿಲ್ಲ.

ಕಾಂಗ್ರೆ ಸ್ ಪಕ್ಷ ಅಧಿಕಾರದಲ್ಲಿ ಇದೆ ಎಂದರೆ ಕುರುಬ ಸಮುದಾಯ ಹೆಚ್ಚಿನ ಬೆಂಬಲ ನೀಡಿರುವುದನ್ನು ಕಾಂಗ್ರೆಸ್ ಪಕ್ಷ ಮರೆಯಬಾರದು. ಕುರಿಗಾರರ ಸಂರಕ್ಷಣಾ ಕಾಯಿದೆಯಿಂದ ಕಳ್ಳಕಾಕರಿಗೆ, ದೌರ್ಜನ್ಯ ನಡೆಸುವವವರಿಗೆ ಭಯವಾದ್ರು ಬರಬಹುದು ಎಂಬ ಕಾರಣಕ್ಕಾಗಿ ಸರ್ಕಾರಗಳ ಮುಂದೆ ಸಂರಕ್ಷಣಾ ಕಾಯಿದೆ ಜಾರಿಗೊಳಿಸುವಂತೆ ನೂರಾರು ಮನವಿಗಳನ್ನು ನೀಡಲಾಗಿದೆ.

ಕಳೆದ ಅಧಿವೇಶನದಲ್ಲಿ ಬಜೆಟ್ ನಲ್ಲೂ ಕುರಿಗಾರರ ಸಂರಕ್ಷಣಾ ಕಾಯಿದೆ ಜಾರಿ ತರುವ ಉಲ್ಲೇಖವಾಗಿತ್ತು. ಆದರೆ ಅದರ ಆದೇಶ ಮಾಡಲು ಸರ್ಕಾರ ಯಾಕೆ ಮೀನಾಮೇಷ ಎಣಿಸುತ್ತಿದೆ? ಎಂಬುದು ಯಕ್ಷ ಪ್ರಶ್ನೆಯಾಗಿದೆ. ಕುರುಬರು ಮಾತ್ರ ಕುರಿಗಳನ್ನು ಸಾಕುತ್ತಿಲ್ಲ. ಎಲ್ಲಾ ಸಮುದಾಯದವರು ಸಹ ಕುರಿ ಸಾಕಾಣಿಕೆ ಮಾಡುತ್ತಿದ್ದಾರೆ. ಕುರಿಗಾರರು ಸರ್ಕಾರವನ್ನು ದೊಡ್ಡದಾಗಿ ಏನನ್ನು ಕೇಳುತ್ತಿಲ್ಲ. ತಮ್ಮ ಜೀವ ಮತ್ತು ಜೀವನಗಳನ್ನು ರಕ್ಷಿಸಿಕೊಳ್ಳಲು ರಕ್ಷಣೆ, ಭದ್ರತೆ ಕೇಳುತ್ತಿದ್ದಾರೆ. ಕರ್ನಾಟಕ ರಾಜ್ಯ ಸರ್ಕಾರ ಕುರಿಗಾರರನ್ನು ನಿರ್ಲಕ್ಷ್ಯ ಮಾಡುತ್ತಿರುವುದನ್ನು ಖಂಡಿಸಿ ದಿನಾಂಕ 19–08–2025 ರಂದು ಬೆಂಗಳೂರಿನ ಫ್ರೀ ಡಂ ಪಾರ್ಕ್ ನಲ್ಲಿ ಪ್ರ ತಿಭಟನಾ ಧರಣಿಯನ್ನು ಹಮ್ಮಿಕೊಳ್ಳಲಾಗಿದೆ. ಮಾನ್ಯ ಮುಖ್ಯಮಂತ್ರಿಗಳಾದ ಸ್ವತಃ ಕುರಿಗಾರರು ಆಗಿರುವ ಸಿದ್ದರಾಮಯ್ಯನವರು ಈಗಾಗಲೇ ಸಿದ್ಧವಾಗಿರುವ ಕಾಯಿದೆಯನ್ನು ಸರ್ಕಾರಿ ಆದೇಶವನ್ನಾಗಿಸಿ ಜಾರಿಗೊಳಿಸಬೇಕು ಎಂದು ಈ ಮೂಲಕ ಮನವಿ ಮಾಡಿಕೊಳ್ಳುತ್ತಿದ್ದೇವೆ.

ಸರ್ಕಾರವು 2024–25 ನೇ ಸಾಲಿನ ಬಜೆಟ್‌ನಲ್ಲಿ ಕುರಿಗಾಯಿಗಳಿಗೆ ಸಂಬಂಧಿಸಿದಂತೆ ದೌರ್ಜನ್ಯ ತಡೆ ಕಾಯ್ದೆ ರೂಪಿಸಲು ಪ್ರಸ್ತಾಪಿಸಿದ್ದು ಅದರಂತೆ ಈಗ ಸರ್ಕಾರದ ಮುಂದೆ THE TRADITIONAL MIGRATORY SHEPHERDS (PROTECTION AGAINST ATROCITIES AND PROVISION OF WELFARF) BILL-2025 (REPORTED The File. In 16 March 2025) ಈ ಮಸೂದೆ ಇರುವುದನ್ನು ನಾವು ಸ್ವಾಗತಿಸುತ್ತೇವೆ.

ಈ ಮಸೂದೆಯನ್ನು ಸರ್ಕಾರವು ಆಗಸ್ಟ 11 ರಂದು ನಡೆಯಲಿರುವ ಅಧಿವೇಶನದಲ್ಲಿ ಕಾಯ್ದೆಯಾಗಿ ಜಾರಿಗೊಳಿಸಬೇಕೆಂದು ಆಗ್ರಹಿಸಿ *"ಕುರಿಗಾರರ ನಡೆ ವಿಧಾನಸೌಧ ಕಡೆಗೆ"* ಎಂಬ ಘೋಷ ವಾಕ್ಯದೊಂದಿಗೆ ಬೆಂಗಳೂರಿನ ಸ್ವಾತಂತ್ರ ಉದ್ಯಾನವನದಲ್ಲಿ ಆಗಸ್ಟ 19 ರಂದು ರಾಜ್ಯದ ಎಲ್ಲ ಕುರಿಗಾಹಿಗಳು ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ.

ಈ ಪ್ರತಿಭಟನೆಯಲ್ಲಿ ಎಲ್ಲ ಕುರಿಗಾಹಿಗಳು, ಶೋಷಿತ ಸಮುದಾಯಗಳ ಮುಖಂಡರು, ರೈತ ಮುಖಂಡರು, ಪ್ರಗತಿಪರ ಚಿಂತಕರು, ಭಾಗವಹಿಸುತ್ತಾರೆ.

ಈ ಬೃಹತ್ ಪ್ರತಿಭಟನೆ ಮೂಲಕ ರಾಜ್ಯ ಸರ್ಕಾರಕ್ಕೆ, ಮಾನ್ಯ ಮುಖ್ಯಮಂತ್ರಿಗಳಿಗೆ, ಎಲ್ಲಾ ಶಾಸಕರಿಗೆ ಕುರಿಗಾರರ ಸಮಸ್ಯೆಗಳ ಬಗ್ಗೆ ಗಮನ ಸೆಳೆಯುವ ಮೂಲಕ THE TRADITIONALMIGRATORY SHEPHERDS (PROTEC-TION AGAINST ATROCI-TIES AND PROVISION OF WELFARF) BILL-2025 (REPORTED The File. In 16 March 2025) ಕಾಯ್ದೆಯಾಗಿ ಜಾರಿಗೋಳಿಸಬೇಕೆಂದು ಆಗ್ರಹಿಸಿದ್ದಾರೆ. ಈ ಸಂದರ್ಭದಲ್ಲಿ ಸಾಂಪ್ರದಾಯಿಕ ಕುರಿಗಾಹಿಗಳ ಹಿತರಕ್ಷಣಾ ಕಾಯ್ದೆ ಹೋರಾಟ ಸಮಿತಿಯ ಜಿಲ್ಲಾ ಸಂಘಟನಾ ಕಾರ್ಯದರ್ಶಿ ರವಿಕುಮಾರ ಕಡೆಚೂರ, ಸದಸ್ಯರಾದ ಮಹೇಶ ಜೇಗರ್, ಸಾಬಣ್ಣ ಜೇಗರ್, ಅಯ್ಯಣ್ಣ ಹುಲ್ಕಲ್, ಬೀರಲಿಂಗಪ್ಪ ಕಿಲ್ಲನಕೇರಾ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಹೊಸ ಆಲೋಚನೆ ಹಾಗೂ ಹೊಸ ದೃಷ್ಟಿಕೋನವನ್ನು ಪತ್ರಿಕಾ ರಂಗದಲ್ಲಿ ಬೆಳೆಸಿಕೊಳ್ಳುವುದು ಸಂಶೋಧಕ ಡಾ. ಮೋನಪ್ಪ ಶಿರವಾಳ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರದ ಕನ್ನಡ ಸಾಹಿತ್ಯ ಪರಿಷತ್ತಿನ ಕನ್ನಡ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಶಹಾಪುರ ತಾಲೂಕ ಘಟಕದಿಂದ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ತುಂಬಾ ಅಚ್ಚುಕಟ್ಟಾಗಿ ಜರುಗಿತು. ಇಡೀ ಕಾರ್ಯಕ್ರಮ ಸಮಾಜದ ಹಲವು ಸ್ಥಿತ್ಯಂತರಗಳಿಗೆ, ಪರಿವರ್ತನೆಗಳಿಗೆ ಪತ್ರಿಕೆಗಳು ಹೇಗೆ ಕಾರ್ಯನಿರ್ವಹಿಸುತ್ತಿವೆ ಮತ್ತು ಪ್ರಸ್ತುತ ಸ್ಥಿತಿಗತಿಗಳನ್ನು ಕುರಿತು ಚರ್ಚಿಸಿರುವುದು ತುಂಬಾ ಆರೋಗ್ಯಕರ ಬೆಳವಣಿಗೆ. ಪತ್ರಿಕೆ ಎನ್ನುವುದು ಸೃಜನಶೀಲ ಕಲೆ, ಪತ್ರಿಕೆಗಳನ್ನು ಭವಿಷ್ಯದ ಕನ್ನಡಿ ಮತ್ತು ಸಮಾಜದ ಕನ್ನಡಿ ಎಂದು ಕರೆಯುತ್ತಾರೆ. ಇಂತಹ ಪತ್ರಿಕೆಗಳಲ್ಲಿ ಕೌಶಲ್ಯ, ಸೃಜನಶೀಲತೆಯ ಬೆಳವಣಿಗೆಯಾಗಬೇಕು.

ಹೊಸ ಆಲೋಚನೆ ಹಾಗೂ ಹೊಸ ದೃಷ್ಟಿಕೋನವನ್ನು ಪತ್ರಿಕಾ ರಂಗದಲ್ಲಿ ಬೆಳೆಸಿಕೊಳ್ಳುವುದು ತುಂಬಾ ಅಗತ್ಯವಾಗಿದೆ. ಇವತ್ತಿನ ದಿನ ಪತ್ರಿಕೆ ವಿಶಿಷ್ಟವಾದ ಸುದ್ದಿಯನ್ನು ಓದುಗರಿಗೆ ನೀಡಬೇಕಾಗಿದೆ. ಆದರೆ ಇತ್ತೀಚಿನ ದಿನ ಪತ್ರಿಕೆಗಳಲ್ಲಿ ಕೇವಲ ರಾಜಕೀಯ ಕೇಂದ್ರಿತ ಸುದ್ದಿಗಳಿಗೆ ಹೆಚ್ಚಾಗಿ ಒತ್ತು ನೀಡುತ್ತಿದ್ದು, ಮೊದಲಿನಂತೆ ಪತ್ರಿಕೆಗಳಲ್ಲಿ ಸಾಹಿತ್ಯ ಹಾಗೂ ಸಾಂಸ್ಕೃತಿಕ ಮತ್ತು ಸಮಾಜದ ವಿವಿಧ ಕ್ಷೇತ್ರಗಳಿಗೆ ನೀಡುವ ಒತ್ತು ಇಂದು ಬಹಳಷ್ಟು ಕಾಣದೆ ಇರುವದು ವಿಷಾದನೀಯ. ಪತ್ರಿಕೆ ಒಳ್ಳೆಯ ಗುಣಮಟ್ಟದ ವಿಷಯಗಳಿಂದ ಓದುಗರನ್ನು ಸೆಳೆಯಬೇಕು. ಓದುಗರ ಮನಸ್ಸುಗಳೊಂದಿಗೆ ಪತ್ರಿಕೆ ಸಂವಹನ ಮಾಡಬೇಕು. ಓದುಗರಿಗೆ ಬೇಕಾಗುವ ವಿಶೇಷ ಮತ್ತು ವಿಶಿಷ್ಟ ಮಾಹಿತಿ, ಹೊಸ ಹುಡುಕಾಟ ಪತ್ರಿಕೆಯ ವಿಶೇಷತೆ ಆಗಿರುತ್ತದೆ. ನಾಲ್ಕನೇ ಅಂಗವಾಗಿರುವ ಪತ್ರಿಕೋದ್ಯಮವು ಸರ್ಕಾರ ಮತ್ತು ಜನರ ನಡುವಿನ ಸಂಪರ್ಕ ಸೇತುವೆಯಾಗಿ ಕಾರ್ಯನಿರ್ವಹಿಸುತ್ತದೆ ಎಂಬುದು ಮರೆಯುವಂತಿಲ್ಲ. ನಾಡು, ನುಡಿ, ಸಂಸ್ಕೃತಿ, ಕೃಷಿ, ನೀರಾವರಿ ಮುಂತಾದ ಕ್ಷೇತ್ರಗಳನ್ನು ಅಭಿವೃದ್ಧಿಪಡಿಸುವಲ್ಲಿ ಪತ್ರಿಕೆಗಳು ಹೆಚ್ಚಿನ ಜವಾಬ್ದಾರಿಯನ್ನು ಹೊಂದಿವೆ. ಜ್ಞಾನ ಪ್ರಸಾರದ ಕಾರ್ಯದಲ್ಲಿ ಜವಾಬ್ದಾರಿಯುತ ಸಮಾಜಕ್ಕೆ ಹಾಗೂ ಸಾಮಾಜಿಕ ಹೊಣೆಗಾರಿಕೆ ರೂಪಿಸುವಲ್ಲಿ ವಿವಿಧ ಬಗೆಯ ಪತ್ರಿಕೆಗಳು ತಮ್ಮ ಮಹತ್ತರ ಕಾರ್ಯವನ್ನು ನಿರ್ವಹಿಸುತ್ತಿವೆ. ಪತ್ರಿಕೆ ಮತ್ತು ಪತ್ರಕರ್ತರ ತಲ್ಲಣಗಳು, ಪ್ರಸ್ತುತ ಎದುರಿಸುತ್ತಿರುವ ಸಮಸ್ಯೆಗಳು, ಪತ್ರಿಕೆಗಳ ಮಹತ್ವ ಮುಂತಾದ ವಿಷಯಗಳು ಇವತ್ತಿನ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಸಂಶೋಧಕ ಡಾ. ಮೋನಪ್ಪ ಶಿರವಾಳ ಹಿರಿಯರು ಪೂಜ್ಯರಾದ ಡಾ. ಶರಣು ಗದ್ದುಗೆ ಸರ್, ಸಂಘದ ರಾಜ್ಯ ಸದಸ್ಯರು ಹಾಗೂ ಹಿರಿಯರಾದ ರಾಘವೇಂದ್ರ ಕಾಮನಟಗಿ ಸರ್, ಕ.ಸಾ.ಪ. ತಾಲೂಕ ಅಧ್ಯಕ್ಷರಾದ ಡಾ. ರವೀಂದ್ರನಾಥ ಹೊಸ್ಮನಿ ಹಿರಿಯ ಸಾಹಿತಿ ಡಾ. ಸಿದ್ದರಾಮ ಹೊನ್ಕಲ್ಲ ಸರ್, ಸಹೋದರ ವಿಶಾಲ ಶಿಂಧೆ ಅವರು ತಮ್ಮ ವಿಚಾರಗಳ ಮೂಲಕ ಬೆಳಕು ಚೆಲ್ಲಿದರು. ಒಟ್ಟಿನಲ್ಲಿ ಕಾರ್ಯಕ್ರಮ ಅರ್ಥಪೂರ್ಣವಾಗಿ ಜರುಗಿತು. ಹೊಸ ಚಿಂತನೆಗಳಿಗೆ, ಆಲೋಚನೆಗಳಿಗೆ ನಾಂದಿಯಾಡಿತು. ಇಂತಹ ಚಿಂತನಾಶೀಲ ಕಾರ್ಯಕ್ರಮದಲ್ಲಿ ಪತ್ರಕರ್ತರು, ವಿವಿಧ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಿರಿಯರು, ಸಾಂಸ್ಕೃತಿಕ ಮನಸ್ಸುಗಳು ಪಾಲ್ಗೊಂಡಿರುವುದು ತುಂಬಾ ವಿಶೇಷವಾಗಿತ್ತು. ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಪ್ರಶಸ್ತಿ ಪುರಸ್ಕೃತರಾದ ಶ್ರೀ ಬಸವರಾಜ ಕರೇಗಾರ ಹಾಗೂ ಮಂಜುನಾಥ ಸಗರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ನಮ್ಮ ತಾಲ್ಲೂಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಮುದ್ನೂರ ಅವರ ನೇತೃತ್ವದಲ್ಲಿ ಹಿರಿಯರ ಮಾರ್ಗದರ್ಶನ, ಸಹಾಯ, ಸಹಕಾರದಲ್ಲಿ ನಡೆದ ಪತ್ರಿಕಾ ದಿನಾಚರಣೆ ಹಲವು ಹೊಸ ಸಾಧ್ಯತೆಗಳಿಗೆ ನಾಂದಿಯಾಡಿದೆ ಎಂದು ಹೇಳಲು ತುಂಬಾ ಹೆಮ್ಮೆ ಎನಿಸುತ್ತದೆ. ಯುವ ಪತ್ರಕರ್ತ ಮಹೇಶ ಪತ್ತಾರ ಕಾರ್ಯಕ್ರಮ ನಿರೂಪಿಸಿದರು.

# ಸಮಾಜವನ್ನು ಬದಲಾಯಿಸುವ ಶಕ್ತಿ ಶಿಕ್ಷಕನಿಗೆ ಇದೆ : ಪ್ರಾ. ಶಿವಾನಂದ ಮೇಟಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾ ಶಿಕ್ಷಕರು ಗುರು ಪರಂಪರೆಯ ಬಗ್ಗೆ ಅರಿವು ಇಟ್ಟುಕೊಂಡಾಗ ಆದರ್ಶ ಶಿಕ್ಷಕ ನಾಗಿರುತ್ತಾನೆ ಒಳ್ಳೆಯ ಶಿಕ್ಷಕ ಎಲ್ಲರನ್ನು ಬದಲಾಯಿಸುವ ಶಕ್ತಿಯನ್ನು ಹೊಂದಿರುತ್ತಾನೆ ಎಂದು ವಿಭಾಗೀಯ ಪ್ರಮುಖರು ಹಾಗೂ ಗಂಗಾವತಿ ರಾಮಣ್ಣ ಕೆಂಧೋಳಿ ಪ.ಪೂ.ಕಾಲೇಜಿನ ಪ್ರಾಚಾರ್ಯ ಶಿವಾನಂದ ಮೇಟಿ ಹೇಳಿದರು

ಪಟ್ಟಣದ ಎಸ್.ಎ.ನಿಂಗೋಜಿ ಬಿ.ಇಡಿ.ಕಾಲೇಜಿನಲ್ಲಿ ಕರ್ನಾಟಕ ರಾಜ್ಯ ಮಹಾವಿದ್ಯಾಲಯ ಶಿಕ್ಷಕರ ಸಂಘ –ವಿಜಯನಗರ ಕೃಷ್ಣದೇವರಾಯ ವಿ.ವಿ. ಬಳ್ಳಾರಿ ಹಾಗೂ ಕೊಪ್ಪಳ ವಿಶ್ವವಿದ್ಯಾಲಯ ಕೊಪ್ಪಳ ವಿಭಾಗ ಮಟ್ಟದ "ಗುರುವಂದನಾ" ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಅವರು ರಾಷ್ಟ್ರಪತಿಗಳಾದ ದ್ರೌಪದಿ ಮುರ್ಮಾ – ಮಾಜಿ ರಾಷ್ಟ್ರಪತಿಗಳಾದ ಡಾ. ಅಬ್ದುಲ್ ಕಲಾಂ ಹಾಗೂ ಸರ್ವಪಲ್ಲಿ ರಾಧಾಕೃಷ್ಣನ್ ರವರು ಮೊದಲು ಶಿಕ್ಷಕರಾದವರು ಶಿಕ್ಷಕವೃತ್ತಿ ಅತ್ಯಂತ ಪವಿತ್ರವಾದದ್ದು ಅದರ ಪಾವಿತ್ರ್ಯತೆಯನ್ನು ಅವರು ಕಾಪಾಡಿಕೊಂಡು ಬಂದವರು ಅವರ ಮಾರ್ಗದರ್ಶನದಲ್ಲಿ ಮುನ್ನೆಡೆದು ಅವರ ತತ್ವಆದರ್ಶಗಳನ್ನು ನಾವೇಲ್ಲರೂ ಪಾಲಿಸಬೇಕಾಗಿದೆ ಎಂದರು ವ್ಯಕ್ತಿತ್ವ ನಿರ್ಮಿಸಿಕೊಂಡು ಒಳ್ಳೆನಡವಳಿಕೆಯಿಂದ ರಾಷ್ಟ್ರ ನಿರ್ಮಾಣ ಕಾರ್ಯದಲ್ಲಿ ತೊಡಗಿಸೋಣ ಎಂದು ಕರೆ ನೀಡಿದರು .

ಸಂಸ್ಕಾರಯುತ ಶಿಕ್ಷಣ ದಿಂದ ಸಧೃಡ ಸಮಾಜ ನಿರ್ಮಿಸಲು ಪಣತೊಟ್ಟು ಸದಾ ಜೀವಂತಿಕೆ ಯಿಂದ ಇರೋಣ ಎಂದು ಆಶಿಸಿದರು. ಶಿಕ್ಷಕರಾದವರು ವಿಷಯದ ಮೇಲೆ ಪ್ರೀತಿ –ವೃತ್ತಿಯ ಬಗ್ಗೆ ಗೌರವ ವನ್ನು ಹೊಂದಿರಬೇಕು ಎಂದರು.

ಸಸಿಗೆ ನೀರು ಹಾಕುವ ಮೂಲಕ ಸಮಾರಂಭವನ್ನು ಉದ್ಘಾಟಿಸಿದ ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಹಾಗೂ ಟ್ರಸ್ಟಿಗಳಾದ ವೀರಣ್ಣ ನಿಂಗೋಜಿ ಮಾತನಾಡಿ ಗುರು ಶಿಷ್ಯಪರಂಪರೆ ಹಿಂದಿನ ಕಾಲದಿಂದಲೂ ನಡೆದುಕೊಂಡು ಬಂದಿದೆ ಅದು ಪವಿತ್ರ ಪ್ರೇಮದ ಸಂಕೇತ ಎಂದು ಬಣ್ಣಿಸಿದರು. ಪ್ರೊ. ಪವನಕುಮಾರ ಗುಂಡೂರ ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ಪ್ರೋ.ಶರಣಬಸಪ್ಪ ಬಿಳೇಯಲಿ ಮಾತನಾಡಿ

ಶಿಕ್ಷಕರ ಆದರ್ಶಗಳು ವಿದ್ಯಾರ್ಥಿಗಳ ಮೇಲೆ ಪ್ರಭಾವ ಬೀರುತ್ತವೆ ಅದಕ್ಕೋಸ್ಕರ ಶಿಕ್ಷಕರಾದವರು ಆದರ್ಶಪ್ರಾಯರಾಗಿರಬೇಕು ಎಂದರು .

ಕಾ.ನಿ.ಪತ್ರಕರ್ತರ ಸಂಘದ ಅಧ್ಯಕ್ಷ ಶಿವಮೂರ್ತಿ ಇಟಗಿ – ಕಾರ್ಯನಿರತ ಪತ್ರಕರ್ತರ ಧ್ವನಿ ಅಧ್ಯಕ್ಷ ಶ್ರೀಕಾಂತಗೌಡ ಪಾಟೀಲ – ವೀರಯ್ಯ ಶಿವಪ್ಪಯ್ಯನಮಠ ಹಾಗೂ ಕಾಲೇಜಿನ ಪ್ರಾಧ್ಯಪಕರು ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು

ಪ್ರಾಚಾರ್ಯ ಡಾ!ಪ್ರಕಾಶ ರವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರೊ. ವಿರೇಶ ಪತ್ತಾರ ಸ್ವಾಗತಿಸಿದರು. ಪ್ರೋ.ನಡಾಫ ರವರು ನಿರೂಪಿಸಿದರು. ವಿದ್ಯಾ ಹೊಸಮನಿ ಪ್ರಾರ್ಥಿಸಿ ಕೊನೆಗೆ ವಂದಿಸಿದರು.

# ಕುರೇಕುಪ್ಪ: ವಿವಿಧೆಡೆ ಅಕಸ್ಮಿಕ ಪ್ಲಾಸ್ಟಿಕ್ ದಾಳಿ, ದಂಡ

ಬಳ್ಳಾರಿ, ಆ.07–ಕುರೇಕುಪ್ಪ ಪುರಸಭೆ ವ್ಯಾಪ್ತಿಯಲ್ಲಿ ಏಕಬಳಕೆಯ ಪ್ಲಾಸ್ಟಿಕ್ ನಿಷೇಧ ಕುರಿತಂತೆ ಪರಿಣಾಮಕಾರಿಯಾಗಿ ಜಾರಿಗೆ ತರಲು ಪಟ್ಟಣದ ವಿವಿಧ ಒಟ್ಟು 18 ಅಂಗಡಿಗಳ ಮೇಲೆ ಪುರಸಭೆಯ ಅಧಿಕಾರಿ, ಸಿಬ್ಬಂದಿ ಬುಧವಾರ ಆಕಸ್ಮಿಕ ದಾಳಿ ನಡೆಸಿ ಪ್ಲಾಸ್ಟಿಕ್ ವಶಪಡಿಸಿಕೊಂಡು ದಂಡ ವಿಧಿಸಿದರು. ದಾಳಿಯ ಸಂದರ್ಭದಲ್ಲಿ 8 ಕಿ.ಗ್ರಾಂ ನಿಷೇಧಿತ ಪ್ಲಾಸ್ಟಿಕ್ ವಸ್ತುಗಳನ್ನು ವಶಪಡಿಸಿಕೊಳ್ಳಲಾಯಿತು. ಪ್ಲಾಸ್ಟಿಕ್ ನಿಷೇಧ ಮಾರ್ಗಸೂಚಿಗಳನ್ನು ಉಲ್ಲಂಘಿಸಿದ ವ್ಯಾಪಾರಿಗಳ ಮೇಲೆ 1,000 ರೂ. ದಂಡ ವಿಧಿಸಲಾಯಿತು.

ದಾಳಿಯ ಸಂದರ್ಭದಲ್ಲಿ ಪುರಸಭೆ ಆರೋಗ್ಯ ಶಾಖೆ–ಯ ಸಿಬ್ಬಂದಿ ವರ್ಗ ಹಾಗೂ ಕಮ್ಯೂನಿಟಿ ಮೋಬಿಲೈಜರ್ ಹಾಜರಿದ್ದರು.

### ಅಕ್ಕಿ ಹಂಚಿಕೆಯಲ್ಲಿ ಗಡಿಪಾರು ವ್ಯಾಪಾರ – ಐದನಾಳ ನ್ಯಾಯಬೆಲೆ

# ಅಂಗಡಿಯ ವಿರುದ್ಧ ದಲಿತ ಸಂಘರ್ಷ ಸಮಿತಿಯಿಂದ ಗಂಭೀರ ಆಕ್ಷೇಪ




ಲಿಂಗಸಗೂರು, ಆಗಸ್ಟ್ 7: ಭೀಮವಾದ ದಲಿತ ಸಂಘರ್ಷ ಸಮಿತಿ (ತಾಲೂಕ ಸಮಿತಿ, ಲಿಂಗಸಗೂರು) ವತಿಯಿಂದ ಪತ್ರಿಕಾ ಗೋಷ್ಠಿ ನಡೆಯಿತು. ಈ ಗೋಷ್ಠಿಯಲ್ಲಿ ಐದನಾಳ ಗ್ರಾಮದ ನ್ಯಾಯಬೆಲೆ ಅಂಗಡಿ ಸಂಖ್ಯೆ 56 ರ ಮಾಲೀಕರಾದ ಅಮರೇಗೌಡ ತಂ.ಬಸವಂತರಾಯಪ್ಪ ಉದನಾಳ ಅವರು ಸರಕಾರದಿಂದ ಬರುವ ಆಹಾರ ಧಾನ್ಯಗಳನ್ನು ಬಡ ಜನತೆಗೆ ಹಂಚದೆ, ಹೊರಗಡೆ ಮಾರುಕಟ್ಟೆಗೆ ಅಕ್ರಮ ಮಾರಾಟ ಮಾಡುತ್ತಿರುವ ಕುರಿತು ಗಂಭೀರ ಆರೋಪ ಮಾಡಿದರು

ಸಂಘಟನೆಯ ಮುಖಂಡರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದಂತೆ, ಈ ಅಂಗಡಿಯ ಮಾಲೀಕರು ತಮ್ಮ ಟ್ರ್ಯಾಕ್ಟರ್ ಮೂಲಕ ಸರ್ಕಾರದಿಂದ ಎತ್ತುವಳಿ ಮಾಡಿಕೊಂಡ ಅಕ್ಕಿಯನ್ನು ಹೊರಗಿನ ಮಾರುಕಟ್ಟೆಗೆ ಸಾಗಿಸುತ್ತಿರುವ ದೃಶ್ಯಗಳು ಮೊಬೈಲ್ ಕ್ಯಾಮೆರಾದಲ್ಲಿ ಸೆರೆಹಿಡಿಯಲಾಗಿದೆ. ಇದನ್ನು ಗಮನಿಸಿ ಅಧಿಕಾರಿಗಳಿಗೆ ತಿಳಿಸಿದಾಗ ಮಾಲೀಕರು ತುರ್ತುವಾಗಿ ಅಕ್ಕಿ ಚೀಲಗಳನ್ನು ಆಹಾರ ಗೋಡೌನ್‌ಗೆ ಹಿಂದಿರುಗಿಸಿದ್ದಾರೆ. ಆದರೆ ಅಧಿಕಾರಿಗಳು ಇದನ್ನು ನಿರಾಕರಿಸಿ, "ಈ ಅಕ್ಕಿ ಈಗಾಗಲೇ ಎತ್ತುವಳಿ ಮಾಡಿಕೊಂಡಿದ್ದು, ಮತ್ತೆ ತರಬೇಕಾಗಿಲ್ಲ" ಎಂದು ಸ್ಪಷ್ಟಪಡಿಸಿದ್ದಾರೆ.

ಸಂಘಟನೆಯ ನೇತೃತ್ವದವರು ಆರೋಪಿಸಿದ್ದಾರೆ, ಈ ಅಂಗಡಿ ಮಾಲೀಕರು ಬಹುಪಾಲು ಬಡ ಕಾರ್ಡ್‌ಧಾರಕರಿಗೆ 2 ಕೆ.ಜಿ. ಅಕ್ಕಿಯನ್ನು ಕಡಿತಗೊಳಿಸಿ, ತಮ್ಮ ಲಾಭದ ಗುರಿಗಾಗಿ ಸರ್ಕಾರದ ಯೋಜನೆಗಳನ್ನು ದುರ್ಬಳಕೆ ಮಾಡುತ್ತಿದ್ದಾರೆ. ಈ ಹಿನ್ನಲೆಯಲ್ಲಿ ಅವರ ಲೈಸನ್ಸ್ ರದ್ದುಪಡಿಸಿ ಕಪ್ಪುಪಟ್ಟಿಯಲ್ಲಿ ಸೇರಿಸಬೇಕು ಹಾಗೂ ಕಾನೂನು ಕ್ರಮ ಜರುಗಿಸಬೇಕೆಂದು ಅವರು ಒತ್ತಾಯಿಸಿದರು.

ಈ ಪ್ರಕರಣದ ಪೂರಕವಾಗಿ ದೃಷ್ಟಾವಳಿಗಳ ಫೋಟೋಗಳು ಮತ್ತು ಸಾರ್ವಜನಿಕರಿಂದ ಬಂದಿರುವ ದೂರುಗಳನ್ನು ಅಧಿಕಾರಿಗಳ ಗಮನಕ್ಕೆ ತರುವ ಮೂಲಕ ನ್ಯಾಯ ನೀಡಬೇಕೆಂದು ಆಗ್ರಹಿಸಲಾಯಿತು. ಜೊತೆಗೆ, ತಕ್ಷಣ ಸ್ಪಷ್ಟ ತನಿಖೆ ನಡೆಸಿ ಆಹಾರ ಪಡಿತರ ಹಂಚಿಕೆ ಕುರಿತು ಸರಿಯಾಗಿ ವೀಕ್ಷಣೆ ಮಾಡಿ, ಬಡ ಜನರಿಗೆ ನ್ಯಾಯ ನೀಡಬೇಕು ಎಂದು ಸಂಘಟನೆ ಆಗ್ರಹಿಸಿದೆ.

ಪತ್ರಿಕಾಗೋಷ್ಠಿಯಲ್ಲಿ ಯಂಕಪ್ಪ (ಚಿತ್ರಾಪೂರ), ಬಸವರಾಜ ಕುಣೆಕಲ್ಲೂರು, ನಾಗರಾಜ ಹಾಲಭಾವಿ, ಶರಣಗೌಡ ಗೊರೆಬಾಳ, ಹನುಮಂತಪ್ಪ ಗುಳೇದಗುಡ್ಡ ಮೊದಲಾದವರು ಭಾಗವಹಿಸಿದ್ದರು.

# ಆ.08 ರಂದು ಪೂರ್ವಭಾವಿ ಸಭೆ

ಬಳ್ಳಾರಿ, ಆ.07–ಮಾಜಿ ಮುಖ್ಯಮಂತ್ರಿ ಡಿ.ದೇವರಾಜು ಅರಸು ಅವರ 110ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಆ.20 ರಂದು ಜಿಲ್ಲಾ ಕೇಂದ್ರದಲ್ಲಿ ಆಚರಣೆ ಕುರಿತಂತೆ ಆ.08 ರಂದು ಬೆಳಿಗ್ಗೆ 11.30 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಏರ್ಪಡಿಸಲಾಗಿದೆ. ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

## ಆತ್ಮ ಶ್ರೇಷ್ಠ ಕೃಷಿಕ ಪ್ರಶಸ್ತಿ ಹಾಗೂ ಕೃಷಿ ಪಂಡಿತ ಪ್ರಶಸ್ತಿಗೆ ರೈತರಿಂದ ಅರ್ಜಿ ಅಹ್ವಾನ

ಬಳ್ಳಾರಿ,ಆ.07–ಕೃಷಿ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಆತ್ಮ ಯೋಜನೆಯಡಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಆತ್ಮ ಶ್ರೇಷ್ಠ ಕೃಷಿ ಪ್ರಶಸ್ತಿ ಮತ್ತು ರಾಜ್ಯ ಮಟ್ಟದ ಕೃಷಿ ಪಂಡಿತ ಪ್ರಶಸ್ತಿಗೆ ರೈತರಿಂದ ಮತ್ತು ರೈತ ಮಹಿಳೆಯರಿಂದ ಅರ್ಜಿ ಅಹ್ವಾನಿಸಲಾಗಿದೆ.

ಸಮಗ್ರ ಕೃಷಿ ಪದ್ಧತಿ, ಬೆಳೆ ಪದ್ಧತಿ, ಬೆಳೆ ವೈವಿಧ್ಯಕರಣ, ಸಾವಯವ ಕೃಷಿ, ಕೃಷಿ ಯಂತ್ರೋಪಕರಣ ಅಭಿವೃದ್ಧಿ, ನೀರಿನ ಸಮರ್ಥ ಬಳಕೆ ಇನ್ನಿತರೆ ಯಾವುದಾದರೂ ಕೃಷಿ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಅರ್ಹ ರೈತರು ಕೃಷಿ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು.

ಆತ್ಮ ಯೋಜನೆಯಡಿ ಕೃಷಿ ಪಂಡಿತ ಪ್ರಶಸ್ತಿಗೆ ಕೃಷಿಯಲ್ಲಿ ಸಮಗ್ರ ಬೆಳೆ ಪದ್ಧತಿ, ಸಮಗ್ರ ನೀರು ನಿರ್ವಹಣೆ, ಸಾವಯವ ಕೃಷಿ, ವೈಜ್ಞಾನಿಕ ಯಂತ್ರೋಪಕರಣ ಬಳಕೆ, ತೋಟಗಾರಿಕೆ, ಹೈನುಗಾರಿಕೆ, ಕೋಳಿ ಸಾಕಾಣಿಕೆ, ಮೀನುಗಾರಿಕೆ, ರೇಷ್ಮೆ ಬೇಸಾಯ, ಹೈಟೆಕ್ ಹಸಿರುಮನೆ ಅಳವಡಿಕೆ, ಕೃಷಿ ಸಂಸ್ಕರಣೆ, ಅರಣ್ಯ ಕೃಷಿ, ಆಡು, ಕುರಿ, ಮೊಲ ಇತ್ಯಾದಿ ಸಾಕಾಣಿಕೆ ಚಟುವಟಿಕೆಗಳಲ್ಲಿ ತೊಡಗಿರುವ ರೈತ ಹಾಗೂ ರೈತ ಮಹಿಳೆರು ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿಯನ್ನು ಆಯಾ ಹಾಗೂ ಹೋಬಳಿಯ ರೈತ ಸಂಪರ್ಕ ಕೇಂದ್ರ ಅಥವಾ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಿಂದ ಪಡೆದು ಭರ್ತಿ ಮಾಡಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಆಗಸ್ಟ್ 30 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ಹೋಬಳಿಯ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ

## ಆ. 10 ರಂದು ಹಾಲುಮತ ಧರ್ಮ ಮತ್ತು ಪರಿಸರ ಜಾಗೃತಿಗಾಗಿ ಶ್ರಾವಣ ಯಾತ್ರೆ..!




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕಗುರು ಪೀಠ ಕಲಬುರಗಿ ವಿಭಾಗದ ತಿಂತಿಣಿ ಬ್ರಿಡ್ಜ್ ಪೀಠಾದೀಶರಾದ ಪರಮ ಪೂಜ್ಯ ಶ್ರೀ ಸಿದ್ಧರಾಮನಂದ ಮಹಾಸ್ವಾಮಿಗಳು ಅವರು ಹಾಲುಮತ ಧರ್ಮ ಮತ್ತು ಪರಿಸರ ಜಾಗೃತಿಗಾಗಿ ಶ್ರಾವಣ ಯಾತ್ರೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು. ಹಾಲುಮತ ಮಹಾಸಭಾ ಜಿಲ್ಲಾ ಅಧ್ಯಕ್ಷ ಹನುಮಂತಪ್ಪ ಕೌದಿ ಗುರುವಾರ ರಂದು ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾ ಗೋಷ್ಠಿ ಉದ್ದೇಶಿಶಿ ಮಾತನಾಡಿದ ಇವರು

ಸುಮಾರು 15 ವರ್ಷಗಳಿಂದ ದರ್ಮ ಮತ್ತು ಪರಿಸರ ಜಾಗೃತಿಗಾಗಿ ಶ್ರಾವಣ ಯಾತ್ರೆ ಕಾರ್ಯಕ್ರಮ ಮಾಡಲಾಗುತ್ತಿದೆ.

ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕಗುರು ಪೀಠ ಕಲಬುರಗಿ ವಿಭಾಗದ ತಿಂತಿಣಿ ಬ್ರಿಷ್ ಪೀಠಾದೀಶರಾದ ಪರಮ ಪೂಜ್ಯ ಶ್ರೀ ಸಿದ್ಧರಾಮನಂದ ಮಹಾಸ್ವಾಮಿಗಳು ಅವರು ಹಾಲುಮತ ಧರ್ಮ ಮತ್ತು ಪರಿಸರ ಜಾಗೃತಿಗಾಗಿ ಶ್ರಾವಣ ಯಾತ್ರೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ದಿನಾಂಕ 10–08–2025 ರವಿವಾರ ಮದ್ಯಾಹ್ನ 1:00ಕ್ಕೆ ಕೊಪ್ಪಳ ನಗರಕ್ಕೆ, ಈ ಯಾತ್ರೆ ಆಗಮಿಸುತ್ತಿದ್ದು ನಗರದ ಮಧುಶ್ರೀಗಾರ್ಡನ್ ಕಲ್ಯಾಣ ಮಂಟಪದಲ್ಲಿ ಶ್ರಾವಣ ಯಾತ್ರೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಎಂದು ಹೇಳಿದರು.

ನಂತರ ಮಾತನಾಡಿದ ಕನಕಗುರು ಪೀಠ ಸಮಿತಿ ತಾಲೂಕು ಅಧ್ಯಕ್ಷರಾದ ಮುದ್ದಪ ಜಿ ಬೇವಿನಹಳ್ಳಿ ಮಾತನಾಡಿ. ದಿನಾಂಕ:08 ರಂದು ಕುಕನೂರ ಮತ್ತು ಯಲಬುರ್ಗಾ ತಾಲೂಕಿನಲ್ಲಿ ಬೀರ್ಲಿಂಗೇಶ್ವರ ದೇವಸ್ಥಾನದಲ್ಲಿ ಆಯೋಜನೆ ಮಾಡಲಾಗಿದೆ. ಧರ್ಮ ಮತ್ತು ಪರಿಸರ ಜಾಗೃತಿ ಸಮಾವೇಶ ಪ್ರಯುಕ್ತ ಶ್ರೀ ಸಿದ್ದೇಶ್ವರ ಮಹಾ ಸ್ವಾಮೀಜಿಯವರ ನೇತೃತ್ವದಲ್ಲಿ ನಡೆಸಲಾಗುತ್ತಿದೆ. ಜಿಲ್ಲೆಯ ಪ್ರತಿ ತಾಲೂಕಿನಲ್ಲಿ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ.

ದಿನಾಂಕ 10–08–2025 ರವಿವಾರ ಮದ್ಯಾಹ್ನ 1:00ಕ್ಕೆ ಕೊಪ್ಪಳ ನಗರಕ್ಕೆ, ಈ ಯಾತ್ರೆ ಆಗಮಿಸಳಲಿದ್ದು

ಡೊಳ್ಳುವಾದ್ಯಗಳು, ಕುಂಭ ಕಳಸ ಸಮೇತ, ಮೆರವಣಿಗೆ ಇರುತ್ತದೆ. ಕಾರ್ಯಕ್ರಮಕ್ಕೆ ಬರುವ ಎಲ್ಲರಿಗೂ ಸಸಿ ಕೊಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ನಗರದ ಮಧುಶ್ರೀ ಗಾರ್ಡನ್ ಕಲ್ಯಾಣ ಮಂಟಪದಲ್ಲಿ ಶ್ರಾವಣ ಯಾತ್ರೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ಈ ಸಂಧರ್ಭದಲ್ಲಿ, ಜಿಲ್ಲಾ ಉಪಾಧ್ಯಕ್ಷರಾದ ಕುಮಾರ ಮಜ್ಜಿಗಿ, ನಗರ ಘಟಕ ಅಧ್ಯಕ್ಷ ವಿರಾಪಕ್ಷಪ್ಪ ಮೊರ್ನಾಳ, ಶಿವು ಯಲಬುರ್ಗಾ, ಅಂದಾನಸ್ವಾಮಿ, ಹನುಮಂತಪ್ಪ, ಇನ್ನಿತರರಿದ್ದರು.

## ಶಾಂತತೆಯಿಂದ ಗೌರಿ ಗಣೇಶ ಹಬ್ಬ ಆಚರಣೆ ಮಾಡಿ:ಆಶಾ ರಾಠೋಡ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಶಾಂತತೆಯಿಂದ ಗೌರಿ ಗಣೇಶ ಹಬ್ಬ ಆಚರಣೆ ಮಾಡಿ, ಕಾನೂನು ವ್ಯವಸ್ಥೆ ಪಾಲಿಸಿ ಯಾವುದೇ ತೊಂದರೆ ಆಗದಂತೆ ಹಬ್ಬವನ್ನು ಸಂಭ್ರಮದಿಂದ ಆಚರಣೆ ಮಾಡಿ ಎಂದು ಕಮಲನಗರ ಪೊಲೀಸ್ ಠಾಣೆ ಪಿ. ಎಸ್.ಐ ಆಶಾ ರಾಠೋಡ ಅವರು ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ವಿವಿಧ ಗಣೇಶ ಸಂಘನೆ ಪ್ರಮುಖರ ಜೊತೆ ಗುರುವಾರ ನಡೆದ ಶಾಂತಿ ಸಭೆಯಲ್ಲಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ನೀವೆಲ್ಲರೂ ನಮಗೆ ಸಹಕಾರ ನೀಡಬೇಕು, ಗಣೇಶ್ ಪ್ರತಿಷ್ಠಾಪನೆ ಮಾಡುವ ಮುಂಚೆ ಪರವಣಿಗೆ ತೆಗೆದುಕೊಳ್ಳಿ, ವಿವಾದಿತ ಸ್ಥಳದಲ್ಲಿ ಗಣೇಶ ಕೂಡಿಸುವದು ಬೇಡ, ಗಣೇಶ ಪೆಂಡಲ್ ಮತ್ತು ಪ್ರಸಾದ ವ್ಯವಸ್ಥೆ ಮಾಡುವ ಸ್ಥಳದಲ್ಲಿ ಸಂಚಾರಕ್ಕೆ ಅಡಚಣೆಯಾಗದಂತೆ ವ್ಯವಸ್ಥೆ ಮಾಡಿ.

ಗಣೇಶ ವಿಸರ್ಜನೆ ಮಾಡುವ ದಿನಾಂಕವನ್ನು ಮುಂಚಿಂತವಾಗಿ ತಿಳಿಸಬೇಕು, ಯಾವುದೇ ಕಾರಣಕ್ಕೂ ದಿನಾಂಕವನ್ನು ಮುಂದೂಡುವಂತಿಲ್ಲ, ಸಾಧ್ಯವಾದರೆ ಸಿಸಿಟಿವಿ ಅಳವಡಿಸುವ ವ್ಯವಸ್ಥೆ ಮಾಡಿ, ರಾತ್ರಿ 10 ರಿಂದ ಮುಂಜಾನೆ 6 ಗಂಟೆ ವರಗೆ, ಡಿಜೆ ಅಥವಾ ಮೈಕ್ ಬಳಸುವಂತಿಲ್ಲ.

ಪರಿಸರ ಸ್ನೇಹಿ ಗಣೇಶ ಆಚರಣೆಗೆ ಒತ್ತು ನೀಡಿ, ಕೆಮಿಕಲ್ ಮಿಸ್ತ್ರಿತ ಗಣೇಶ್ ಮೂರ್ತಿ ನಿರಲಿ ವಿಸರ್ಜನೆ ಮಾಡುವುದರಿಂದ, ನೀರಿನಲ್ಲಿ ವಿಷ ಆಗುವ ಸಾಧ್ಯತೆಯಿದ್ದು, ಸಾಧ್ಯವಾದಷ್ಟು ಪರಿಸರ ಸ್ನೇಹಿ ಮಣ್ಣಿನ ಗಣಪತಿ ಪ್ರತಿಷ್ಠಾಪನೆ ಮಾಡಲು ತಿಳಿಸಿದರು.

ಕಮಲನಗರ ಪಿ.ಡಿ.ಯೋ ಶೇಶಿಕಾಂತ ಮಾತನಾಡಿ, ಗಣೇಶ ಕೂಡಿಸುವ ಸಂಘಟನೆ ದವರು ಒಂದು ವಾರದ ಮುಂಚಿತವಾಗಿ ಗಣೇಶ ಕುಡಿಸುವ ಸ್ಥಳದ ಬಗ್ಗೆ ಮಾಹಿತಿ ನೀಡಿ, ಅಪ್ಪಣೆ ಪತ್ರವನ್ನು ತೆಗೆದುಕೊಳ್ಳಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಶಿವಾನಂದ ವಡ್ಡೆ, ಗ್ರಾಮ ಪಂಚಾಯತ ಸದಸ್ಯರಾದ ಶಿವಕುಮಾರ ಝುಲ್ಪೆ ಸಾಯಿನಾಥ ಕಾಂಬ್ಳೆ, ಮಹೇಶ್ ಸಜ್ಜನಶೆಟ್ಟಿ, ಸೇರಿದಂತೆ ವಿವಿಧ ಗಣೇಶ ಸಂಘಟನಾ ಪ್ರಮುಖರು ಮತ್ತು ಸುತ್ತಮುತ್ತಲಿನ ಗ್ರಾಮದ ಮುಖಂಡರು ಸೇರಿದಂತೆ ಹಲವರು ಇದ್ದರು. ಲೋಕೇಶ ತೆಲಂಗ ಕಾರ್ಯಕ್ರಮ ನಿರೂಪಣೆ ಮಾಡಿದರು.

## ಕೃಷಿ ಪಂಡಿತ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.07–ಕೃಷಿ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಕೃಷಿ ಪಂಡಿತ ಪ್ರಶಸ್ತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಕೃಷಿ ಇಲಾಖೆಯ ಕೆ–ಕಿಸಾನ್ ಪೋರ್ಟಲ್‌ನಲ್ಲಿ ನೂತನವಾಗಿ ಕೃಷಿ ಪಂಡಿತ ಪ್ರಶಸ್ತಿಗೆ ಅರ್ಜಿ ನಮೂನೆಯನ್ನು ಅಳವಡಿಸಲಾಗಿದ್ದು, ಸಿಟಿಜನ್ ಲಾಗಿನ್ ಅಥವಾ ಆರ್‌ಎಸ್‌ಕೆ ಲಾಗಿನ್ ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರದಲ್ಲಿ ಸ್ವತಃ ಆಸಕ್ತ ರೈತ ಮತ್ತು ರೈತ ಮಹಿಳೆಯರು ಅರ್ಜಿ ಸಲ್ಲಿಸಬಹುದು.

ಅಗತ್ಯ ದಾಖಲೆಗಳೊಂದಿಗೆ ತಮ್ಮ ಎಫ್‌ಐಡಿಯನ್ನು ನಮೂದಿಸಬೇಕು. ಅರ್ಜಿ ಸಲ್ಲಿಸಲು ಆ.30 ಕೊನೆಯ ದಿನವಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಾಡಗಿ ಸರಕಾರಿ ಪ್ರೌಢ ಶಾಲೆಗೆ ಎಸ್‌ಡಿಎಂಸಿ ರಚನೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ತಾಲೂಕಿನ ದಾಡಗಿ ಗ್ರಾಮದ ಸರಕಾರಿ ಪ್ರೌಢ ಶಾಲೆಯಲ್ಲಿ ಗುರುವಾರ ನೂತನವಾಗಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ(ಎಸ್‌ಡಿಎಂಸಿ)ರಚಿಸಲಾಯಿತು. ನೂತನ ಅಧ್ಯಕ್ಷರಾಗಿ ಅರವಿಂದ ಗೋವಿಂದರಾವ ಎಕ್ಕೆಳ್ಳೆ ಮತ್ತು ಉಪಾಧ್ಯಕ್ಷರಾಗಿ ಸರಸ್ವತಿ ಗರುನಾಥ ಮಾಶೆಟ್ಟೆ ಆಯ್ಕೆಯಾದರು.




ನಂತರ ನೂತನ ಅಧ್ಯಕ್ಷ ಮತ್ತು ಉಪಾಧ್ಯಕ್ಷರನ್ನು ಶಾಲೆಯ ಮುಖ್ಯಗುರು ಒಜ ಹನೀಫ್ ಸನ್ಮಾನಿಸಿ, ಅಭಿನಂದಿಸಿದರು. ನೂತನ ಅಧ್ಯಕ್ಷ ಅರವಿಂದ ಗೋವಿಂದರಾವ ಮಾತನಾಡಿ, ಶಾಲಾ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಶಿಕ್ಷಣದ ಗುಣಮಟ್ಟ ಹೆಚ್ಚಿಸಲು ಅಗತ್ಯ ಸಹಾಯ ಸಹಕಾರ ನೀಡುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಮಾಜಿ ಅಧ್ಯಕ್ಷ ಗಣಪತಿ ಧಡ್ಡೆ, ಭದ್ರಪ್ಪ ಭೌರಾ, ನೂತನ ಸದಸ್ಯರಾದ ಭೀಮಾಶಂಕರ ಧಡ್ಡೆ, ಶಾಬುದ್ದೀನ್, ಸುವರ್ಣ, ಲಕ್ಷ್ಮೀಬಾಯಿ ರಾಜಕುಮಾರ, ಸಂಗೀತಾ, ಬಾಬು, ರವೀಂದ್ರ, ಶಿಕ್ಷಕರಾದ ಸತೀಶ ಸಿದ್ದೇಶ್ವರೆ, ರಾಮದಾಸ್, ರೇಖಾ ಸೇರಿದಂತೆ ಹಲವರು ಇದ್ದರು.

## ಜನನ,ಮರಣ ಶೇ.ನೂರರಷ್ಟು ನೋಂದಣಿಗೆ ಜಿಲ್ಲಾಧಿಕಾರಿಗಳಿಂದ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಆ:7–ಜಿಲ್ಲೆಯಲ್ಲಿನ ಜನನ,ಮರಣಗಳ ನೋಂದಣಿಯನ್ನು ಶೇ.ನೂರುರಷ್ಟು ಆಗುವಂತೆ ನೋಡಿಕೊಳ್ಳಲು ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಜಿಲ್ಲಾ ಮಟ್ಟದ ಜನನ ಮರಣ ನೋಂದಣಿ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಎಲ್ಲ ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿ, ಖಾಸಗಿ ಆಸ್ಪತ್ರೆಗಳಲ್ಲಿ ಸಂಭವಿಸುವ ಜನನ,ಮರಣ ಘಟನೆಗಳ ಕುರಿತು ನಿಗಧಿತ ಸಮಯದಲ್ಲಿ ಇ–ಜನ್ಮ ತಂತ್ರಾಂಶದಲ್ಲಿ ಎಂಟ್ರಿ ಮಾಡಲು ಕ್ರಮ ಕೈಗೊಳ್ಳಬೇಕು. ಮರಣಗಳಿಗೆ ಮರಣ ಕಾರಣ ವೈದ್ಯಕೀಯ ಪ್ರಮಾಣ ಪತ್ರ ಕಡ್ಡಾಯವಾಗಿ ಸಲ್ಲಿಸಬೇಕು ಹಾಗೂ ಮರಣೋತ್ತರ ಪರೀಕ್ಷೆ ವರದಿ ಸಂಬಂಧಿಸಿದ ನೋಂದಣಾಧಿಕಾರಿಗಳಿಗೆ ತಪ್ಪದೇ ಸಲ್ಲಿಸುವಂತೆ ಸೂಚಿಸಿದರು. ಗ್ರಾಮೀಣ ಪ್ರದೇಶದಲ್ಲಿ ಜರುಗುವ



ಜನನ ಮರಣ ನೋಂದಣಿ ಕುರಿತು ಮಾಹಿತಿದಾರರಾದ ಅಂಗನವಾಡಿ ಕಾರ್ಯಕರ್ತೆಯರು, ನೋಂದಣಾಧಿಕಾರಿ ಹಾಗೂ ಉಪನೋಂದಣಾಧಿಕಾರಿಗಳಿಗೆ ಮಾಹಿತಿ ಒದಗಿಸುವಂತೆ ನೋಡಿಕೊಳ್ಳಬೇಕು.ತಾಯಿ

ಮಕ್ಕಳ ಆಸ್ಪತ್ರೆ ಸೇರಿದಂತೆ ಅವಶ್ಯಕತೆಗಳಲ್ಲಿ ಸೂಕ್ತ ಜಾಗೃತಿ ಮೂಡಸಬೇಕು.ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಜರಗುವ ಜನನ, ಮರಣಗಳ ಬಗ್ಗೆ ನೋಂದಣಿ ಆಗುವಂತೆ ನೋಡಿಕೊಳ್ಳಲು ಸೂಚಿಸಿದರು. ಗ್ರಾಮ ಪಂಚಾಯತ್ ಮಟ್ಟದಲ್ಲಿ ಜನನ,ಮರಣ ಘಟನೆಗಳು ಘಟಿಸಿದ 30 ದಿನಗಳವರೆಗಿನ ಘಟನೆಗಳನ್ನು ನೋಂದಾಯಿಸಲು ಗ್ರಾಮ ಪಂಚಾಯತ್ ಕಾರ್ಯದರ್ಶಿಗಳನ್ನು ಜನನ,ಮರಣ ನೋಂದಣಾಧಿಕಾರಿಗಳಾಗಿ ನೇಮಿಸಲಾಗಿದೆ.ನಗರಪ್ರದೇಶಗಳಲ್ಲಿ ನಗರಸಭೆ,ಪುರಸಭೆ,ಪಟ್ಟಣ ಪಂಚಾಯತ್ ಆರೋಗ್ಯ ನಿರೀಕ್ಷಕರು, ನೋಂದಣಾಧಿಕಾರಿಗಳಾಗಿರುತ್ತಾರೆ. ಜನನ, ಮರಣ ಘಟಿಸಿದ 21ದಿನಗಳರೊಳಗೆ ನೋಂದಣಿ ಉಚಿತವಾಗಿರುತ್ತದೆ.22ರಿಂದ 30ದಿನಗಳರೊಳಗೆ ನೋಂದಣಿಗೆ 20ರೂ.ಇದೆ,ಜನನ ಮರಣ ಘಟಿಸಿದ 31ರಿಂದ 365 ದಿನಗಳರೊಳಗೆ ನೋಂದಣಿಗೆ(ಸಕ್ಷಮ ಪ್ರಾಧಿಕಾರದ ಅನುಮತಿ ನಂತರ) 50 ರೂ ಶುಲ್ಕವಿದ್ದು,ಜನನ,ಮರಣ ಘಟಿಸಿದ 365 ದಿನಗಳ ನಂತರ(ಜೆ.ಎಮ್.ಎಫ್.ಸಿ ನ್ಯಾಯಾಲಯದ ಆದೇಶದ ನಂತರ) ನೋಂದಣಿಗೆ ಅವಕಾಶವಿದ್ದು,ಜನನ,ಮರಣದ ಹೆಚ್ಚುವರಿ ಪ್ರತಿಗಾಗಿ 50ರೂ ಇದೆ.ಈ ಕುರಿತು ಸಾರ್ವಜನಿಕರಿಗೆ ತಿಳಿಹೇಳಲು, ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

ಸಭೆಯಲ್ಲಿ ಸಂಖ್ಯಾ ಸಂಗ್ರಹಣಾಧಿಕಾರಿ ಕಚೇರಿಯ ಶ್ರೀ ನಾಗರಾಜ ಅವರು ಸಮಗ್ರ ಮಾಹಿತಿ ನೀಡಿದರು.ಜಿ.ಪಂ ಸಿಇಓ ಲವೀಶ್ ಒರಡಿಯಾ,ಅಪಾರ ಜಿಲ್ಲಾಧಿಕಾರಿ ರಮೇಶ ಕೋಲಾರ, ಸಂಖ್ಯಾ ಸಂಗ್ರಹಣಾಧಿಕಾರಿ ಕಚೇರಿಯ ಸಹಾಯಕ ನಿರ್ದೇಶಕ ಪ್ರಶಾಂತ ಕುಮಾರ್, ಸಹಾಯಕ ಸಾಂಖ್ಯಿಕ ಅಧಿಕಾರಿ ನಾಗರಾಜ್ ನಾಗೂರ ಅವಶ್ಯಕ ಮಾಹಿತಿ ನೀಡಿದರು.ಸಭೆಯಲ್ಲಿ

ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಕಾಂಗ್ರೆಸ್ ನಾಯಕರ ಗುದ್ದಾಟ ಪೊಲೀಸ್ ತನಿಖೆಗೆ ದಾರಿ ಲಿಂಗಸುಗೂರಿನಲ್ಲಿ ಎರಡು ಎಫ್‌ಐಆರ್ ದಾಖಲು

ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗುರು,ಆಗಸ್ಟ್08–ಕಾಂಗ್ರೆಸ್ ಪಕ್ಷದ ನಾಯಕರ ನಡುವೆ ನಡೆದ ಗುದ್ದಾಟ ಪೊಲೀಸ್ ಇಲಾಖೆ ಬಾಗಿಲಿಗೆ ತಲುಪಿದ್ದು, ಸ್ಥಳೀಯ ರಾಜಕೀಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆಯೆಂದು ಹೇಳಲಾಗುತ್ತಿದೆ. ಈ ಸಂಬಂಧ ಲಿಂಗಸುಗೂರ ಪೊಲೀಸ್ ಠಾಣೆಯಲ್ಲಿ ಎರಡು ಪ್ರತ್ಯೇಕ ಎಫ್‌ಐಆರ್ ದಾಖಲಾಗಿದೆ.

ಗೊರೆಬಾಳ ಗ್ರಾಮದ ಆರ್‌ಡಿಸಿಸಿ ಬ್ಯಾಂಕ್ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಡಿ.ಎಸ್. ಹುಲಗೇರಿ ಹಾಗೂ ವಿಧಾನ ಪರಿಷತ್ ಸದಸ್ಯ ಶರಣಗೌಡ ಬಯ್ಯಾಪುರ ಬೆಂಬಲಿಗರ ನಡುವೆ ಮಾತಿನ ಚಕಮಕಿ ಉಂಟಾಯಿತು. ಈ ವೇಳೆ ಮಹಿಳಾ ಘಟಕ, ಎಸ್ಸಿ ಮತ್ತು ಓಬಿಸಿ ಘಟಕದ ನೇಮಕಾತಿ ಸಂಬಂಧಿಸಿದ ಪ್ರಶ್ನೆಗೆ ಪ್ರತಿಕ್ರಿಯೆಯಿಂದ ವಾಕ್ ಸಮರ ಉಂಟಾಗಿ ಗೊಂದಲ ತಲೆದೋರಿತು.

ಈ ಘಟನೆಯ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಘಟನೆಯ ಭಾರೀ ಸಂಚಲನ ಮೂಡಿಸಿದ್ದು. ಈ ಬೆಳವಣಿಗೆಯ ಹಿನ್ನೆಲೆಯಲ್ಲಿ ಶರಣಗೌಡ ಬಯ್ಯಾಪುರ ಬಣದ ಪ್ರಮುಖರಾದ ಜಗದೀಶ್ ವೆಂಕನಗೌಡ ಹಾಲಬಾವಿ ಅವರು, ಡಿ.ಎಸ್. ಹುಲಗೇರಿ ಬೆಂಬಲಿಗರ ವಿರುದ್ಧ ಲಿಂಗಸುಗೂರ ಪೊಲೀಸರಿಗೆ ದೂರು ನೀಡಿದ್ದು, ಪ್ರೇಮಗೌಡ ಹನುಮಗೌಡ, ಚನ್ನಬಸವ ಮುನಿಯಪ್ಪ, ಶಿವರಾಜ್ ಮುನಿಯಪ್ಪ, ಮಂಜುನಾಥ್ ಹನುಮಪ್ಪ, ಹನುಮಗೌಡ ಕೆಂಚಪ್ಪ, ಸಂಗಮೇಶ್ ಸೋಮನಾಥ್, ದೇವಪ್ಪ ಶರಣಪ್ಪ ಹಾಗೂ ಗೋವಿಂದ ನಾಯಕ್ ಎಂಬವರ ವಿರುದ್ಧ ಬಿಎನ್ಎಸ್ ಸೆಕ್ಷನ್‌ಗಳು 143, 147, 323, 341, 504 ಮತ್ತು 506 ರ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

ಇದರ ಪ್ರತಿಯಾಗಿ, ಡಿ.ಎಸ್. ಹುಲಗೇರಿ ಬಣದ ಪ್ರೇಮಗೌಡ ಹನುಮಗೌಡ ನಾಯಕ್ ಅವರು, ಶಾಸಕರ ಬೆಂಬಲಿಗರಾದ ಭೂಪನಗೌಡ ಕರಡಕಲ್, ಚನ್ನರೆಡ್ಡಿ, ಅಯ್ಯಪ್ಪ ಬಿರಾದರ್, ಜಗದೀಶಗೌಡ ವೆಂಕನಗೌಡ ನಾಯಕ್ ಮತ್ತು ಶರಣಗೌಡ ಭೂಪನಗೌಡ ಕರಡಕಲ್ ವಿರುದ್ಧ ಮತ್ತೊಂದು ಎಫ್‌ಐಆರ್ ದಾಖಲಿಸಿದ್ದಾರೆ. ಈ ಪ್ರಕರಣದಲ್ಲಿ ಜಾತಿ ನಿಂದನೆಗೂ ಸೇರಿದಂತೆ ಬಿಎನ್ಎಸ್ ಸೆಕ್ಷನ್‌ಗಳು 143,147,323, 355, 144, 504 ಮತ್ತು 506 ಅನ್ವಯಿಸಲಾಗಿದ್ದು, ಪೊಲೀಸರು ತನಿಖೆ ಆರಂಭಿಸಿದ್ದಾರೆ.

ಈ ಘಟನೆಯಿಂದ ಕಾಂಗ್ರೆಸ್ ಪಕ್ಷದ ಆಂತರಿಕ ಘರ್ಷಣೆ ಬಹಿರಂಗವಾಗಿ ಪಕ್ಷದ ಶಿಸ್ತುಮಟ್ಟದ ಕುರಿತು ಗಂಭೀರ ಪ್ರಶ್ನೆಗಳು ಎದ್ದಿವೆ. ಕಾರ್ಯಕರ್ತರು ಹಾಗೂ ಅಭಿಮಾನಿಗಳು ಗೊಂದಲದ ಪರಿಸ್ಥಿತಿಗೆ ಒಳಗಾಗಿದ್ದು, ಘಟನೆಯು ಭವಿಷ್ಯದ

## ಮರಕುಂದಾ ಹಾಲು ಉತ್ಪಾದಕರ ಕಟ್ಟಡಕ್ಕೆ ಸಹಾಯ ಧನ ಆದೇಶ ಪತ್ರ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ್:– ಹಾಲು ಉತ್ಪಾದಕ ಸಹಕಾರ ಸಂಘಕ್ಕೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಪೂಜ್ಯ ಡಾ. ಡಿ ವೀರೇಂದ್ರ ಹೆಗಡೆ ರವರು ಹಾಗೂ ಅಮ್ಮನವರ ಕೃಪಾಶೀರ್ವಾದದಿಂದ ತಾಲೂಕಿನ ಮರಕುಂದಾ ಗ್ರಾಮದಲ್ಲಿ ಹಾಲು ಉತ್ಪಾದಕ ಸಹಕಾರಿ ಸಂಘದ ಎರಡನೇ ಅಂತಸ್ತಿನ ಕಟ್ಟಡ ಕಾಮಗಾರಿಗೆ 75,000 ರೂಪಾಯಿಗಳ ಮಂಜೂರಾತಿ ಪತ್ರವನ್ನು ತಾಲೂಕಿನ ಯೋಜನಾಧಿಕಾರ ಮಯುರ್ ಮತ್ತು ಹೈನು ಅಭಿವೃದ್ಧಿಯ ಜಿಲ್ಲಾ ಸಮನ್ವಯ ಅಧಿಕಾರಿಯವರ ನೇತೃತ್ವದಲ್ಲಿ ನೀಡಲಾಯಿತ್ತು. ಹಾಲು ಉತ್ಪಾದಕರ ಸಂಘದ ಅಧ್ಯಕ್ಷ ಕಾಶಿನಾಥ್, ಗ್ರಾಮ ಪಂಚಾಯತ ಸದಸ್ಯ ಸಂತೋಷ್ ನಾಗವರ್ ಸೇರಿದಂತೆ




ಗ್ರಾಮದ ಗಣ್ಯ ವ್ಯಕ್ತಿಗಳು ಹಿರಿಯರು ಹೈನುಗಾರಿಕೆ ರೈತರು ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯಕ್ರಮದ ಮಾಹಿತಿ ಮತ್ತು ಸಂಸ್ಥೆಯ ವಿವಿಧ ಕಾರ್ಯಕ್ರಮಗಳ ಕುರಿತು ಮಾತನಾಡಿದರು. ಈ ಸಂದರ್ಭದಲ್ಲಿ ಗ್ರಾಮದ ರೈತರು ಗಣ್ಯರು ಹಿರಿಯರು ಸಹಕಾರ ಸಂಘದ ಸಿಬ್ಬಂದಿಗಳು ಹಾಗೂ ಯೋಜನೆಯ ತಾಲೂಕಿನ ಕೃಷಿ ಮೇಲ್ವಿಚಾರಕ ಶ್ರೀಕಾಂತ, ವಲಯ ಮೇಲ್ವಿಚಾರಕ ಮಹಾಂತೇಶ ಉಪಸ್ಥಿತರಿದ್ದರು.

## ಸಿಸಿ ರಸ್ತೆ ಕಾಮಗಾರಿಗೆ ಚಾಲನೆ ನೀಡಿದ ಪುರಸಭೆ ಅಧ್ಯಕ್ಷ ರಹೀಮಾನ ಪಟೀಲ್

ಮಲ್ಲಮ್ಮ ನುಡಿ ವಾರ್ತೆ

ಸುರಪುರ : ತಾಲೂಕಿನ ಕೆಂಭಾವಿ ಪಟ್ಟಣದ ಮುಖ್ಯ ಬಜಾರ್ ರಸ್ತೆಯಲ್ಲಿನ ಶ್ರೀ ಹನುಮಾನ್ ದೇವಸ್ಥಾನದ ಹತ್ತಿರ 2023–24ನೇ ಸಾಲಿನ 15ನೇ ಹಣಕಾಸು ಯೋಜನೆಯ ಅಡಿಯಲ್ಲಿ ಸುಮಾರು ₹9.30 ಲಕ್ಷ ವೆಚ್ಚದಲ್ಲಿ ಕೈಗೊಂಡಿರುವ ಸಿಸಿ ರಸ್ತೆ ಕಾಮಗಾರಿಗೆ ಪುರಸಭೆ ಅಧ್ಯಕ್ಷ ಶ್ರೀ ರಹೀಮಾನ ಪಟೇಲ್ ಯಲಗೋಡ ಅವರು ಗುದ್ದಲಿ ಪೂಜೆ ನೆರವೇರಿಸಿ ಕಾಮಗಾರಿಗೆ ಶಂಕುಸ್ಥಾಪನೆ ಮಾಡಿದರು.

ಈ ಸಂದರ್ಭದಲ್ಲಿ ಪುರಸಭೆ ಕಿರಿಯ ಅಭಿಯಂತ ಮಲ್ಲಿಕಾರ್ಜುನ ಹೋತಪೇಠ್, ವಿರೂಪಾಕ್ಷಿ ಕರಡಕಲ್, ಗೌಡಪ್ಪ ನಡಕೂರ, ರಾಮಣ್ಣ ಪೂಜಾರಿ ಸುಕಂದ, ಬುಡೇಸಾಬ್ ವಡಕೇರಿ ಹಾಗೂ ಇತರ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಪುರಸಭೆ ಅಧ್ಯಕ್ಷರು ಮಾತನಾಡುತ್ತಾ, "ಪಟ್ಟಣದ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ನಿರಂತರವಾಗಿ ಶ್ರಮಿಸುತ್ತಿದ್ದೇವೆ. ಈ ರಸ್ತೆ ಕಾಮಗಾರಿ ಪೂರ್ತಿಯಾದ ನಂತರ ಸಾರ್ವಜನಿಕರಿಗೆ ಸುಗಮ ಸಂಚಾರಕ್ಕೆ ನೆರವಾಗಲಿದೆ," ಎಂದು ಹೇಳಿದರು.



# ಆ.20 ದೇವರಾಜ ಅರಸು ಜನ್ಮ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.7–ಸಾಮಾಜಿಕ ಕ್ರಾಂತಿಯ ಹರಿಕಾರ ಡಿ.ದೇವರಾಜ ಅರಸು ಅವರ 110ನೇ ಜನ್ಮ ದಿನಾಚರಣೆಯನ್ನು ಆಗಸ್ಟ 20 ರಂದು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾಋ ಡಿ.ದೇವರಾಜ ಅರಸು ಜನ್ಮದಿನ ಆಚರಣೆ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆ.20 ಬೆಳಿಗ್ಗೆ ಡಿ.ದೇವರಾಜ ಅರಸು ಅವರ ಭಾವಚಿತ್ರದ ಮೆರವಣಿಗೆ ಹಮ್ಮಿಕೊಳ್ಳಲಾಗುತ್ತಿದ್ದು, ಮೆರವಣಿಗೆ ಮಾರ್ಗವನ್ನು ಸ್ವಚ್ಛಗೊಳಿಸುವಂತೆ ನಗರಸಭೆ ಅಧಿಕಾರಿಗಳಿಗೆ ಸೂಚಿಸಿ. ವೇದಿಕೆ ಕಾರ್ಯಕ್ರಮವನ್ನು ನವನಗರದ ಡಾ.ಬಿ.ಆರ್.ಅಂಬೇಡ್ಕರ ಭವನದಲ್ಲಿ ಹಮ್ಮಿಕೊಳ್ಳಲು ತಿಳಿಸಿದರು. ಶಿಷ್ಟಾಚಾರದ ಪ್ರಕಾರ ಆಮಂತ್ರಣ ಪತ್ರಿಕೆ ಮುದ್ರಿಸಲು ತಿಳಿಸಿದರು.

ಡಿ.ದೇವರಾಜ ಅರಸು ಅವರ ಜೀವನ ಸಾಧನೆ ಬಗ್ಗೆ ತಿಳಿಸಲು ಉತ್ತಮ ಉಪನ್ಯಾಸಕರನ್ನು ಆಹ್ವಾನಿಸಲು ತಿಳಿಸಿದ ಅವರು, ಕಾರ್ಯಕ್ರಮದಲ್ಲಿ ಯಾವುದೇ ರೀತಿಯ ಲೋಪವಾಗದಂತೆ ಅಚ್ಚುಕಟ್ಟಾಗಿ ಆಯೋಜಿಸಲು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ಸೂಚಿಸಿದರು. ಸಮುದಾಯದವರು, ವಿವಿಧ ಸಂಘಟನೆಗಳ ಪ್ರತಿನಿಧಿಗಳು ಹೆಚ್ಚಿನ ಪ್ರಮಾಣದಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಜಿಲ್ಲಾಧಿಕಾರಿಗಳು ಕೋರಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಆಶಾಪೂರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಚ್.ಜಿ.ಮಿರ್ಜಿ, ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ಜಿ.ಎಸ್.ಹಿತ್ತಲಮನಿ ಸೇರಿದಂತೆ ಸಮುದಾಯದ ಮುಖಂಡರಾದ ಶ್ರೀನಿವಾಸ ಬಳ್ಳಾರಿ ಹಾಗೂ ಇತರರು ಉಪಸ್ಥಿತರಿದ್ದರು.

# ಒಳಮೀಸಲು ಜಾರಿಗೆ ಆತುರದ ಕ್ರಮ ಬೇಡ–ಇಮ್ಮಡಿ ಸಿದ್ಧರಾಮಶ್ರೀ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.7–ನ್ಯಾಯಮೂರ್ತಿ ನಾಗಮೋಹನದಾಸ್ ಸಲ್ಲಿಸಿರುವ ಒಳಮೀಸಲು ವರದಿಯ ಅಂಗೀಕಾರಕ್ಕೂ ಮುನ್ನ ರಾಜ್ಯ ಸರ್ಕಾರ ಸಾರ್ವಜನಿಕ ಚರ್ಚೆಗೆ ಒಳಪಡಿಸಬೇಕು ಎಂದು ಭೋವಿ ಪೀಠದ ಜಗದ್ಗುರು ಇಮ್ಮಡಿ ಸಿದ್ಧರಾಮ ಸ್ವಾಮೀಜಿ ಹೇಳಿದ್ದಾರೆ.

ನಗರದಲ್ಲಿ ಭೋವಿ ಪೀಠದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 2011 ರ ಜನಗಣತಿ ಆಧಾರದ ಮೇಲೆ ಒಳಮೀಸಲು ನಿಗದಿಗೆ ಮುಂದಾಗಿರುವುದು ಅವೈಜ್ಞಾನಿಕ ಕ್ರಮ. 2011 ರ ಜನಗಣತಿ 2025 ಕ್ಕೆ ಸೂಕ್ತವಾಗದು. ಒಳಮೀಸಲು ನಿಗದಿ ವೈಜ್ಞಾನಿಕವಾಗಿ ನಡೆಯಬೇಕು. ಅಂದಾಗ ಎಲ್ಲ ಸಮುದಾಯಗಳಿಗೆ ನ್ಯಾಯ ಸಿಗಲು ಸಾಧ್ಯವಾಗಲಿದೆ ಎಂದರು.

ಪರಿಶಿಷ್ಟ ಜಾತಿಯ 101 ಸಮುದಾಯಗಳು ಕಳೆದ ಒಂದೂವರೆ ದಶಕದಿಂದ ನಿರಂತರ ಹೋರಾಟ ನಡೆಸುತ್ತ ಬಂದಿವೆ. ಇದೀಗ ಸರ್ಕಾರ ಪರಿಶಿಷ್ಟ ಜಾತಿ ವರ್ಗದಲ್ಲಿನ ಸಮುದಾಯಗಳಿಗೆ ಮೀಸಲು ನಿಗದಿಗೊಳಿಸಲು ರಚಿಸಿದ್ದ ನ್ಯಾಯಮೂರ್ತಿ ನಾಗಮೋಹನ್ ಅವರ ವರದಿಯನ್ನು ಸಂಪುಟದಲ್ಲಿ ಮಂಡನೆ ಮಾಡಲು ಮುಂದಾಗಿದೆ. ಸಂಪುಟದಲ್ಲಿ ವರದಿ ಮಂಡನೆ ಬಳಿಕ ಅದನ್ನು ಸಾರ್ವಜನಿಕ ಚರ್ಚೆಗೆ ಒಳಪಡಿಸಬೇಕು ಎಂದು ಅವರು ಆಗ್ರಹಿಸಿದರು.

2011 ರ ಜನಸಂಖ್ಯೆ ಆಧಾರದ ಮೇಲೆ ಮೀಸಲು ನಿಗದಿ ವೈಜ್ಞಾನಿಕವಾಗಿ ಆಗದು. 2011 ರಲ್ಲಿ ಇದ್ದ ಜನಸಂಖ್ಯೆಗೂ 2025 ರ ಜನಸಂಖ್ಯೆಗೆ ಸಾಕಷ್ಟು ವ್ಯತ್ಯಾಸವಿದೆ. ಹಾಗಾಗಿ ರಾಜ್ಯ ಸರ್ಕಾರ ಕೇಂದ್ರ ಸರ್ಕಾರದ ಜನಸಂಖ್ಯೆ ವರದಿ ಬಂದ ಬಳಿಕ, ವೈಜ್ಞಾನಿಕ ರೀತಿಯಲ್ಲಿ ಅಧ್ಯಯನ ಮಾಡಿ ಒಳಮೀಸಲು ಜಾರಿಗೆ ತರಬೇಕು ಎಂದು ಶ್ರೀಗಳು ಹೇಳಿದರು.

ಸದ್ಯದ ಒಳಮೀಸಲು ನಿಗದಿ ಬಗೆಗೆ ಸಾಕಷ್ಟು ಅಸಮಾಧಾನವಿದೆ ಎಂದ ಇಮ್ಮಡಿ ಸಿದ್ಧರಾಮ ಸ್ವಾಮೀಜಿ, ಕಳೆದ 2023ರ ಚುನಾವಣೆಯಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವಲ್ಲಿ ಶಕ್ತಿ ತುಂಬುವ ಕೆಲಸ ಮಾಡಿದವರ ಶಕ್ತಿ ಕುಂದಿಸುವ ಕೆಲಸ ಮಾಡಬಾರದು. ಸ್ಪೃಶ್ಯ, ಅಸ್ಪ್ರಶ್ಯ ಪದಗಳ ಬಳಕೆ ವರದಿಯಲ್ಲಿ ಆಗಬಾರದು. ಒಳಮೀಸಲು ಜಾರಿ ವಿಷಯದಲ್ಲಿ ಸರ್ಕಾರ ತರಾತುರಿ ಕ್ರಮಕ್ಕೆ ಮುಂದಾಗಬಾರದು ಎಂದರು.

ವರದಿಯನ್ನು ಸಾರ್ವಜನಿಕ ಚರ್ಚೆಗೆ ಒಳಪಡಿ ಸಿದ ವೇಳೆ ಬರುವ ತಕರಾರುಗಳನ್ನು ಸ್ವೀಕರಿಸಿ, ಅವುಗಳ ಕುರಿತು ಚರ್ಚೆಗೆ ವಿಶೇಷ ಅಧಿವೇಶನ ಕರೆದು ಎಲ್ಲ ಶಾಸಕರ ಅಭಿಪ್ರಾಯ ಪಡೆಯಬೇಕು. ನಿಖರ ಜನಸಂಖ್ಯೆ ಮಾಹಿತಿ ಪಡೆದು ಸ್ಪಷ್ಟ ನಿರ್ಧಾರಕ್ಕೆ ಬರಬೇಕು. ದುಡುಕಿನಲ್ಲಿ ಹಣೆ ಬರಹ ಬರೆಯುವುದು ಬೇಡ ಎಂದು ಅವರು ಹೇಳಿದರು.

# ಯುವನಿಧಿ ಯೋಜನೆಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.7–ಕಳೆದ 2022–23 ಮತ್ತು 2023–24ರಲ್ಲಿ ಪದವಿ, ಡಿಪ್ಲೋಮಾ, ಸ್ನಾತ್ಕೋತ್ತರ ಪದವಿ ಅಥವಾ ಇಂಜಿನಿಯರಿಂಗ್ ಪೂರೈಸಿ 6 ತಿಂಗಳಾದರೂ ಉದ್ಯೋಗವಿಲ್ಲದ ಮತ್ತು ಉನ್ನತ ವ್ಯಾಸಂಗ ಮುಂದುವರಿಸದ ಅಭ್ಯರ್ಥಿಗಳು ಸೇವಾಸಿಂಧು ಪೋರ್ಟಲ್ (https://sevasindhu.karnataka.gov.in) ಮೂಲಕ ಯುವನಿಧಿ ಯೋಜನೆ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಈ ಯೋಜನೆಯಡಿ ಪದವಿಗೆ 3 ಸಾವಿರ ರೂ, ಡಿಪ್ಲೋಮಾಗೆ 1500 ರೂ.ಗಳ ಭತ್ಯೆ ನೀಡಲಾಗುತ್ತದೆ. ಈಗಾಗಲೇ ಲಾಭ ಪಡೆಯುತ್ತಿರುವವರು, ನೇರ ನಗದು ವರ್ಗಾವಣೆಗೆ ತ್ರೈಮಾಸಿಕ ಸ್ವಯಂ ಘೋಷಣೆಯನ್ನು ಮೇ, ಆಗಸ್ಟ್, ನವೆಂಬರ್, ಫೆಬ್ರವರಿಯಲ್ಲಿ 1 ರಿಂದ 25ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ಕಚೇರಿ (08354–235337) ಯನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಯಿಯ ಎದೆಹಾಲಿನಲ್ಲಿ ರೋಗ ನಿರೋಧಕ ಶಕ್ತಿಯಿದೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.7–ತಾಯಿಯ ಎದೆಹಾಲಿನಿಂದ ಶಿಶುವಿನ ಸದೃಢ ಬೆಳವಣಿಗೆಗೆ ಅಗತ್ಯವಾದ ಪೋಷಕಾಂಶಗಳು ದೊರೆಯುವುದಲ್ಲದೇ, ಮಕ್ಕಳಲ್ಲಿ ರೋಗನಿರೋಧಕ ಶಕ್ತಿ ವೃದ್ಧಿಸುತ್ತದೆ ಎಂದು ಶಿರೂರಿನ ಶಿವಗಂಗಾ ಆಸ್ಪತ್ರೆಯ ಚಿಕ್ಕಮಕ್ಕಳ ತಜ್ಞೆ ಡಾ.ಅರ್ಪಣಾ ಕೋರಿ ಹೇಳಿದರು.

ತಾಲೂಕಿನ ನೀಲಾನಗರದ ದುಗಾದೇವಿ ದೇವಸ್ಥಾನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಇಲಾಖೆ ಹಾಗೂ ಶಿರೂರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದೊಂದಿಗೆ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸ್ತನ್ಯಪಾನ ಸಾಂಕ್ರಾಮಿಕ ರೋಗದ ವಿರುದ್ಧ ಹೋರಾಟಕ್ಕೆ ಹೆಚ್ಚು ಪರಿಣಾಮಕಾರಿಯಾಗಿದೆ. ಮಗು ಜನಿಸಿದ ಒಂದು ಘಂಟೆಯೊಳಗೆ ಹಾಲುಣಿಸಲು ಪ್ರಾರಂಭಿಸಿ ಆರು ತಿಂಗಳವರೆಗೆ ಕೇವಲ ತಾಯಿಯ ಎದೆಹಾಲು ನೀಡುಬೇಕು. ತಾಯಿಯ ಎದೆಹಾಲಿನಲ್ಲಿ ಶಿಶುವಿನ ಸದೃಢ ಬೆಳವಣಿಗೆ ಅಗತ್ಯವಾದ ಪೋಷಕಾಂಶಗಳು, ವಿಟ್ಯಾಮಿನ್, ಖನಿಜಾಂಶಗಳು ಅಡಕವಾಗಿವೆ ಎಂದು ಡಾ.ಕೋರಿ ಹೇಳಿದರು.

ಶಿರೂರ ಪ್ರಾಥಮಿಕ ಆರೋಗ ಕೇಂದ್ರದ ಆರೋಗ್ಯ ಸಂಕ್ಷಣಾಧಿಕಾರಿ ಎಸ್.ಎಸ್.ಮೆಣಸಗಿ ಮಾತನಾಡಿ, ತಾಯಿಯ ಎದೆಹಾಲು ಮಗುವಿಗೆ ಮೊದಲ ಲಸಿಕೆಯಾಗಿದ್ದು, ಎದೆಹಾಲು

# ಎತ್ತಿನ ಬಂಡಿ ಓಟದ ಸ್ಪರ್ಧೆಗಳಿಗೆ ಪ್ರೋತ್ಸಾಹಧನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.7–ಗ್ರಾಮೀಣ ಕ್ರೀಡೆಗಳ ಉತ್ತೇಜನಕ್ಕಾಗಿ ಸಂಘ–ಸಂಸ್ಥೆಗಳಿಂದ ಆಯೋಜಿಸಲಾಗುವ ಎತ್ತಿನ ಬಂಡೆ ಓಟ ಸ್ಪರ್ಧೆಗಳಿಗೆ ರಾಜ್ಯ ಸರ್ಕಾರದಿಂದ ಪ್ರೋತ್ಸಾಹಧನವಾಗಿ ಪ್ರತಿ ಸಂಸ್ಥೆಗೆ 2 ಲಕ್ಷ ರೂ.ಗಳ ಅನುದಾನ ನೀಡಲಾಗುತ್ತಿದೆ. ಅರ್ಹ ಸಂಘ–ಸಂಸ್ಥೆಗಳು ತಮ್ಮ ಅರ್ಜಿಗಳನ್ನು ಆಗಸ್ಟ 19 ರೊಳಗೆ ಸಲ್ಲಿಸಬೇಕು. ನಿಗದಿತ ದಿನಾಂಕದ ನಂತರ ಸಲ್ಲಿಸಲಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ದೂಸಂ. 08354–235896, 9739722700, 9945284771ಗೆ ಸಂಪರ್ಕಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆ.9 ಸರ್ಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.7–ರಾಜ್ಯ ಸರ್ಕಾರಿ ನೌಕರರ ಸಂಘದ ಬಾಗಲಕೋಟೆ ಜಿಲ್ಲಾ ಘಟಕ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳ ಸರ್ಕಾರಿ ನೌಕರರ ಎಸ್ಎಸ್ಎಲ್‌ಸಿ ಮತ್ತು ಪಿಯುಸಿಯಲ್ಲಿ ಅಧಿಕ ಅಂಕಗಳಿಸಿದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ನವನಗರದ ಕಲಾಭವನದಲ್ಲಿ ಆಗಸ್ಟ್ 9ರಂದು ಶನಿವಾರ ಮಧ್ಯಾಹ್ನ 3 ಗಂ–ಟೆಗೆ ಹಮ್ಮಿಕೊಂಡಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಬಳ್ಳಾರಿ ತಿಳಿಸಿದ್ದಾರೆ. ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪದ್ಮಶ್ರೀ ಪ್ರಶಸ್ತಿ ವಿಜೇತ ಹಾಗೂ ಗೋಂದಳಿ ಜನಪದ ಹಾಡುಗಾರ ಡಾ. ವೆಂಕಪ್ಪ ಅಂಬಾಜಿ ಸುಗತೇಕರ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಘದ ರಾಜ್ಯಾಧ್ಯಕ್ಷ ಸಿ. ಎಸ್.ಷಡಾಕ್ಷರಿ ವಹಿಸಲಿದ್ದಾರೆ. ಆರ್.ಎ.ಚೇತನ್‌ರಾಮ್ ಪ್ರೇರಣಾ ನುಡಿ ಹೇಳಿಲಿದ್ದು, ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪಂಚಾಯತ್ ಸಿಇಒ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯಲ್, ಅತಿಥಿಗಳಾಗಿ ನೌಕರರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಗಿರಿಗೌಡ, ಖಜಾಂಚಿ ವಿ.ವಿ.ಶಿವರುದ್ರಯ್ಯ, ಗೌರವಾಧ್ಯಕ್ಷ ಎಸ್. ಬಸವರಾಜು, ಹಿರಿಯ ಉಪಾಧ್ಯಕ್ಷರಾದ ನಾಗರಾಜ ಜುಮ್ಮನ್ನವರ, ಎನ್. ನರಸಿಂಹರಾಜು, ಆರ್. ಮೋಹನಕುಮಾರ್, ಶಂಭುಗೌಡ ಎಸ್. ಆಗಮಿಸಲಿದ್ದು, ವಿಜಯಪುರ ಜಿಲ್ಲಾಧ್ಯಕ್ಷ ಸುರೇಶ್ ಶೆಡಶ್ಯಾಳ, ರಾಜ್ಯ ಉಪಾಧ್ಯಕ್ಷ ಶಿವಾನಂದ ಮಂಗಾನವರ ಉಪಸ್ಥಿತರಿರುವರು ಎಂದು ಬಳ್ಳಾರಿ ತಿಳಿಸಿದರು.

ಅವಳಿ ಜಿಲ್ಲೆಗಳಿಂದ 415 ಕ್ಕೂ ಹೆಚ್ಚು ಮಕ್ಕಳು ಪ್ರತಿಭಾ ಪುರಸ್ಕಾರ ಪಡೆಯಲಿದ್ದಾರೆ ಎಂದು ಅಧ್ಯಕ್ಷರು ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಸಂಘದ ಪದಾಧಿಕಾರಿಗಳಾದ ಸಂಜೀವರಡ್ಡಿ ಸತ್ಯರಡ್ಡಿ, ವಿ.ಎಲ್.ವಾಲೀಕಾರ, ಗೋಪಾಲ ನೀಲನಾಯಕ, ಎಸ್. ಎಸ್.ಸಾರಂಗಮತ, ಸುರೇಶ ಇಂಜಗನೇರಿ, ಬಿ.ಟಿ.ಕೋವಳ್ಳಿ ಇದ್ದರು.

# ಆ.9 ದಿ.ಜಿ.ಎಚ್.ಛಬ್ಬಿ ಸಂಸ್ಮರಣಾ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.7–ಹಿರಿಯ ವಕೀಲ ದಿ.ಗೋಪಾಲರಾವ ಛಬ್ಬಿ ಅವರ ಸ್ಮರಣಾರ್ಥ ಬಿ.ವಿ.ವಿ. ಸಂಘದ ಎಸ್.ಸಿ.ನಂದಿಮಠ ಕಾನೂನು ಮಹಾವಿದ್ಯಾಲಯ ಮತ್ತು ಜಿ.ಎಚ್. ಛಬ್ಬಿ ಅಸೋಸಿಯೇಟ್ಸ್ ಬಾಗಲಕೋಟ ಇವರ ಸಂಯುಕ್ತ ಆಶ್ರಯದಲ್ಲಿ ಆ.9 ಶನಿವಾರ ವಿದ್ಯಾಗಿರಿಯ ಬಸವೇಶ್ವರ ಇಂಜನಿಯರಿಂಗ್ ಗ್ಯಾಲರಿ ಹಾಲ್‌ನಲ್ಲಿ ಜಿ.ಎಚ್. ಛಬ್ಬಿ ಸಂಸ್ಮರಣಾ ದಿನವನ್ನು ಆಯೋಜಿಸಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಕರ್ನಾಟಕ ಕಾನೂನು ಆಯೋಗದ ಅಧ್ಯಕ್ಷ ಗೌರವಾನ್ವಿತ ನ್ಯಾಯಮೂರ್ತಿ ಅಶೋಕ ಬಿ. ಹಿಂಚಗೇರಿ ನೆರವೇರಿಸಲಿದ್ದು, ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶ ಗೌರವಾನ್ವಿತ ನ್ಯಾಯಮೂರ್ತಿ ಹಂಚಾಟೆ ಸಂಜೀವಕುಮಾರ ಅಧ್ಯಕ್ಷತೆ ವಹಿಸಲಿದ್ದಾರೆ. ಅತಿಥಿಗಳಾಗಿ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ಅಧ್ಯಕ್ಷ ಆರ್.ಬಿ.ಬೂದಿಹಾಳ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎನ್.ವ್ಹಿ.ವಿಜಯ ಆಗಮಿಸಲಿದ್ದು, ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಉಪಸ್ಥಿತರಿರುವರು. ಕಾರ್ಯಕ್ರಮದಲ್ಲಿ ಬಿ.ವ್ಹಿ.ವ್ಹಿ.ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ ಮತ್ತು ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ, ಕಾನೂನು ಮಹಾವಿದ್ಯಾಲಯದ ಪ್ರಾಚಾರ್ಯೆ ಡಾ.ಎಂ.ಪಿ.ಚಂದ್ರಿಕಾ ಹಾಗೂ ಶ್ರೀನಿವಾಸ ಛಬ್ಬಿಯವರ ಕುಟುಂಬಸ್ಥರು, ನ್ಯಾಯಾಧೀಶರು, ವಕೀಲರು, ಮಹಾವಿದ್ಯಾಲಯದ ಎಲ್ಲ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ.

ನಂತರ ನಡೆಯುವ ಗೋಷ್ಠಿಯಲ್ಲಿ 'ಪುನರ್ವಸತಿ ಮತ್ತು ಪುನರ್ವ್ಯವಸ್ಥೆ ಕಾಯ್ದೆ, 2013ರ ಅಡಿಯಲ್ಲಿ ನ್ಯಾಯಯುತ ಪರಿಹಾರ ಮತ್ತು ಪಾರದರ್ಶಕತೆಯ ಹಕ್ಕು' ಎಂಬ ವಿಷಯದ ಕುರಿತು ಜಿಲ್ಲಾ ನ್ಯಾಯಾಧೀಶರಾದ ಸುನೀಲ ಶೆಟ್ಟರ ಉಪನ್ಯಾಸ ನೀಡಲಿದ್ದು, ವೇದಿಕೆಯ ಮೇಲೆ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶ್ರೀಮತಿ ಫೈ–ರೋಜಾ ಉಕ್ಕಲಿ, ಮತ್ತು ಹಿರಿಯ ವಕೀಲ ಕೆ.ಜಿ.ಪುರಾಣಿಕಮಠ ಪಾಲ್ಗೊಳ್ಳುವರು.

# ಪುರಾಣ ಕಥೆಯ ನಾಗಭೂಷಣ–ಸಂಗಮ್ಮ ಮದುವೆ ಸಮಾರಂಭ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.7–ನಗರದ ವಿದ್ಯಾಗಿರಿಯ ಶ್ರೀ ಸಾಯಿ ಮಂದಿರದಲ್ಲಿ ನಡೆದಿರುವ ಪುರಾಣ ಚರಿತ್ರೆಯ ನಾಯಕ ನಾಗಭೂಷಣ ಹಾಗೂ ಸಂಗಮ್ಮ ಇವರ ಮದುವೆಯ ಸಮಾರಂಭ ಸಡಗರ ಸಂಭ್ರಮದಿಂದ ಜರುಗಿತು.

ಶ್ರಾವಣ ಮಾಸದ ನಿಮಿತ್ಯ ಸಂತೆಕೆಲೂರಿನ ಶ್ರೀ ಘನಮಠಾಧೀಶ್ವರರ ಚರಿತಾಮೃತ ಪುರಾಣದಲ್ಲಿ ಸೋಮವಾರ ಚರಿತ್ರೆ ನಾಯಕರ ಮದುವೆ ಸಮಾರಂಭ ಪೂಜ್ಯ ಶ್ರೀ ಡಾ. ಶಿವಯೋಗಿ ದೇವರ ನೇತೃತ್ವದಲ್ಲಿ ನಡೆಯಿತು.

ಸ್ವಾಮೀಜಿ ಪಾದಪೂಜೆ, ಬೀಗರನ್ನು ಇದಿರುಗೊಳ್ಳುವುದು, ದೇವತಾ ಹಾಗೂ ದೈವದ ಅಕ್ಷತಾ ಕಾರ್ಯಕ್ರಮಗಳನ್ನು ವರದಾನೇಶ್ವರಿ ಮಹಿಳಾ ಮಂಡಳದ ಸದಸ್ಯರು ನೆರವೇರಿಸಿಕೊಟ್ಟರು. ಕೆಲವು ಭಕ್ತರು ಬೀಗರಾಗಿ, ಸ್ವಲ್ಪ ಜನ ಹೆಣ್ಣಿನ ಕಡೆ ಬೀಗರಾಗಿ ವರಪೂಜೆ, ಧಾರೆ ಎರೆಯುವ ಕಾರ್ಯಕ್ರಮ ಮಾಡಿ ಸಂಭ್ರಮಿಸಿದರು. ಶ್ರೀಮಠದ ಅರ್ಚಕ ನಾಗೇಶ ಹಾಗೂ ಕುಮಾರ ಸ್ವಾಮಿಗಳು ಅಕ್ಷತಾ ಕಾರ್ಯಕ್ರಮ ನೆರವೇರಿಸಿಕೊಟ್ಟರು.

ಕಳೆದ 10 ದಿನಗಳಿಂದ ಬೆಳಗಾವಿಯ ಕಾರಂಜಿ ಮಠದ ಪೂಜ್ಯ ಶ್ರೀ ಡಾ.ಶಿವಯೋಗಿ ದೇವರು ಪುರಾಣ ಪ್ರವಚನ ಮಾಡುತ್ತಿದ್ದಾರೆ. ಕುಮಾರೇಶ್ವರ ವಿಶ್ವಧರ್ಮ ಶಾಂತಾಶ್ರಮದ ಅಧ್ಯಕ್ಷ ಜಿ.ಎನ್.ಪಾಟೀಲರು ಮದುವೆಯ ಸಮಾರಂಭದ ನಿಮಿತ್ಯ ಸರ್ವರಿಗೂ ಊಟದ ವ್ಯವಸ್ಥೆ ಮಾಡಿಸಿದ್ದರು.

ಗವಾಯಿಗಳಾದ ಮುತ್ತು ಗಾಣಿಗೇರ ಹಾಗೂ ಮಲ್ಲಿಕಾರ್ಜುನ ಹುನ್ನೂರ ಇವರಿಂದ ಸಂಗೀತ ಸೇವೆ ನಡೆಯಿತು. ಏನಾದರು ನೀನಾಗು ಮೊದಲು ಮಾನವನಾಗು, ಬಸವಣ್ಣನವರ ವಚನಗಳು, ಭಾವಗೀತೆಗಳು ಕೂಡಿದ ಜನರಿಗೆ ಸಂಗೀತದ ರಸದೌತನ ನೀಡಿದವು.

ಮದುವೆಯ ಸಮಾರಂಭದಲ್ಲಿ ಜಿ.ಎನ್.ಪಾಟೀಲ, ಎಮ್.ಎಸ್.ನಾಡಗೌಡ, ಎಸ್.ಜಿ.ದೊಡಮನಿ, ಎಮ್.ಎಮ್.ಜಿಗಜಿನ್ನಿ, ಎಮ್.ಎಸ್.ಗುಡಗುಂಟಿ, ಬಸವರಾಜ ಇಂಡಿ, ವ್ಹಿ.ಜಿ.ಮಠಪತಿ, ಹೊಳೆಬಸು ಓಣಿ, ಎಮ್.ಎಚ್.ಕಳ್ಳಿಗುಡ್ಡ, ಪಾರ್ವತೆಮ್ಮ ಬಳೂಲಮಠ, ವೀಣಾ ಮೋಟಗಿ, ಸರೋಜನಿ ಸತರಡ್ಡಿ, ಶ್ರೀಮತಿ ಕಾಯಿ ಹಾಗೂ ಮಹಿಳಾ ಮಂಡಳ ಸದಸ್ಯರು ಅಪಾರ ಭಕ್ತರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ವ್ಯಕ್ತಿತ್ವದ ವಿಕಾಸವೇ ಸಂಸ್ಥೆಯ ಧ್ಯೇಯ–ನರಗುಂದ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.7–ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಸಹಕಾರಿಯಾಗಬಲ್ಲ ವಾತಾವರಣ ಕಲ್ಪಿಸಿ ಅವರ ವ್ಯಕ್ತಿತ್ವದ ವಿಕಾಸವನ್ನು ಸಾಧಿಸುವುದೇ ಸಂಸ್ಥೆಯ ಗುರಿಯಾಗಿದೆ ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಪ್ರಥಮ ವರ್ಷದ ಬಿಎ, ಬಿಕಾಂ ಹಾಗೂ ಬಿಸಿಎ ವಿದ್ಯಾರ್ಥಿಗಳಿಗೆ ಗುರುವಾರ ಆಯೋಜಿಸಿದ್ದ ಓರಿಯಂಟೇಶನ್ ಕಾರ್ಯಕ್ರಮ 'ಸ್ಪಂದನ'ದಲ್ಲಿ ಅವರು ಮಾತನಾಡಿದರು.

ಕಾಲೇಜಿಗೆ ಹೊಸದಾಗಿ ಸೇರ್ಪಡೆಯಾದ ಯುವಶಕ್ತಿಯ ಅಭಿವೃದ್ಧಿಯೇ ಸಂಸ್ಥೆಯ ಗುರಿಯಾಗಿದ್ದು ಆ ದಿಶೆಯಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು. ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ಬೇಕು ಎಂಬ ಅಂಶವನ್ನು ಗಮನದಲ್ಲಿಟ್ಟುಕೊಂಡು ನೈತಿಕತೆ ಬೆಳೆಸುವ ಕಾರ್ಯಕ್ರಮಗಳನ್ನು ಕಾಲೇಜಿನಲ್ಲಿ ಆಯೋಜಿಸಲಾಗುತ್ತಿದೆ ಎಂದು ನರಗುಂದ ಹೇಳಿದರು.

ಪೈಪೋಟಿಯನ್ನು ಸಮರ್ಥವಾಗಿ ಎದುರಿಸಲು ಸಂವಹನ ಮತ್ತು ಕಂಪ್ಯೂಟರ ಕೌಶಲಗಳನ್ನು ಬೆಳೆಸಿಕೊಳ್ಳಬೇಕು. ಶ್ರದ್ಧೆ, ಪರಿಶ್ರಮ ಹಾಗೂ ಪ್ರಾಮಾಣಿಕ ಪ್ರಯತ್ನದಿಂದ ಮಾತ್ರ ಯಶ ಸಾಧ್ಯ ಎಂಬ ಅಂಶವನ್ನು ಅರಿತು ಮುನ್ನಡೆಯಬೇಕು ಎಂದು ಹೇಳಿದ ಪ್ರಾಚಾರ್ಯರು, ಕಾಲೇಜಿನಲ್ಲಿ ಲಭ್ಯವಿರುವ ಸೌಲಭ್ಯಗಳನ್ನು ವಿದ್ಯಾರ್ಥಿಗಳು ಸಮರ್ಪಕವಾಗಿ ಬಳಸಿಕೊಳ್ಳಬೇಕು. ಶಿಸ್ತನ್ನು ಅಳವಡಿಸಿಕೊಂಡು ಕಾಲೇಜಿನ ಹಿರಿಮೆ–ಗರಿಮೆಯನ್ನು ಹೆಚ್ಚಿಸುವ ಸಾಧನೆ ಮಾಡುವಂತೆ ಸಲಹೆ ನೀಡಿದರು.

ಆಯ್‌ಕ್ಯೂಎಸಿ ಸಂಯೋಜಕ ಡಾ.ಎಸ್.ಎಸ್.ಹಂಗರಗಿ ಸಾಂಸ್ಕೃತಿಕ ಚಟುವಟಿಕೆಗಳ ಬಗ್ಗೆ ವಿವರ ನೀಡಿದರೆ, ಗ್ರಂಥಾಲಯ ಸೌಲಭ್ಯ ಕುರಿತು ಡಿ.ಎಚ್.ಬಿರಾದಾರ, ಪ್ರವೇಶ ಹಾಗೂ ವಿವಿಧ ಸ್ಕಾಲರಶಿಪ್‌ಗಳ ಬಗ್ಗೆ ರಾಜು ಚವ್ಹಾಣ, ಎನ್ಎಸ್ಎಸ್ ಬಗ್ಗೆ ಎಸ್.ವಾಯ್.ಬೊಮ್ಮಣ್ಣವರ, ಎನ್‌ಸಿಸಿ ಬಗ್ಗೆ ಎಂ.ಡಿ.ಕೋರವಾರ ಮಾತನಾಡಿದರು.

ಶ್ವೇತಾ ಕುಲಕರ್ಣಿ ಪ್ರಾರ್ಥಿಸಿದರು. ಎಸ್.ಎಂ.ಜೇವೂರ ನಿರೂಪಿಸಿದರು. ಬಿ.ಡಿ.ಮಾದರ ವಂದಿಸಿದರು.

# ಶಾಶ್ವತ ಲೋಕ ಅದಾಲತನ ಮಹತ್ವ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಆಗಸ್ಟ್.07– ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೀದರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೀದರ ಜಿಲ್ಲಾ ವಕೀಲರ ಸಂಘ ಮತ್ತು ಬೀದರ ತಾಲೂಕ ಪಂಚಾಯತ, ಚಿಲರ್ಗಿ ಗ್ರಾಮ ಪಂಚಾಯತ ಸಂಯುಕ್ತಾಶ್ರಯದಲ್ಲಿ ಬುಧವಾರದಂದು ಚಿಲರ್ಗಿ ಗ್ರಾಮ ಪಂಚಾಯತದಲ್ಲಿ ಹಮ್ಮಿಕೊಂಡಿದ್ದ ಶಾಶ್ವತ ಲೋಕ ಅದಾಲತನ ಮಹತ್ವ ಮತ್ತು ಅದರ ಕಾರ್ಯವೈಖರಿ ಅಂಗವಾಗಿ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮಕ್ಕೆ ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಬೀದರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಕಾಶ ಅರ್ಜುನ ಬನಸೋಡೆ ಅವರು ದೀಪ ಬೇಳಗುವುದರ ಮೂಲಕ ಉದ್ಘಾಟಿಸಿದರು. ನಂತರ ಮಾತನಾಡಿ ಶಾಶ್ವತ ಲೋಕ ಅದಾಲತ್ನ ಮಹತ್ವ ಮತ್ತು ಅದರ ಕಾರ್ಯವೈಖರಿ ಬಗ್ಗೆ ಮಾತನಾಡಿದರು. ನಂತರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯನ್ನು ಭೇಟಿ ನೀಡಿ ಶಾಲೆಯನ್ನು ವೀಕ್ಷಣೆ ಮಾಡಿದರು ಮತ್ತು ಅಲ್ಲಿನ ಜನರು ತಿಳಿಸಿರುವಂತೆ ಅಲ್ಲಿನ ಬಡಾವಣೆಗಳಿಗೆ ಭೇಟಿ ನೀಡಿ ನೀರಿನ ಸಮಸ್ಯೆಯನ್ನು ಬಗೆಹರಿಸಿದ್ದರು

ಬೀದರ ತಾಲ್ಲೂಕ ಪಂಚಾಯತ ಸಹಾಯಕ ನಿರ್ದೇಶಕ (ಗ್ರಾ.ಉ.) ಸುಧೀಶಕುಮಾರ ಅಧ್ಯಕ್ಷತೆ ವಹಿಸಿ ಮಾತನಾಡಿದ್ದರು. ಉಪನ್ಯಾಸಕರಾಗಿ ಬೀದರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕುರಿತು ವಕೀಲರಾದ ಬಿ. ಕೃಷ್ಣಪ್ಪಾ ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಚಿಲರ್ಗಿ ಗ್ರಾಮ ಪಂಚಾಯತ ಪಿಡಿಓ ಪೂಜಾಶ್ರೀ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಿಬ್ಬಂದಿಗಳು, ಗ್ರಾಮ ಪಂಚಾಯತ ಸಿಬ್ಬಂಧಿ ವರ್ಗದವರು ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ನಾಯಿ ಕಡಿತ: ಬ್ರೀಮ್ಸ್‌ಗೆ ಜಿಲ್ಲಾಧಿಕಾರಿ ಭೇಟಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಆಗಸ್ಟ್.07–ಚಿಟಗುಪ್ಪಾ ತಾಲ್ಲೂಕಿನ ಮುನ್ನಾಏಖೇಳ್ಳಿ ಗ್ರಾಮದಲ್ಲಿ ಮೂವರು ನಿನ್ನೆ ನಾಯಿ ಕಡಿತದಿಂದ ಗಂಭೀರವಾಗಿ ಗಾಯಗೊಂಡು ಬ್ರೀಮ್ಸ್‌ನಲ್ಲಿ ದಾಖಲಾದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಭೇಟಿ ನೀಡಿ ಗಾಯಾಳುಗಳ ಆರೋಗ್ಯ ವಿಚಾರಿಸಿದರು.

ರೇಬಿಸ್ ಗೆ ನೀಡಲಾಗುವ ರೇಬೋಪೋರ ಹಾಗೂ ಇಮ್ಯುನೋಗ್ಲೊಬಿನ್ ಇಂಜೆಕ್ಷನ್‌ಗಳು ಕೊರತೆಯಾಗದಂತೆ ಕನಿಷ್ಠ 100 ವೈಲ್ಸಗಳನ್ನು ಇಡುವಂತೆ ಜಿಲ್ಲಾಧಿಕಾರಿಗಳು ಬ್ರಿಮ್ಸ್ ವೈದ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ತುರ್ತು ಪರಿಸ್ಥಿತಿಯಲ್ಲಿ ಎಲ್ಲ ಅಗತ್ಯ ಔಷಧಿಗಳು ಲಭ್ಯವಾಗಬೇಕು. ಔಷಧಿಗಳನ್ನು ಹೊರಗಡೆ ತರುವಂತೆ ಸೂಚಿಸಬಾರದೆಂದು ತಿಳಿಸಿದರು.

ಚರಣ ರೆಡ್ಡಿ ಬಾಲಕ ಗಂಭೀರ ಗಾಯಗೊಂಡ ಹಿನ್ನೆಲೆಯಲ್ಲಿ ತುರ್ತು ಚಿಕಿತ್ಸೆ ನೀಡಲಾಗಿದ್ದು, ದಾಖಲಿಸಿಕೊಳ್ಳಲಾಗಿದೆ. ಶಮಿತಾ ಹಾಗೂ ಈಶ್ವರಿ ಬಾಲಕಿಯರು ಚಿಕಿತ್ಸೆ ಪಡೆದು ತೆರಳಿದ್ದಾರೆ ಎಂದು ಬ್ರಿಮ್ಸ್ ನಿರ್ದೇಶಕರಾದ ಡಾ.ಶೇಟಕರ ತಿಳಿಸಿದ್ದಾರೆ.

# ಆ.11 ರಿಂದ ಆರನೇ ತರಗತಿ ಪ್ರವೇಶಕ್ಕೆ ಕೌನ್ಸಲಿಂಗ್

ಮಲ್ಲಮ್ಮ ನುಡಿ ವಾರ್ತೆ

ಬೀದರ. ಆಗಸ್ಟ್.07– ಸರಕಾರಿ ಆದರ್ಶ ವಿದ್ಯಾಲಯ ಜನವಾಡಾ ಶಾಲೆಯಲ್ಲಿ 2025–26ನೇ ಸಾಲಿಗೆ 6ನೇ ತರಗತಿ ಖಾಲಿ ಇರುವ ಸೀಟುಗಳಿಗೆ ನಾಲ್ಕನೇ ಸುತ್ತಿನ ಪ್ರವೇಶನವನ್ನು ಕೌನ್ಸಲಿಂಗ್ ಮೊಂಡ್ ಮೂಲಕ 2025ನೇ ಆಗಸ್ಟ್.11 ಹಾಗೂ 12 ರಂದು ಸಾಮಾನ್ಯ ಮೆರಿಟ್ ವಿದ್ಯಾರ್ಥಿಗಳಿಗೆ ಮತ್ತು 2025ನೇ ಆಗಸ್ಟ್.13 ಮತ್ತು 14 ರಂದು ಮೀಸಲಾತಿ ವರ್ಗವಾರು ಮೆರಿಟ್ ವಿದ್ಯಾರ್ಥಿಗಳಿಗೆ ಕೌನ್ಸಲಿಂಗ್ ನಡೆಯಲಿದೆ ಎಂದು ಜನವಾಡ ಸರಕಾರಿ ಆದರ್ಶ ವಿದ್ಯಾಲಯದ ಮುಖ್ಯ ಶಿಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9980496932, 8970224447 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

# ಕಾಲೇಜು + ಕೌಶಲ್ಯ = ಉದ್ಯೋಗಾವಕಾಶ

## ಕರ್ನಾಟಕದ ನೂತನ ಶಿಕ್ಷಣ ಮಾದರಿ!




- ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಕಲಿಕೆ ಹಂತದಲ್ಲಿಯೇ ಉದ್ಯೋಗ ತರಬೇತಿ
- ಬಿಎಫ್ಎಸ್ಐ, ಚಿಲ್ಲರೆ ವ್ಯಾಪಾರ, ಇ-ಕಾಮರ್ಸ್ ಮತ್ತಿತರ ಕ್ಷೇತ್ರಗಳನ್ನು ಒಳಗೊಂಡ ಕೈಗಾರಿಕಾ ಕ್ಷೇತ್ರಕ್ಕೆ ಅಗತ್ಯವಿರುವ ವಿಷಯಾಧಾರಿತ ಕೋರ್ಸ್‌ಗಳು
- 47 ಕಾಲೇಜುಗಳಲ್ಲಿ ಅನುಷ್ಠಾನ, 1,500+ ವಿದ್ಯಾರ್ಥಿಗಳು ದಾಖಲು
- ಯೋಜನೆ ಮತ್ತು ನೀತಿಗಳ ಸಂಶೋಧನಾ ಕೇಂದ್ರ (ಕ್ರಿಸ್ಪ್) ಮತ್ತು ಸೆಕ್ಟರ್ ಸ್ಕಿಲ್ ಕೌನ್ಸಿಲ್‌ಗಳ ಸಹಯೋಗದೊಂದಿಗೆ ಜಾರಿ
- ಉದ್ಯೋಗಾರ್ಹತೆ ಮತ್ತು ವಿಶ್ವಾಸಾರ್ಹತೆ ವೃದ್ಧಿಸಲು ಪ್ರಾಯೋಗಿಕ ಕಲಿಕೆ

ಇದು ಕೇವಲ ಪದವಿಯಲ್ಲ

## ಉದ್ಯೋಗಕ್ಕೆ ರಹದಾರಿ!



ಕರ್ನಾಟಕ ನವ ನಿರ್ಮಾಣಕ್ಕೆ

## ಗ್ಯಾರಂಟಿ ಸರ್ಕಾರ...

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ

ಗಡಿ ತಾಲ್ಲೂಕುಗಳಿಂದ ಪ್ರಕಟವಾಗುವ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು